ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 74
4–9–2025 ಗುರುವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 74

## ಸಂಪಾದಕೀಯ.....

## ನೈಜ ಸಮಸ್ಯೆಗಳತ್ತ ರಾಜಕಾರಣಿಗಳು ಮುಖ ಮಾಡುವುದು ನೈತಿಕ ಕರ್ತವ್ಯ



ದಾವಣಗೆರೆ ಜಿಲ್ಲೆಯ ಸಾಮಾಜಿಕ ಹಾಗೂ ಆರೋಗ್ಯ ಪರಿಸ್ಥಿತಿಯನ್ನು ಗಮನಿಸಿದಾಗ ಜನಪ್ರತಿನಿಧಿಗಳ ಜವಾಬ್ದಾರಿ ಯಾವ ದಿಕ್ಕಿನಲ್ಲಿ ನೆಲೆಯೂರಬೇಕು ಎಂಬ ಪ್ರಶ್ನೆ ಅನಿವಾರ್ಯವಾಗಿ ಎದುರಾಗುತ್ತದೆ. ಇತ್ತೀಚೆಗೆ ಗಣೇಶ ಚತುರ್ಥಿ ಮೆರವಣಿಗೆಯಲ್ಲಿ ಡಿಜೆ ಹಾಕಲು ಅನುಮತಿ ದೊರೆಯಬೇಕೆಂಬ ಹೋರಾಟವನ್ನು ಕೆಲವರು ಪ್ರಾಮುಖ್ಯವಾಗಿ ಮುಂದಿಟ್ಟಿದ್ದಾರೆ. ಆದರೆ, ಇದು ಸಮಾಜದ ನಿಜವಾದ ಸಮಸ್ಯೆಗಳಿಗೆ ಪರಿಹಾರವಲ್ಲ. ಅತಿಯಾದ ಶಬ್ದ, ಗದ್ದಲ ಹಾಗೂ ಡಿಜೆ ಸಂಸ್ಕೃತಿ ಯುವಕರಲ್ಲಿ ಆರೋಗ್ಯ ಸಮಸ್ಯೆಗಳನ್ನು ಉಂಟುಮಾಡುವುದಲ್ಲದೆ, ಹಿರಿಯ ನಾಗರಿಕರು, ರೋಗಿಗಳು, ಮಕ್ಕಳು ಎಲ್ಲರಿಗೂ ತೊಂದರೆ ತರುತ್ತದೆ. ಶಬ್ದ ಮಾಲಿನ್ಯವು ಕಿವಿಯ ಶಕ್ತಿಯನ್ನು ಹಾಳು ಮಾಡುವುದರೊಂದಿಗೆ ಹೃದಯ ಹಾಗೂ ನರ್ವಸ್ ಸಿಸ್ಟಮ್ ಮೇಲೆ ನೇರ ಪರಿಣಾಮ ಬೀರುತ್ತದೆ ಎಂಬುದು ವೈದ್ಯಕೀಯವಾಗಿ ಸಾಬೀತಾಗಿದೆ.

ಈ ಹಿನ್ನೆಲೆಯಲ್ಲಿ, ದಾವಣಗೆರೆ ಜಿಲ್ಲೆಯ ನೈಜ ಸಮಸ್ಯೆಗಳತ್ತ ಮುಖಮಾಡುವುದು ಜನಪ್ರತಿನಿಧಿಗಳ ನೈತಿಕ ಕರ್ತವ್ಯ. ಜಿಲ್ಲೆಯ ಜಿಲ್ಲಾ ಸರ್ಕಾರಿಕ ಆಸ್ಪತ್ರೆಯ ಸ್ಥಿತಿ ತುಂಬಾ ದುಸ್ಥಿತಿಯಲ್ಲಿದೆ. ಆಧುನಿಕ ಚಿಕಿತ್ಸಾ ಸಾಧನಗಳಲ್ಲಿ ಮೂಲಭೂತವಾಗಿರುವ ಎಂಆರ್ಐ ಸ್ಕ್ಯಾನಿಂಗ್ ಯಂತ್ರವೇ ಇಲ್ಲ. ಪರಿಣಾಮವಾಗಿ, ರೋಗಿಗಳು ಬೆಂಗಳೂರಿನಂತಹ ನಗರಗಳಿಗೆ ಅಥವಾ ಖಾಸಗಿ ಆಸ್ಪತ್ರೆಗೆ ಹೋಗಿ ದುಬಾರಿ ದುಡ್ಡು ತೇರಬೇಕಾಗುತ್ತದೆ. ಇದರಿಂದ ಬಡ ಹಾಗೂ ಮಧ್ಯಮ ವರ್ಗದ ಜನರಿಗೆ ಭಾರೀ ಆರ್ಥಿಕ ಒತ್ತಡ ಬರುತ್ತದೆ. ತುರ್ತು ಚಿಕಿತ್ಸೆಯಲ್ಲಿ ಕಾಲಮಿತಿಯೂ ಕಳೆದುಹೋಗುತ್ತದೆ.

ಇದೇ ರೀತಿ, ಆಸ್ಪತ್ರೆಯಲ್ಲಿ ಅಗತ್ಯವಾದ ಔಷಧಿ ಹಾಗೂ ಮಾತ್ರೆಗಳ ಕೊರತೆ ಬಡವರ ಜೀವವನ್ನು ಅಪಾಯಕ್ಕೆ ದೂಡುತ್ತಿದೆ. ಸರ್ಕಾರ ಉಚಿತ ಔಷಧಿ ವಿತರಣೆಗೆ ಹಲವು ಯೋಜನೆಗಳನ್ನು ಜಾರಿಗೊಳಿಸಿದರೂ, ನೆಲಮಟ್ಟದಲ್ಲಿ ಅವು ಫಲಕಾರಿ ಆಗಿಲ್ಲ. ಜನರು ಇನ್ನೂ ಖಾಸಗಿ ಮೆಡಿಕಲ್ ಅಂಗಡಿಗಳಲ್ಲಿ ದುಬಾರಿ ದರದಲ್ಲಿ ಔಷಧಿ ಖರೀದಿಸಬೇಕಾಗುತ್ತಿದೆ.

ಶಿಕ್ಷಣ ಕ್ಷೇತ್ರದಲ್ಲೂ ಜಿಲ್ಲೆಯ ಸ್ಥಿತಿ ತೃಪ್ತಿಕರವಾಗಿಲ್ಲ. ಅನೇಕ ಸರ್ಕಾರಿ ಶಾಲೆಗಳ ಮೂಲಸೌಕರ್ಯ ಹದಗೆಟ್ಟಿದೆ. ವಿದ್ಯಾರ್ಥಿಗಳಿಗೆ ಬೇಕಾದ ಶಿಕ್ಷಕರು, ಪಠ್ಯಸಾಮಗ್ರಿ, ಶುದ್ಧ ಕುಡಿಯುವ ನೀರು, ಶೌಚಾಲಯ ಸೌಲಭ್ಯಗಳ ಕೊರತೆ ಗಂಭೀರ ಸಮಸ್ಯೆಯಾಗಿಯೇ ಉಳಿದಿದೆ. ಗ್ರಾಮೀಣ ಪ್ರದೇಶಗಳಲ್ಲಿ ಮಕ್ಕಳು ಇನ್ನೂ ಗುಣಮಟ್ಟದ ಶಿಕ್ಷಣದಿಂದ ವಂಚಿತರಾಗುತ್ತಿದ್ದಾರೆ.

ಇಂತಹ ಸಮಸ್ಯೆಗಳ ನಡುವೆ ಜನಪ್ರತಿನಿಧಿಗಳು ಡಿಜೆ ಪರ ಹೋರಾಟ ನಡೆಸುವುದು ಸಾರ್ವಜನಿಕ ಹಿತಾಸಕ್ತಿಗೆ ವಿರುದ್ಧ. ನಿಜವಾದ ಹೋರಾಟ ಎಂದರೆ ಜಿಲ್ಲೆಯ ಆಸ್ಪತ್ರೆಗಳಲ್ಲಿ ತುರ್ತು ವೈದ್ಯಕೀಯ ಸೌಲಭ್ಯ ಒದಗಿಸುವುದು, ಶಾಲೆಗಳ ಮೂಲಸೌಕರ್ಯ ಸುಧಾರಿಸುವುದು, ಕುಡಿಯುವ ನೀರಿನ ಸಮಸ್ಯೆ ಪರಿಹರಿಸುವುದು, ನಿರುದ್ಯೋಗಿಗಳಿಗೆ ಉದ್ಯೋಗಾವಕಾಶ ಸೃಷ್ಟಿಸುವುದೇ ಆಗಬೇಕು.

ಜನರ ಆಶಾಭಾವನೆಗಳನ್ನು ಅರ್ಥಮಾಡಿಕೊಳ್ಳದ, ಕೇವಲ ಮನರಂಜನೆಯ ವಿಷಯಕ್ಕೆ ಒತ್ತು ನೀಡುವ ಹೋರಾಟಗಳು ಸಮಾಜವನ್ನು ದಾರಿ ತಪ್ಪಿಸುವಂತವು. ದಾವಣಗೆರೆ ಜಿಲ್ಲೆಗೆ ಬೇಕಾದದ್ದು ಡಿಜೆ ಅಲ್ಲ, ಬದಲಾಗಿ ಉತ್ತಮ ಆರೋಗ್ಯ ಸೇವೆ, ಗುಣಮಟ್ಟದ ಶಿಕ್ಷಣ ಹಾಗೂ ಮೂಲಭೂತ ಸೌಕರ್ಯ. ಜನಪ್ರತಿನಿಧಿಗಳು ಜನರ ನಿಜವಾದ ಸಮಸ್ಯೆಗಳಿಗೆ ಧ್ವನಿ ಎತ್ತಿದಾಗ ಮಾತ್ರ ಅವರ ಹೋರಾಟ ಅರ್ಥಪೂರ್ಣವಾಗುತ್ತದೆ.

**ಮಲ್ಲಿಕಾರ್ಜುನ ಕಬ್ಬೂರು**
ಸಂಪಾದಕರು

### ದಾವಣಗೆರೆಯಲ್ಲಿ ಎಸ್‌ಎಸ್ ಕೇರ್ ಟ್ರಸ್ಟ್ ವಿದ್ಯಾರ್ಥಿ ವಿಭಾಗದ "ಆರಂಭ"ಕ್ಕೆ ಚಾಲನೆ

# ವಿದ್ಯಾರ್ಥಿಗಳಿಗೆ ನಾಯಕತ್ವ,ಸೇವಾಗುಣ ಬೋಧಿಸಿದ ಡಾ.ಪ್ರಭಾ ಮಲ್ಲಿಕಾರ್ಜುನ್

**ದಾವಣಗೆರೆ:** ಎಸ್‌ಎಸ್ ಕೇರ್ ಟ್ರಸ್ಟ್ ಆರೋಗ್ಯ ಸೇವೆ ಹಾಗೂ ಸಮಾಜಮುಖಿ ಚಟುವಟಿಕೆಗಳ ಮೂಲಕ ಜನರ ಜೀವನದಲ್ಲಿ ಆಶಾಕಿರಣವಾಗಿದೆ. ಈ ಸಂಸ್ಥೆಯ ವಿಶೇಷತೆಯೆಂದರೆ ವಿದ್ಯಾರ್ಥಿಗಳು ಸ್ವಯಂಪ್ರೇರಿತವಾಗಿ ಮುಂದೆ ಬಂದು ಟ್ರಸ್ಟ್ ಜೊತೆಗೂಡಿ ಸೇವಾ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುತ್ತಿರುವುದು.ಇದು ವಿದ್ಯಾರ್ಥಿಗಳಲ್ಲಿ ನಾಯಕತ್ವ, ಕೌಶಲ್ಯ ಹಾಗೂ ಸೇವಾಭಾವ ಬೆಳೆಸುವ ಪಾಠಶಾಲೆಯಾಗಿದೆ ಎಂದು ಸಂಸದರು ಹಾಗೂ ಎಸ್ ಎಸ್ ಕೇರ್ ಟ್ರಸ್ಟ್ ನ ಲೈಫ್ ಟ್ರಸ್ಟಿಗಳಾದ ಡಾ.ಪ್ರಭಾ ಮಲ್ಲಿಕಾರ್ಜುನ್ ಹೇಳಿದರು.



ನಗರದ ಬಾಪೂಜಿ ಆಡಿಟೋರಿಯಂನಲ್ಲಿ ಎಸ್ ಎಸ್ ಕೇರ್ ಟ್ರಸ್ಟ್‌ನ ಸ್ಟೂಡೆಂಟ್ ವಿಂಗ್ ನಿಂದ ಬುಧವಾರ ಆಯೋಜಿಸಿದ್ದ "ಆರಂಭ" ಸಮಾರಂಭಕ್ಕೆ ಚಾಲನೆ ನೀಡಿ ಮಾತನಾಡಿದ ಸಂಸದರು ಕಳೆದ ಒಂದು ವರ್ಷದ ಅವಧಿಯಲ್ಲಿ ವಿದ್ಯಾರ್ಥಿ ವಿಭಾಗವು ಕೈಗೊಂಡಿದ್ದ "ಕ್ಯಾನ್ಸರ್ ಕಾಳಜಿ", "ಸಂಸಾಧನದಂತಹ" ಕಾರ್ಯಕ್ರಮಗಳ ಮೂಲಕ ಆರೋಗ್ಯ ಸಮಸ್ಯೆಗಳ ಮಾನವೀಯ ಅಂಶಗಳನ್ನು ಶ್ಲಾಘಿಸಿದರು. "ಜಲ ಉಳಿಸಿ " ಜೀವ ಉಳಿಸಿ" ಅಭಿಯಾನ, "ಟ್ರೀ ಆಫ್ ಹೋಪ್" ಮೂಲಕ 200 ಗಿಡಗಳ ನೆಡುವ ಕಾರ್ಯ, ರಕ್ತದಾನ ಶಿಬಿರ, ವಯನಾಡ್ ಭೂಕುಸಿತ ಪರಿಹಾರ ಕಾರ್ಯಗಳಲ್ಲಿ ಸಹಾಯ ಹಾಗೂ ಅಗತ್ಯ ಸಾಮಗ್ರಿಗಳನ್ನು ಕಳುಹಿಸುವಂತಹ ನೂರಾರು ಕಾರ್ಯಗಳಲ್ಲಿ ತೊಡಗಿಕೊಂಡು ವಿದ್ಯಾರ್ಥಿಗಳು ತಮ್ಮ ಸಾಮಾಜಿಕ ಜವಾಬ್ದಾರಿಯನ್ನು ತೋರಿಸಿದ್ದಾರೆ ಎಂದು ಪ್ರಶಂಸಿಸಿದರು.

ಅಲ್ಲದೆ, ಅನಾಥಾಶ್ರಮ, ವೃದ್ಧಾಶ್ರಮ ಮತ್ತು ದೃಷ್ಟಿಹೀನ ಶಾಲೆಗಳಿಗೆ ಭೇಟಿ ನೀಡಿ ನೆರವು ನೀಡಿದ ವಿದ್ಯಾರ್ಥಿಗಳ ಕಾರ್ಯವು ಹೃದಯಸ್ಪರ್ಶಿಯಾಗಿದೆ ಎಂದು ಹೇಳಿದರು. "ನನ್ನ ಜನ್ಮದಿನದಂದು ವಿದ್ಯಾರ್ಥಿಗಳು ದೃಷ್ಟಿಹೀನ ಮಕ್ಕಳಿಂದ ಬ್ರೈಲ್‌ನಲ್ಲಿ ಬರೆದ ಶುಭಾಶಯ ಸಂದೇಶವನ್ನು ಕೊಟ್ಟ ಕ್ಷಣವನ್ನು ಎಂದಿಗೂ ಮರೆಯಲಾಗದು" ಎಂದು ಅವರು ಭಾವುಕರಾದರು.

ಎಸ್ ಎಸ್ ಕೇರ್ ಟ್ರಸ್ಟ್ ನ ವಿದ್ಯಾರ್ಥಿ ವಿಭಾಗ ಆಯೋಜಿಸಿದ ಜ್ಞಾನದಗೋಡೆ ಕುರಿತು ಶ್ಲಾಘಿಸಿದ ಸಂಸದರು ಎಲ್ಲಾ ಸಂಸ್ಥೆಗಳಲ್ಲಿ ಈ ರೀತಿ ಜ್ಞಾನ ಹರಡುವ ಕಾರ್ಯ ಅಳವಡಿಸಿಕೊಳ್ಳಬೇಕು ಎಂದರು.

ಹೊಸ ತಂಡಕ್ಕೆ ಶುಭಾಶಯ ಕೋರಿದ ಅವರು ಈ ಸಂದರ್ಭದಲ್ಲಿ ಪ್ರಮಾಣವಚನ ಬೋಧಿಸಿದರು.

ಕಾರ್ಯಕ್ರಮದಲ್ಲಿ ಮಹಾತ್ಮ ಗಾಂಧಿಜಿಯವರ ಮಾತುಗಳನ್ನು ಉಲ್ಲೇಖಿಸಿದ ಅವರು, "ಇತರರಿಗೆ ಸೇವೆ ಮಾಡುವುದರಲ್ಲೇ ನಮ್ಮ ಬದುಕಿನ ನಿಜವಾದ ಅರ್ಥ ಇದೆ. ಸೇವೆಯ ಮೂಲಕವೇ ನೀವು ನಿಮ್ಮನ್ನು ಕಂಡುಕೊಳ್ಳಬೇಕು" ಎಂದು ವಿದ್ಯಾರ್ಥಿಗಳನ್ನು ಪ್ರೇರೇಪಿಸಿದರು.

ಈ ಸಂದರ್ಭದಲ್ಲಿ ಎಸ್ ಎಸ್ ಕೇರ್ ಟ್ರಸ್ಟ್ ಕೋರ್ ಕಮಿಟಿ ಸದಸ್ಯರುಗಳಾದ ಡಾ.ಮೂಗನಗೌಡ,ಡಾ.ಜಿ.ಎಸ್.ಲತಾ,ಡಾ.ಶುಭಾ ದಾವಳಗಿ, ಡಾ.ಅನಿತಾ,ವಿದ್ಯಾರ್ಥಿ ಘಟಕದ ಓಂ ದುಬೆ,ಟಿ.ಪ್ರಿಯಾ ಹಾಗೂ ಬಾಪೂಜಿ ಸಂಸ್ಥೆಯ ಕಾಲೇಜುಗಳ ಪ್ರಾಂಶುಪಾಲರುಗಳು ಉಪಸ್ಥಿತರಿದ್ದರು.

# ತೀವ್ರ ವಿರೋಧದ ನಡುವೆಯೂ ಬಾನು ಮುಷ್ತಾಕ್ ಅವರಿಗೆ ದಸರಾ ಉದ್ಘಾಟನೆಗೆ ಅಧಿಕೃತ ಆಹ್ವಾನ ನೀಡಿದ ಜಿಲ್ಲಾಡಳಿತ!

**ಹಾಸನ:** ವಿಶ್ವವಿಖ್ಯಾತ ಮೈಸೂರು ದಸರಾ ಉದ್ಘಾಟನಾ ಕಾರ್ಯಕ್ರಮಕ್ಕೆ ಬೂಕರ್ ಪ್ರಶಸ್ತಿ ವಿಜೇತೆ ಬಾನು ಮುಷ್ತಾಕ್ ಅವರನ್ನು ಆಯ್ಕೆ ಮಾಡಿರುವುದಕ್ಕೆ ತೀವ್ರ ವಿರೋಧ ವ್ಯಕ್ತವಾಗಿದೆ. ಇದರ ಮಧ್ಯೆ ಸೆಪ್ಟೆಂಬರ್ 22ರಂದು ನಡೆಯಲಿರುವ ದಸರಾ ಉದ್ಘಾಟನಾ ಕಾರ್ಯಕ್ರಮಕ್ಕೆ ಬಾನು ಮುಷ್ತಾಕ್ ಅವರಿಗೆ ಮೈಸೂರು ಜಿಲ್ಲಾಡಳಿತ ಅಧಿಕೃತ ಆಹ್ವಾನ ನೀಡಿದೆ. ಮೈಸೂರು ಜಿಲ್ಲಾಧಿಕಾರಿ ಲಕ್ಷ್ಮೀಕಾಂತ್ ರೆಡ್ಡಿ ಹಾಸನದಲ್ಲಿರುವ ಬಾನು ಮುಷ್ತಾಕ್ ಅವರ ಮನೆಗೆ ತೆರಳಿ ಮೈಸೂರು ದಸರಾ ಉದ್ಘಾಟನಾ ಕಾರ್ಯಕ್ರಮಕ್ಕೆ ಕುಟುಂಬ ಸಮೇತರಾಗಿ ದಸರಾಗೆ ಬರುವಂತೆ ಅಧಿಕೃತ ಆಹ್ವಾನ ನೀಡಿದ್ದಾರೆ. ಮೈಸೂರು ಪೇಟ ತೊಡಿಸಿ, ಶಾಲು ಹೊದಿಸಿ ಆನೆ ವಿಗ್ರಹ ನೀಡಿ ಆಹ್ವಾನ ಪತ್ರಿಕೆಯನ್ನು ನೀಡಿದರು. ದಸರಾ ಆಹ್ವಾನವನ್ನು ಪ್ರೀತಿಯಿಂದ ಸ್ವೀಕರಿಸಿದ ಬಾನು ಮುಷ್ತಾಕ್ ತಾವು ಕಾರ್ಯಕ್ರಮಕ್ಕೆ ಬರುವುದಾಗಿ ತಿಳಿಸಿದ್ದಾರೆ.



## ದಾವಣಗೆರೆ ಅಭಿವೃದ್ಧಿ ಸಹಿಸಲಾಗದೇ ಬಿ.ಪಿ. ಹರೀಶ್‌ರಿಂದ ಹತಾಶೆ ಮಾತು: ಗಜೇಂದ್ರ ಜಗನ್ನಾಥ ಕಿಡಿ



**ದಾವಣಗೆರೆ:** ದಾವಣಗೆರೆ ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಕಾಂಗ್ರೆಸ್ ಹಿರಿಯ ಶಾಸಕ ಶಾಮನೂರು ಶಿವಶಂಕರಪ್ಪ ಮನೆತನ ಕಟಿಬದ್ಧವಾಗಿದ್ದು, ಹಗಲಿರುಳು ಶ್ರಮಿಸುತ್ತಿರುವುದರಿಂದ ಹರಿಹರ ಬಿಜೆಪಿ ಶಾಸಕ ಬಿ. ಪಿ. ಹರೀಶ್ ಹತಾಶೆಗೊಂಡಿದ್ದಾರೆ ಎಂದು ದಾವಣಗೆರೆ ಉತ್ತರ ಬ್ಲಾಕ್ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ, 28 ಮತ್ತು 37ನೇ ವಾರ್ಡ್ ಪ್ರಬಲ ಟಿಕೆಟ್ ಆಕಾಂಕ್ಷಿ ಗಜೇಂದ್ರ ಜಗನ್ನಾಥ
ಹರಿಹರದಲ್ಲಿ ಅಭಿವೃದ್ಧಿ ಮಾಡದೇ ಬಿಜೆಪಿ ನಾಯಕರ ವಿರುದ್ಧವೇ ತೊಡೆ ತಟ್ಟಿ ಓಡಾಡುತ್ತಿರುವ ಹರೀಶ್ ಮೊದಲು ತನ್ನ ಕ್ಷೇತ್ರದ ಜನರ ಕಷ್ಟ, ನೋವಿಗೆ ಸ್ಪಂದಿಸಲಿ ಗಜೇಂದ್ರ ಜಗನ್ನಾಥ ಕಿಡಿಕಾರಿದ್ದಾರೆ.
ಶಾಮನೂರು ಕುಟುಂಬದ ಮೇಲೆ ಬಿ. ಪಿ. ಹರೀಶ್ ಮಾಡಿರುವ ಆರೋಪಗಳೆಲ್ಲವೂ ಸುಳ್ಳು. ಹರಿಹರ ತಾಲೂಕಿನಲ್ಲಿ ಜನರು ಸಂಕಷ್ಟ ಅನುಭವಿಸುತ್ತಿದ್ದಾರೆ. ಶಾಸಕರಾದ ಬಳಿಕ ಒಂದೇ ಒಂದು ಅಭಿವೃದ್ಧಿ ಕಾರ್ಯ ಮಾಡಿಲ್ಲ. ಬಿಜೆಪಿ ನಾಯಕರ ವಿರುದ್ಧ ನವದೆಹಲಿ, ಬೆಂಗಳೂರು, ಬೆಳಗಾವಿ, ದಾವಣಗೆರೆ ಸೇರಿದಂತೆ ಎಲ್ಲೆಂದರಲ್ಲಿ ಭಿನ್ನಮತೀಯ ಸಭೆಗೆ ಹೋಗುವ ಬಿ. ಪಿ. ಹರೀಶ್ ಗೆ ಶಾಮನೂರು ಶಿವಶಂಕರಪ್ಪರ ಕುಟುಂಬದ ಬಗ್ಗೆ ಮಾತನಾಡುವಷ್ಟು ನೈತಿಕತೆ ಉಳಿಸಿಕೊಂಡಿಲ್ಲ ಎಂದು ಹೇಳಿದ್ದಾರೆ.
ಎಸ್. ಎಸ್. ಮಲ್ಲಿಕಾರ್ಜುನ್ ಅವರು ಶಾಸಕರಾಗಿ, ಸಚಿವರಾಗಿ ಅಭಿವೃದ್ಧಿಗೆ ನೀಡಿರುವ ಕೊಡುಗೆ ಅಪಾರ. ಕುಂದುವಾಡ ಕೆರೆ, ಗಾಜಿನ ಮನೆ, ಡಾಂಬರು, ಕಾಂಕ್ರಿಟ್ ರಸ್ತೆಗಳ ಅಭಿವೃದ್ಧಿ ಸೇರಿದಂತೆ ಸರ್ವತೋಮುಖ ಅಭಿವೃದ್ಧಿಗೆ ಶ್ರಮಿಸಿದ್ದಾರೆ. ಶ್ರಮಿಸುತ್ತಲೂ ಇದ್ದಾರೆ. ಜಿಲ್ಲೆಯಲ್ಲಿ ಶಾಂತಿ ಸುವ್ಯವಸ್ಥೆ ಕಾಪಾಡಲು ಅಗತ್ಯ ಕ್ರಮ ಕೈಗೊಂಡಿದ್ದಾರೆ. ಯಾವಾಗಲೂ ಬೆಂಕಿ ಹಚ್ಚುವ ಗುಣ ಹೊಂದಿರುವ ಬಿ. ಪಿ. ಹರೀಶ್, ತನ್ನ ಪಕ್ಷದ ರಾಜ್ಯಾಧ್ಯಕ್ಷ ಬಿ. ವೈ. ವಿಜಯೇಂದ್ರ ಹಾಗೂ ಮಾಜಿ ಸಿಎಂ ಬಿ. ಎಸ್. ಯಡಿಯೂರಪ್ಪರ ವಿರುದ್ಧ ಮಸಲತ್ತು, ಸಂಚು ರೂಪಿಸಿದ್ದಂಥವರು. ಇಂಥವರ ಯೋಗ್ಯತೆ ಏನು ಎಂಬುದು ಗೊತ್ತಾಗುತ್ತದೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

## ನೇಮಕಾತಿಯಲ್ಲಿ ಬಿಐಇಟಿ ವಿದ್ಯಾರ್ಥಿಗಳ ಸಾಧನೆ

**ದಾವಣಗೆರೆ:** ನಗರದ ಬಾಪೂಜಿ ಇಂಜಿನಿಯರಿಂಗ್ ಮತ್ತು ತಾಂತ್ರಿಕ ಮಹಾವಿದ್ಯಾಲಯ ಕಾಲೇಜಿನ ವಿದ್ಯಾರ್ಥಿಗಳು ಕ್ಯಾಂಪಸ್ ನೇಮಕಾತಿಯಲ್ಲಿ ಸಾಧನೆಗೈದಿದ್ದಾರೆ.
ಈಚೆಗೆ ನಡೆದ ತೋಶಿಬಾ, ಬೆಂಗಳೂರು ಸಂಸ್ಥೆಯ ಕ್ಯಾಂಪಸ್ ಸಂದರ್ಶನದಲ್ಲಿ ಕಾಲೇಜಿನ ಒಟ್ಟು ನಾಲ್ಕು ವಿದ್ಯಾರ್ಥಿಗಳು, ಕಂಪ್ಯೂಟರ್ ಸೈನ್ಸ್ ವಿಭಾಗದ ಅಮೋಘ ಬಲಿಗ ಮತ್ತು ಅನ್ನೋಲ್ ಕೋಮಲ್ ಕುಂದ, ಮಾಹಿತಿ ಮತ್ತು ತಂತ್ರಜ್ಞಾನ ವಿಭಾಗದ ಎನ್. ಸಿಂಚನ ಗದುಗಿನಮಠ್ ಹಾಗೂ ಎಲೆಕ್ಟ್ರಾನಿಕ್ಸ್ ವಿಭಾಗದ ಜಿ. ಚಿನ್ಮಯಿ ಇವರುಗಳು ವಾರ್ಷಿಕ 7.5 ಲಕ್ಷ ವೇತನದೊಂದಿಗೆ ಆಯ್ಕೆಯಾಗಿದ್ದಾರೆ.
ಇದರೊಂದಿಗೆ ಇತ್ತೀಚಿಗೆ ನಡೆದ ರೋಶ್ ಎರೋಸ್ಪೇಸ್ ಸಂಸ್ಥೆಯ ಸಂಶೋಧನೆ ಮತ್ತು ಅಭಿವೃದ್ಧಿ ವಿಭಾಗ–ಕ್ಕೆ ಎಲೆಕ್ಟ್ರಾನಿಕ್ಸ್ ವಿಭಾಗದ ಇಬ್ಬರು ವಿದ್ಯಾರ್ಥಿಗಳು ಅಕ್ಷತಾ ಇಟ್ನಾಳ್ ಮತ್ತು ಎಸ್.ಸಿ ತೇಜಸ್ವಿನಿ ಇವರು ಮಾಸಿಕ ಸ್ಟೈಫಂಡ್ ಹತ್ತು ಸಾವಿರ ಹಾಗೂ ವಾರ್ಷಿಕ 5.5 ಲಕ್ಷ ವೇತನದೊಂದಿಗೆ ಆಯ್ಕೆಯಾಗಿದ್ದಾರೆ. ಜೊತೆಗೆ ಹನ್ನೊಂದು ವಿದ್ಯಾರ್ಥಿಗಳು, ಕಂಪ್ಯೂಟರ್ ಸೈನ್ಸ್ ವಿಭಾಗದಿಂದ ಆರು, ಮಾಹಿತಿ ಮತ್ತು ತಂತ್ರಜ್ಞಾನ ವಿಭಾಗದಿಂದ ನಾಲ್ಕು ಮತ್ತು ಎಲೆಕ್ಟ್ರಾನಿಕ್ಸ್ ವಿಭಾಗದಿಂದ ಒಬ್ಬ ವಿದ್ಯಾರ್ಥಿ ಲರ್ನ ಪೂ ಸಂಸ್ಥೆಗೆ ಉತ್ತಮ ವೇತನ ಪ್ಯಾಕೇಜ್‌ನೊಂದಿಗೆ ಆಯ್ಕೆಯಾಗಿದ್ದಾರೆ.

## ಕಡವೆ ಬೇಟೆ: ಇಬ್ಬರ ಬಂಧನ

**ಚಿಕ್ಕಮಗಳೂರು, ಸೆ.3:** ಕಡೂರು ತಾಲ್ಲೂಕು ಸಗನೀ ಬಸವನಹಳ್ಳಿ ಗ್ರಾಮದಲ್ಲಿ ಸೆಪ್ಟಂಬರ್ 1 ರಂದು ಕಡವೆ ಬೇಟೆಯಾಡಿದ ಆರೋಪದಲ್ಲಿ ಇಬ್ಬರನ್ನು ಬಂಧಿಸಲಾಗಿದೆ.

ಸಗನೀ ಬಸವನಹಳ್ಳಿ ಗ್ರಾಮದ ಗೋವಿಂದಪ್ಪ ಎಂಬುವವರ ಮಗ ಮಂಜುನಾಥ ಹಾಗೂ ಮುನಿಯ ಬೋವಿ ಎಂಬುವವರ ಮಗ ಮಂಜಾಬೋವಿ ಎಂಬುವವರೇ ಬಂಧಿತ ಆರೋಪಿಗಳು. ಆರೋಪಿಗಳು ಇತರರೊಂದಿಗೆ ಸೇರಿ ಬೇಟೆಯಾಡಿದ್ದು, ಈ ಬಗ್ಗೆ ಸುಳಿವರಿತ ಪೊಲೀಸರು ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದು, ಸ್ಥಳದಲ್ಲಿ ಪತ್ತೆಯಾದ ಕಡವೆ ಮಾಂಸ, ಧರ್ಮ ಹಾಗೂ ಇತರ ಪರಿಕರಗಳನ್ನು ವಶಪಡಿಸಿಕೊಳ್ಳಲಾಗಿದೆ.




# ನೂತನ ಬಸ್ ಮಾರ್ಗಕ್ಕೆ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ಚಾಲನೆ

## ದಾವಣಗೆರೆ, ಉಜ್ಜಿನಿಯಿಂದ ಕಲಬುರಗಿ, ಬೀದರ್‌ಗೆ ರಾಜಹಂಸ

**ದಾವಣಗೆರೆ :** ಕೆಎಸ್‌ಆರ್‌ಟಿಸಿಯಿಂದ ದಾವಣಗೆರೆ–ಜಗಳೂರು–ಉಜ್ಜಿನಿ–ಕಲಬುರಗಿ–ಬೀದರ್ ಮಾರ್ಗದಲ್ಲಿ ರಾಜಹಂಸ ಬಸ್ ಸೇವೆಯ ನೂತನ ಮಾರ್ಗಕ್ಕೆ ಸಂಸದರಾದ ಡಾ; ಪ್ರಭಾ ಮಲ್ಲಿಕಾರ್ಜುನ್ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು.



ಅವರು ಬುಧವಾರ ದಾವಣಗೆರೆ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಲ್ಲಿ ನೂತನ ರಾಜಹಂಸ ಬಸ್‌ಗೆ ಚಾಲನೆ ನೀಡಿದರು. ಬಸ್ ದಾವಣಗೆರೆ, ಜಗಳೂರು, ಉಜ್ಜಿನಿ, ಕೊಟ್ಟೂರು, ಕೂಡ್ಲಗಿ, ಹೊಸಪೇಟೆ, ಸಿಂಧನೂರು, ಲಿಂಗಸೂರು, ಕಲಬುರಗಿ, ಹುಮನಾಬಾದ್ ಮಾರ್ಗವಾಗಿ ಬೀದರ್ ತಲುಪಲಿದ್ದು ಇದೇ ಮಾರ್ಗವಾಗಿ ಪ್ರತಿನಿತ್ಯ ವಾಪಸ್ ಮತ್ತೊಂದು ಬಸ್ ಸಂಚರಿಸಲಿದೆ.

ಮಾರ್ಗದ ವಿವರ : ನೂತನ ಬಸ್ ದಾವಣಗೆರೆ ನಿಲ್ದಾಣದಿಂದ ಸಂಜೆ 5 ಗಂಟೆಗೆ ಹೊರಡಲಿದ್ದು, ಬೆಳಗ್ಗೆ 7.30ಕ್ಕೆ ಬೀದರ್ ತಲುಪಲಿದೆ. ಬೀದರ್‌ನಿಂದ ಸಂಜೆ 4.15 ಕ್ಕೆ ಹೊರಟು ಬೆಳಗ್ಗೆ 7.10ಕ್ಕೆ ದಾವಣಗೆರೆ ತಲುಪಲಿದೆ. ಮಾರ್ಗದ ಅಂತರ 572ಕಿ.ಮೀ ಇದ್ದು, ಪ್ರಯಾಣ ದರ ರೂ.834 ನಿಗದಿಪಡಿಸಿದೆ.

ಇದೇ ವಾಹನ ಉಜ್ಜಿನಿ ನಿಲ್ದಾಣದಿಂದ ಸಂಜೆ 7 ಕ್ಕೆ ಹೊರಟು ಬೆಳಗ್ಗೆ 5.20 ಕ್ಕೆ ಕಲಬುರಗಿ ತಲುಪಲಿದೆ. ನಂತರ ಕಲಬುರಗಿಯಿಂದ ಸಂಜೆ 6.30ಕ್ಕೆ ಹೊರಟು ಬೆಳಗ್ಗೆ 6 ಗಂಟೆಗೆ ಉಜ್ಜಿನಿ ತಲುಪಲಿದೆ. ಈ ಮಾರ್ಗವು 376 ಕಿ.ಮೀ ಅಂತರವಿದ್ದು, ಪ್ರಯಾಣ ದರ ರೂ.570 ನಿಗದಿಪಡಿಸಿದೆ.

ಬೀದರ್ ಬಸ್ ನಿಲ್ದಾಣದಿಂದ ಸಂಜೆ 4.15 ಹೊರಟು ಬೆಳಗ್ಗೆ 6ಕ್ಕೆ ಉಜ್ಜಿನಿ ತಲುಪಲಿದೆ. ಈ ಮಾರ್ಗವು 494 ಕಿ.ಮೀ ಅಂತರವಿದ್ದು, ಪ್ರಯಾಣ ದರ ರೂ. 732 ನಿಗದಿಪಡಿಸಲಾಗಿದೆ. ಸಾರ್ವಜನಿಕರು ಕೆಎಸ್‌ಆರ್‌ಟಿಸಿ ಬಸ್ ಸೇವೆ ಪಡೆಯಲು ಸಂಸದರು ತಿಳಿಸಿದರು.

ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ, ಕೆಎಸ್‌ಆರ್‌ಟಿಸಿ ಡಿಸಿ ಶಿವಕುಮಾರಯ್ಯ, ಮಾರ್ಗ ನಿಯಂತ್ರಣಾಧಿಕಾರಿ ಫಕ್ರುದ್ದೀನ್ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

# ಮುಕ್ತ, ನ್ಯಾಯಸಮ್ಮತ ಚುನಾವಣೆಗೆ ಆಗ್ರಹ

**ದಾವಣಗೆರೆ:** ಮುಕ್ತ ಹಾಗೂ ನ್ಯಾಯ ಸಮ್ಮತ ಚುನಾವಣೆ ನಡೆಸುವಂತೆ ಆಗ್ರಹಿಸಿ ಸೋಷಲಿಸ್ಟ್ ಯೂನಿಟಿ ಸೆಂಟರ್ ಆಫ್ ಇಂಡಿಯಾ (ಎಸ್‌ಯುಸಿಐ) ವತಿಯಿಂದ ನಗರದ ಗಾಂಧಿ ವೃತ್ತದಲ್ಲಿ ಪ್ರತಿಭಟನೆ ನಡೆಸಲಾಯಿತು.




ಇದೇ ವೇಳೆ ಎಸ್‌ಯುಸಿಐ ರಾಜ್ಯ ಸಮಿತಿ ಸದಸ್ಯೆ ಬಿ.ಆರ್. ಅಪರ್ಣಾ ಮಾತನಾಡಿ, ಮತಪಟ್ಟಿಯ ವಿಶೇಷ ತೀವ್ರತಮ ಪರಿಷ್ಕರಣೆಯಿಂದ ಮತ ಚಲಾವಣೆಯ ಹಕ್ಕಿನ ನಿರಾಕರಣೆ ನಿಲ್ಲಿಸಿ, ಮುಕ್ತವಾದ ಹಾಗೂ ನ್ಯಾಯ ಸಮ್ಮತ ಚುನಾವಣೆ ನಡೆಸಬೇಕೆಂದು ಒತ್ತಾಯಿಸಿದರು.

ಕೇಂದ್ರ ಚುನಾವಣಾ ಆಯೋಗ ಎಸ್‌ಐಆರ್ ಅಂದ್ರೆ ಮತದಾರ ಪಟ್ಟಿಯ ವಿಶೇಷ ತೀವ್ರತರ ಪರಿಷ್ಕರಣೆಯ ಹೆಸರಿನಲ್ಲಿ ಈ ದೇಶದ ನಾಗರಿಕನಿಗೆ ನೀನು ಈ ದೇಶದ ಪ್ರಜೆಯಲ್ಲ ಎಂದು ಧಿಕ್ಕರಿಸುತ್ತಿದೆ. ಇದು ಅತ್ಯಂತ ಅಪಾಯಕಾರಿ ಕ್ರಮವಾಗಿದೆ ಎಂದರು.

ಮತಪಟ್ಟಿಯಲ್ಲಿ ಹೆಸರು ಸೇರಿಸಲು ಆಧಾರ್ ಕಾರ್ಡ್, ರೇಷನ್ ಕಾರ್ಡ್ ಅಥವಾ ತಾವೇ ನೀಡಿರುವ ಮತದಾನದ ಗುರುತಿನ ಚೀಟಿ (ವೋಟರ್ ಐಡಿ) ಮುಂತಾದ ದಾಖಲೆಗಳು ಊರ್ಜಿತವಲ್ಲ. ಬದಲಿಗೆ ತಾನು ಹುಟ್ಟಿದ ಜನ್ಮ ಪ್ರಮಾಣ ಪತ್ರವನ್ನು ನೀಡಬೇಕು ಎನ್ನುತ್ತದೆ. ಅಷ್ಟೇ ಅಲ್ಲದೇ ತನ್ನ ಅಪ್ಪ ಮತ್ತು ಅಮ್ಮ ಇಬ್ಬರದೂ ಜನ್ಮ ಪ್ರಮಾಣ ಪತ್ರವನ್ನು ನೀಡಬೇಕೆಂದು ಚುನಾವಣಾ ಆಯೋಗ ಕೇಳುತ್ತಿದೆ. ಒಂದು ವೇಳೆ ಜನ್ಮ ಪ್ರಮಾಣ ಪತ್ರವನ್ನು ಕೊಡಲಾಗದಿದ್ದರೆ ನಿಮ್ಮನ್ನು ಮತದಾರರ ಪಟ್ಟಿಯಲ್ಲಿ ಸೇರಿಸಲು ಸಾಧ್ಯವಿಲ್ಲ ಎಂದು ಹೇಳುತ್ತಿದೆ. ಇದು ಅತ್ಯಂತ ಮೋಸದ ಕ್ರಮವಾಗಿದೆ ಎಂದು ದೂರಿದರು.

ದೇಶದಲ್ಲಿ ಶೇ. 70 ಕ್ಕೂ ಹೆಚ್ಚು ಅನಕ್ಷರಸ್ಥರು ಓದು, ವಿದ್ಯೆ ತಿಳಿಯದ ಬಡವರು. ಗ್ರಾಮೀಣ ಜನರು ಅಥವಾ ಕಾಡು ಮೇಡುಗಳಲ್ಲಿ ಬದುಕುತ್ತಿರುವ ಬುಡಕಟ್ಟು ಜನಾಂಗದವರು ಆಗಿರುವಾಗ ಅವರು ಜನ್ಮ ಪ್ರಮಾಣ ಪತ್ರವನ್ನು ಸಲ್ಲಿಸುವುದು ಹೇಗೆ ಸಾಧ್ಯ? ಅಂತಹ ಎಲ್ಲಾ ಬಡ ಜನರು, ಅನಕ್ಷರಸ್ಥರು ಮತದಾನ ಮಾಡುವ ಹಕ್ಕಿನಿಂದ ವಂಚಿತರಾಗುತ್ತಾರೆ.

## ಸೆಪ್ಟೆಂಬರ್ 5 ರ ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪುರಸ್ಕೃತರಿಗೆ ಸನ್ಮಾನ

**ದಾವಣಗೆರೆ :** ಸೆಪ್ಟೆಂಬರ್ 5 ರಂದು ನಡೆಯುವ ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿಗೆ ಆಯ್ಕೆಯಾದ ಪ್ರಾಥಮಿಕ ಹಾಗೂ ಪ್ರೌಢಶಾಲೆಯ 18 ಶಿಕ್ಷಕರಿಗೆ ಗೌರವಿಸಿ ಸನ್ಮಾನಿಸಲಾಗುತ್ತದೆ ಎಂದು ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಜಿ.ಕೊಟ್ರೇಶ್ ತಿಳಿಸಿದ್ದಾರೆ.
ಸೆಪ್ಟೆಂಬರ್ 5 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಶಾಮನೂರು ಶಿವಶಂಕರಪ್ಪ ಪಾರ್ವತಮ್ಮ ಸಮುದಾಯ ಭವನದಲ್ಲಿ ನಡೆಯುವ ಶಿಕ್ಷಕ ದಿನಾಚರಣೆಯ ಕಾರ್ಯಕ್ರಮದಲ್ಲಿ ಸನ್ಮಾನ ಸಮಾರಂಭ ಹಮ್ಮಿಕೊಳ್ಳಲಾಗಿದ್ದು, ಜಿಲ್ಲಾಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿಗೆ ಪ್ರಾಥಮಿಕ, ಹಿರಿಯ ಶಾಲಾ ವಿಭಾಗದಿಂದ 12 ಮತ್ತು ಪ್ರೌಢಶಾಲಾ ವಿಭಾಗದಿಂದ 6 ಶಿಕ್ಷಕರಿಗೆ ಪ್ರಶಸ್ತಿ ನೀಡಲಾಗುವುದು. ಉತ್ತಮ ಶಿಕ್ಷಕ ಪ್ರಶಸ್ತಿಗೆ ಆಯ್ಕೆಯಾದ ಶಿಕ್ಷಕರ ವಿವರ; ಕಿರಿಯ ಪ್ರಾಥಮಿಕ ಶಾಲಾ ವಿಭಾಗ: ಚನ್ನಗಿರಿ ತಾಲ್ಲೂಕಿನ ಸಂತೆಮೈದಾನದಲ್ಲಿರುವ ಸರ್ಕಾರಿ ಉ.ಹಿ.ಪ್ರಾಥಮಿಕ ಶಾಲೆಯ ಸ.ಶಿ. ಮೊಹಮ್ಮದ್ ಮುಹೀಬ್ ಉಲ್ಲಾ, ದಾವಣಗೆರೆ ಉತ್ತರ ವಲಯ ಹೆಬ್ಬಾಳು ಬಡಾವಣೆಯ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಸ.ಶಿಕ್ಷಕಿ ಗಾಯಿತ್ರಿ ಬಿ. ಐರಣಿ, ದಾವಣಗೆರೆ ದಕ್ಷಿಣವಲಯದ ಕಾವೇರಮ್ಮ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಸ.ಶಿ.ಅಕ್ಕಮಹಾದೇವಿ. ಕೆ.ಎಂ, ಹರಿಹರ ತಾಲ್ಲೂಕಿನ ಮಲೆಬೆನ್ನೂರು ಗ್ರಾಮದ ಶ್ರೀಮಾರುತಿ ಅನುದಾನಿತ ಹಿರಿಯ ಪಾಥಮಿಕ ಶಾಲೆಯ ಸ.ಶಿ.ಪರಮೇಶ್ವರಪ್ಪ.ಸಿ, ಹೊನ್ನಾಳಿ ತಾಲ್ಲೂಕಿನ ಸದಾಶಿವಪುರ ಗ್ರಾಮದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಸ.ಶಿ.ಮಲ್ಲಿಕಾರ್ಜುನ್ ಬಡಿಗೇರ್, ಜಗಳೂರು ತಾಲ್ಲೂಕಿನ ಗುರುಸಿದ್ದಾಪುರ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಸ.ಶಿ.ಪುಪ್ಪಾಲ

# ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ಮನೆಯಲ್ಲಿ ಕೆಲಸ ಮಾಡುವಾಗ ವಿಶೇಷ ಎಚ್ಚರ ವಹಿಸಿ. ಮನೆ ಬಳಕೆಯ ವಸ್ತುಗಳ ಯಾವುದೇ ಅಸಡ್ಡೆಯ ಬಳಕೆ ನಿಮಗೆ ಸಮಸ್ಯೆ ಉಂಟುಮಾಡಬಹುದು. ಇಂದು ನೀವು ಯಾತ್ರೆಯಲ್ಲಿ ಹೋಗುತ್ತಿದ್ದರೆ ನಿಮ್ಮ ಅಮೂಲ್ಯ ವಸ್ತುಗಳ ಬಗ್ಗೆ ಗಮನ ಹರಿಸಿ ಅವುಗಳನ್ನು ಕಡಿಯುವ ಸಧ್ಯತೆ ಇದೆ. ವಿಶೇಷವಾಗಿ ನಿಮ್ಮ ಹಣದಚೀಲವನ್ನು ಎಚ್ಚರಿಕೆಯಿಂದಿಡಿ.

### ವೃಷಭ ರಾಶಿ

ಆರೋಗ್ಯ ಚೆನ್ನಾಗಿರುತ್ತದೆ. ಹಣಕಾಸು ಸ್ಥಿತಿ ಊಹಾಪೋಹ ಅಥವಾ ಅನಿರೀಕ್ಷಿತ ಲಾಭದ ಮೂಲಕ ಸುಧಾರಿಸುತ್ತವೆ. ಮಕ್ಕಳು ನೀವು ಅವರೆಡೆಗೆ ಗಮನ ಹರಿಸಬೇಕೆಂಬ ಬೇಡಿಕೆಯಿಟ್ಟರೂ ಅವರು ನಿಮಗೆ ಸಂತೋಷ ತರುತ್ತಾರೆ. ಒಮ್ಮೆ ನಿಮ್ಮ ಜೀವನಸಂಗಾತಿಯನ್ನು ನೀವು ಭೇಟಿಯಾದ ಮೇಲೆ, ಬೇರೇನೂ ಬೇಕಾಗಿರುವುದಿಲ್ಲ. ನೀವು ಇಂದು ಈ ಸತ್ಯವನ್ನು ಅರಿತುಕೊಳ್ಳುತ್ತೀರಿ. ಸಹಭಾಗಿತ್ವದ ಅವಕಾಶಗಳು ಚೆನ್ನಾಗಿ ಕಂಡರೂ ಎಲ್ಲವನ್ನೂ ಸ್ಪಷ್ಟವಾಗಿ ತಿಳಿದುಕೊಳ್ಳಿ.

### ಮಿಥುನ ರಾಶಿ

ಸೃಜನಶೀಲ ಆಸಕ್ತಿಗಳು ನಿಮ್ಮನ್ನು ಶಾಂತವಾಗಿರಿಸುತ್ತವೆ. ಹಣದ ಪ್ರಾಮುಖ್ಯತೆ ನಿಮಗೆ ಚೆನ್ನಾಗಿ ಗೊತ್ತಿದೆ, ಆದ್ದರಿಂದ ಇಂದು ನಿಮ್ಮ ಮೂಲಕ ಉಳಿಸಲಾಗಿರುವ ಹಣ ನಿಮ್ಮ ತುಂಬಾ ಕೆಲಸಕ್ಕೆ ಬರಬಹುದು ಮತ್ತು ನೀವು ಯಾವುದೇ ದೊಡ್ಡ ಸಮಸ್ಯೆಯಿಂದ ಹೊರಬರಬಹುದು. ಒಬ್ಬ ಹಳೆಯ ಸ್ನೇಹಿತರು ಸಂಜೆ ನಿಮಗೆ ಕರೆ ಮಾಡುತ್ತಾರೆ ಮತ್ತು ಹಳೆಯ ನೆನಪುಗಳನ್ನು ತೆರೆದಿಡುತ್ತಾರೆ. ನಿಮ್ಮ ಸಂಗಾತಿಯ ಪ್ರೀತಿ ನಿಜವಾಗಿಯೂ ಭಾವಪೂರ್ಣವಾಗಿದೆ ಎಂದು ಇಂದು ನೀವು ತಿಳಿದುಕೊಳ್ಳುತ್ತೀರಿ. ಕೆಲಸದಲ್ಲಿ ಇಂದು ಎಲ್ಲವೂ ನಿಮ್ಮ ಪರವಾಗಿರುತ್ತವೆ

### ಕರ್ಕ ರಾಶಿ

ನೀವು ಜೀವನವನ್ನು ಸಂತೋಷದಿಂದ ಅನುಭವಿಸಲು ಸಿದ್ಧವಾಗುತ್ತಿದ್ದ ಹಾಗೆ ನಿಮಗೆ ಸಂತೋಷ ಹಾಗೂ ಆನಂದ. ನೀವು ಇಂದು ಗಣನೀಯ ಪ್ರಮಾಣದ ಹಣವನ್ನು ಸಹ ಹೊಂದಿರುತ್ತೀರಿ ಮತ್ತು ಅದರೊಂದಿಗೆ ಮನಸ್ಸಿನ ಶಾಂತಿ ಇರುತ್ತದೆ. ಕೌಟುಂಬಿಕ ಸಮಸ್ಯೆಗೆ ಮೊದಲ ಆದ್ಯತೆ ನೀಡಬೇಕು.ನೀವು ವಿಳಂಬವಿಲ್ಲದೇ ಇದನ್ನು ಚರ್ಚಿಸಬೇಕು, ಏಕೆಂದರೆ ಒಮ್ಮೆ ಇದನ್ನು ಬಗೆಹರಿಸಿದ ನಂತರ ಮನೆಯಲ್ಲಿನ ಜೀವನ ನಡೆಸಲು ಹೆಚ್ಚು ಸುಲಭವಾಗುತ್ತದೆ

### ಸಿಂಹ ರಾಶಿ

ಪತ್ನಿ ನೀವು ಹುರಿದುಂಬಿಸಬಹುದು. ನಿಮ್ಮ ಸ್ನೇಹಿತರೊಬ್ಬರು ಇಂದು ದೊಡ್ಡ ಸಾಲವನ್ನು ಕೇಳಬಹುದು, ನೀವು ಅವರಿಗೆ ಈ ಹಣವನ್ನು ಕೊಟ್ಟರೆ, ನೀವು ಆರ್ಥಿಕ ತೊಂದರೆಗೊಳಗಾಗಬಹುದು. ಹೊಸ ಕೌಟುಂಬಿಕ ಉದ್ಯಮವನ್ನು ಆರಂಭಿಸಲು ಪವಿತ್ರವಾದ ದಿನ. ಇದನ್ನು ಒಂದು ದೊಡ್ಡ ಯಶಸ್ಸಾಗಿಸಲು ಇತರ ಸದಸ್ಯರ ಸಹಾಯ ತೆಗೆದುಕೊಳ್ಳಿ. ನಿಮ್ಮ ಪ್ರೀತಿಪಾತ್ರರ. ವೃತ್ತಿಪರ ರಂಗದಲ್ಲಿ ಜವಾಬ್ದಾರಿ ಹೆಚ್ಚಾಗುವ ಸಾಧ್ಯತೆಯಿದೆ.

### ಕನ್ಯಾ ರಾಶಿ

ನಿಮ್ಮ ಭರವಸೆ ಒಂದು ಸಮೃದ್ಧ, ಸೂಕ್ಷ್ಮ ಪರಿಮಳಯುಕ್ತ ಮತ್ತು ಬೆರಗಗೊಳಿಸುವ ಹೂವಿನ ಹಾಗೆ ಅರಳುತ್ತದೆ. ಹಣಕಾಸಿನಲ್ಲಿ ಸುಧಾರಣೆ ದೀರ್ಘಕಾಲದಿಂದ ಬಾಕಿಯಿರುವ ನಿಮ್ಮ ಬಾಕಿಗಳು ಮತ್ತು ಬಿಲ್ಲುಗಳನ್ನು ಪಾವತಿಸುವುದನ್ನು ಅನುಕೂಲಕರವಾಗಿಸುತ್ತದೆ. ಕುಟುಂಬದ ಬಾಧ್ಯತೆಗಳನ್ನು ಮರೆಯಬೇಡಿ. ಅನಿರೀಕ್ಷಿತ ಪ್ರಣಯ ಭಾವ. ಸಹ ಕಾರ್ಮಿಕರು ಮತ್ತು ಕೈಕೆಳಗೆ ಕೆಲಸ ಮಾಡುವವರು ಚಿಂತೆ ಹಾಗೂ ಒತ್ತಡದ ಕ್ಷಣಗಳನ್ನು ತರುತ್ತಾರೆ.

### ತುಲಾ ರಾಶಿ

ನೀವು ಮನಸ್ಸಿನ ಸಮಸ್ಯೆಗಳನ್ನು ಬಗೆಹರಿಸಲು ನಿಮ್ಮ ಬುದ್ಧಿವಂತಿಕೆ, ಜಾಣತನ ಮತ್ತು ಸಭ್ಯತೆಯನ್ನು ಬಳಸಬೇಕಾಗುತ್ತದೆ. ನಿಮ್ಮ ಮೂಲಕ ಹಣವನ್ನು ಉಳಿಸಲು ಮಾಡಲಾಗಿರುವ ಪ್ರಯತ್ನವು ಇಂದು ವಿಫಲವಾಗಬಹುದು, ಹೇಗಾದರೂ, ನೀವು ಅದರ ಬಗ್ಗೆ ಚಿಂತಿಸಬೇಕಾಗಿಲ್ಲ, ಪರಿಸ್ಥಿತಿ
ಶೀಘ್ರದಲ್ಲೇ ಸುಧಾರಿಸುತ್ತದೆ. ಕುಟುಂಬದ ಸದಸ್ಯರೊಂದಿಗೆ ಒಂದು ಶಾಂತಿಯುತ ಮತ್ತು ಶಾಂತ ದಿನವನ್ನು ಆನಂದಿಸಿ ಜನರು ಸಮಸ್ಯೆಗಳೊಡನೆ ನಿಮ್ಮನ್ನು ಸಮೀಪಿಸಿದರೆ – ಅವರನ್ನು ನಿರ್ಲಕ್ಷಿಸಿ ಮತ್ತು ನಿಮ್ಮ ಮನಸ್ಸಿನಲ್ಲಿ ಈ ಚಿಂತೆ ಬೇರೂರಲು ಅವಕಾಶ ನೀಡಬೇಡಿ.

### ವೃಶ್ಚಿಕ ರಾಶಿ

ನಿಮ್ಮ ಸಂಜೆ ವಿಭಿನ್ನ ಪ್ರತಿಕ್ರಿಯೆಗಳಿಂದ ಗುರುತಿಸಲ್ಪಡುತ್ತದೆ ಹಾಗೂ ಇದು ನಿಮ್ಮನ್ನು ಉದ್ವಿಗ್ನವಾಗಿರಿಸಬಹುದು. ಆದರೆ ಹೆಚ್ಚು ಚಿಂತಿಸುವ ಅಗತ್ಯವಿಲ್ಲ – ನಿಮ್ಮ ಸಂತೋಷ ನಿಮಗೆ ನಿರಾಸೆಗಿಂತ ಹೆಚ್ಚು ಆನಂದ ನೀಡುತ್ತದೆ. ಕೆಲವು ದುಃಖದ ಸಮಯದಲ್ಲಿ ನೀವು ಸಂಗ್ರಹಿಸುವ ಹಣ ಮಾತ್ರ ನಿಮ್ಮ ಕೆಲಸಕ್ಕೆ ಬರುತ್ತದೆ ಎಂಬುದನ್ನು ಚೆನ್ನಾಗಿ ಅರ್ಥ ಮಾಡಿಕೊಳ್ಳಿ . ಆದ್ದರಿಂದ ಇಂದು ಹಣವನ್ನು ಸಂಗ್ರಹಿಸುವ ಬಗ್ಗೆ ಆಲೋಚಿಸಿ.

### ಧನು ರಾಶಿ

ಕುಡಿಯುವ ಮತ್ತು ತಿನ್ನುವಾಗ ಎಚ್ಚರದಿಂದಿರಿ. ಅಸಡ್ಡೆ ನಿಮಗೆ ಅನಾರೋಗ್ಯ ತರಬಹುದು. ಆರ್ಥಿಕವಾಗಿ ಇಂದು ನೀವು ಸಾಕಷ್ಟು ಬಲವಾಗಿ ಕಾಣುವಿರಿ, ಗ್ರಹ ಮತ್ತು ನಕ್ಷತ್ರಗಳ ಚಲನೆಯಿಂದ ಇಂದು ನಿಮಗಾಗಿ ಹಣವನ್ನು ಸಂಪಾದಿಸುವ ಅನೇಕ ಅವಕಾಶಗಳು ಉಂಟಾಗುತ್ತವೆ. ಕೌಟುಂಬಿಕ ಜವಾಬ್ದಾರಿಗಳು ಹೆಚ್ಚಾಗುತ್ತವೆ ಇವು ನಿಮ್ಮ ಮನಸ್ಸಿನ ಮೇಲೆ ಒತ್ತಡ ತರುತ್ತವೆ.

### ಮಕರ ರಾಶಿ

ನಿಮ್ಮ ಹಠಮಾರಿ ಧೋರಣೆ ಕೇವಲ ಸಮಯ ವ್ಯರ್ಥವಾದದ್ದರಿಂದ ಅದನ್ನು ನಿಮ್ಮ ಸಂತೋಷದ ಜೀವನದ ಸಲುವಾಗಿ ತೊರೆದುಬಿಡಿ. ಇಂದು ನೀವು ಅನಗತ್ಯವಾಗಿ ಹಣವನ್ನು ಖರ್ಚು ಮಾಡುವುದನ್ನು ನಿಲ್ಲಿಸಬೇಕು, ಇಲ್ಲದಿದ್ದರೆ ಅಗತ್ಯವಾದ ಸಮಯದಲ್ಲಿ ನಿಮ್ಮ ಹತ್ತಿರ ಹಣದ ಕೊರತೆ ಇರಬಹುದು. ಸಾಮಾಜಿಕ ಕೂಟಗಳಲ್ಲಿ ನಿಮ್ಮ ಹಾಸ್ಯದ ಪ್ರಕೃತಿ ನಿಮ್ಮನ್ನು ಜನಪ್ರಿಯಗೊಳಿಸುತ್ತದೆ. ಯಾರಿಗಾದರೂ ಅವರ ಪ್ರೀತಿ ಯಶಸ್ವಿಯಾಗುವುದನ್ನು ಸ್ವತಃ ದೃಶ್ಯೀಕರಿಸುವುದು ಸಹಾಯ ಮಾಡಿ.

### ಕುಂಭ ರಾಶಿ

ನೀವು ಬಹುಕಾಲದಿಂದ ಎದುರು ನೋಡುತ್ತಿದ್ದ ಜೀವನದ ಒತ್ತಡಗಳಿಂದ ಇಂದು ಶಮನ ಪಡೆಯುತ್ತೀರಿ. ಅವುಗಳನ್ನು ಶಾಶ್ವತವಾಗಿ ದೂರವಿಸಿರಿಸಲು ನಿಮ್ಮ ಜೀವನಶೈಲಿಯನ್ನು ಬದಲಿಸಲು ಇದು ಸರಿಯಾದ ಸಮಯ. ಇಂದು ನಿಮ್ಮ ಆಪ್ತರೊಂದಿಗೆ ಜಗಳವಾಗಬಹುದು ಮತ್ತು ವಿಷಯ ನ್ಯಾಯಾಲಯ ಕಚೇರಿಯ ವರೆಗೂ ಹೋಗಬಹುದು.ಇದರ ಕಾರಣದಿಂದ ನಿಮ್ಮ ವಿಶೇಷ ಹಣ ಖರ್ಚಾಗಬಹುದು.

### ಮೀನ ರಾಶಿ

ನೀವು ಮಾನಸಿಕವಾಗಿ ಅತ್ಯಂತ ದುರ್ಬಲರಾಗಿರುತ್ತೀರಿ – ಆದ್ದರಿಂದ ನೀವು ನೋವಿಗೀಡಾಗಬಹುದಾದ ಸಂದರ್ಭಗಳಿಂದ ದೂರ ಉಳಿಯಿರಿ. ನಿಮ್ಮ ಆರ್ಥಿಕ ಸ್ಥಿತಿ ಸುಧಾರಿಸಿದರೂ ಹಣದ ಹೊರಹರಿವು ನಿಮ್ಮ ಯೋಜನೆಗಳನ್ನು ಕಾರ್ಯರೂಪಕ್ಕೆ ತರುವಲ್ಲಿ ತೊಂದರೆಯುಂಟುಮಾಡುತ್ತದೆ. ಮನೆಯ ಸಮಸ್ಯೆಗಳಿಗೆ ತಕ್ಷಣ ಗಮನ ನೀಡುವ ಅಗತ್ಯವಿರುತ್ತದೆ.

# ಇಂದ್ರಿಯಗಳನ್ನು ನಿಗ್ರಹಿಸುವುದೇ ಸಂಯಮಧರ್ಮ




**ಗದಗ :** ಹಿಂಸೆಯನ್ನು ತ್ಯಾಗಮಾಡಿ ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿಸಿಕೊಂಡು ಸಕಲ ಜೀವರಾಶಿಗಳ ರಕ್ಷಣೆಗೆ ನೆರವಾಗುತ್ತ ಇಂದ್ರಿಯಗಳನ್ನು ಮತ್ತು ಮನಸ್ಸನ್ನು ನಿಯಂತ್ರಿಸಿಕೊಳ್ಳುವುದು ಉತ್ತಮ ಸಂಯಮ ಧರ್ಮವಾಗಿದ್ದು, ಸಂಯಮ ಇಲ್ಲದವರು ಕ್ರೋಧಿತ ಮತ್ತು ವಿವೇಕರಹಿತರಾಗಿ ಹಿಂಸೆಯಲ್ಲಿ ತೊಡಗುತ್ತಾರೆಂದು ಜಯಶ್ರೀ ಎಫ್. ಬರಿಗಾಲಿ ಹೇಳಿದರು. ಅವರು ಗದಗ ಜಿಲ್ಲಾ ದಿಗಂಬರ ಜೈನ ಸಂಘವು 'ದಶಲಕ್ಷಣ ಪರ್ವಾಚರಣೆ ಮತ್ತು ಸಮಾಜ ಸಂಪರ್ಕ ಸಭೆ' ಪ್ರಯುಕ್ತ ಲಕ್ಷ್ಮೇಶ್ವರದ ಅನಂತನಾಥ ತ್ರಿಕೂಟ ಬಸದಿಯಲ್ಲಿ ಆಯೋಜಿಸಿದ್ದ 'ಉತ್ತಮ ಸಂಯಮ ಧರ್ಮ' ಕಾರ್ಯಕ್ರಮದಲ್ಲಿ ಮಾತನಾಡುತ್ತ, ಕೆಲವರು ಕ್ಷಣಿಕ ಸುಖಕ್ಕಾಗಿ ಸಂಯಮ ರಹಿತರಾಗಿ ಅಗಾಧವಾದ, ದೀರ್ಘವಾದ ದುಃಖವನ್ನು ಅನುಭವಿಸುತ್ತಾರೆ. ಸಂಯಮವು ಆದರ್ಶ ಬದುಕಿಗೆ ಭೂಷಣವಾಗಿದೆ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಬಿ.ಟಿ. ಬರಿಗಾಲಿ ಅವರು ಸಂಯಮವಂತರು ಸಾಧಕ–ಬಾಧಕಗಳನ್ನು ಚೆನ್ನಾಗಿ ಅರಿತು ಸಾಧಕ ಅಂಶಗಳನ್ನು ಮಾತ್ರ ಸ್ವೀಕರಿಸಿ ತಮ್ಮ ಕಾರ್ಯದಲ್ಲಿ ಜಯಶಾಲಿಯಾಗುತ್ತಾರೆ. ಇಂಥವರು ಸಮಾಜದ ಗೌರವಕ್ಕೆ ಪಾತ್ರರಾಗುತ್ತಾರೆಂದು ಹೇಳಿದರು. ಸಂಘದ ಅಧ್ಯಕ್ಷ ಪಿ.ಎ. ಕುಲಕರ್ಣಿ ಅವರು ಸಂಘವು ಕಳೆದ ಇಪ್ಪತ್ತೆರಡು ವರ್ಷಗಳಿಂದ ಧಾರ್ಮಿಕ–ಸಾಮಾಜಿಕ ಕಾರ್ಯಗಳಲ್ಲಿ ನಿರತವಾಗಿದ್ದು, ಧರ್ಮಬಾಂಧವರು ಉದಾರವಾಗಿ ದಾನ ನೀಡಬೇಕೆಂದು ನಿವೇದಿಸಿದರು. ಕಾರ್ಯಕ್ರಮದಲ್ಲಿ ಬಿ.ಎಸ್. ನಾವಳ್ಳಿ, ಯಶವಂತ ಸಿದ್ದಣ್ಣವರ, ಹನಮಂತಗೌಡ ಮತಗಟ್ಟಿ, ಆರ್.ಸಿ. ಪಾಟೀಲ, ಬಿ.ಎಸ್. ಘೊಂಗಡಿ, ಸಂತೋಷ ಗೋಗಿ, ವಾಸು ಪಾಟೀಲ, ಬ್ರಹ್ಮರಾಜ ಹೊಂಬಣ್ಣವರ ಸೇರಿದಂತೆ ಸ್ಥಳೀಯ ಜೈನ ಸಮಾಜದ ಪ್ರಮುಖರು, ಶ್ರಾವಕರು, ಶ್ರಾವಿಕೆಯರು ಪಾಲ್ಗೊಂಡಿದ್ದರು.

# ಸಾಲಿಗ್ರಾಮ ಗಣೇಶ್ ಶೆಣೈಯವರಿಗೆ ಪಂಜುರ್ಲಿ ಛೇದ್ಮವೇಷ ಸ್ಪರ್ಧೆಯಲ್ಲಿ ಪ್ರಥಮ ಬಹುಮಾನ

**ದಾವಣಗೆರೆ:** ದಾವಣಗೆರೆಯ ಗೌಡ ಸಾರಸ್ವತ ಸಮಾಜದವತಿಯಿಂದ ಇತ್ತೀಚಿಗೆ ಸಮಾಜದ ಮತ್ತು ಶ್ರೀ ಗಣೇಶೋತ್ಸವದ ಸುವರ್ಣ ಮಹೋತ್ಸವದ ಪ್ರಯುಕ್ತ ಹಿರಿಯರಿಗೆ, ಕಿರಿಯರಿಗೆ ಛೇದ್ಮವೇಷ ಸ್ಪರ್ಧೆ ಹಮ್ಮಿಕೊಂಡಿದ್ದು ದಾವಣಗೆರೆಯ ಕಲಾಕುಂಚ ಮತ್ತು ಯಕ್ಷರಂಗ, ಶ್ರೀಮತಿ ಸರಸ್ವತಿ ದಾಸಪ್ಪ ಶೆಣೈ ಪ್ರತಿಷ್ಠಾನದ ಸಂಸ್ಥಾಪಕರೂ ಕಲಾವಿದರಾದ ಸಾಲಿಗ್ರಾಮ ಗಣೇಶ್ ಶೆಣೈಯವರು ಭೂತರಾಧನೆಯ ಪಂಜುರ್ಲಿ ವೇಷ ಹಾಕಿ ಪ್ರಥಮ ಬಹಮಾನ ಪಡೆದರು.

ನೆರೆದ ಪ್ರೇಕ್ಷಕರು ಅತ್ಯದ್ಭುತವಾದ ಈ ಭೂತರಾಧನೆಯ ವೇಷಭೂಷಣ ವೀಕ್ಷಿಸಿ ಮೆಚ್ಚುಗೆ ವ್ಯಕ್ತಪಡಿಸಿದರು. ಗೌಡ ಸಾರಸ್ವತ ಸಮಾಜ ಸೇರಿದಂತೆ, ಬಿಚ್ಚತ್ತಿ ಕುಟುಂಬ, ದಾವಣಗೆರೆಯ ಕಲಾಕುಂಚ ಮತ್ತು ಯಕ್ಷರಂಗ, ಶ್ರೀಮತಿ ಸರಸ್ವತಿ ದಾಸಪ್ಪ ಶೆಣೈ ಪ್ರತಿಷ್ಠಾನ, ಕರಾವಳಿ ಮಿತ್ರ ಮಂಡಳಿ ಪದಾಧಿಕಾರಿಗಳು, ಸರ್ವ ಸದಸ್ಯರು, ಮೆಚ್ಚುಗೆಯಿಂದ ಅಭಿಮಾನದಿಂದ ಅಭಿನಂದನೆ ಸಲ್ಲಿಸಿದರು.

# ವರಸಿದ್ದಿ ವಿನಾಯಕ ವಿಸರ್ಜನೆ, ಸಂಚಾರ ಮಾರ್ಗ ಬದಲಾವಣೆ

**ದಾವಣಗೆರೆ :** ದಾವಣಗೆರೆ ನಗರದ ವಿನೋಬ ನಗರದಲ್ಲಿ ಪ್ರತಿಷ್ಠಾಪಿಸಿರುವ ವರಸಿದ್ದಿ ವಿನಾಯಕ ಗಣೇಶ ಮೂರ್ತಿ ವಿಸರ್ಜನಾ ಮೆರವಣಿಗೆ ಸೆಪ್ಟೆಂಬರ್ 4 ರಂದು ನಡೆಯಲಿದೆ. ಈ ಸಂದರ್ಭದಲ್ಲಿ ಸಾರ್ವಜನಿಕರಿಗೆ ಮತ್ತು ವಾಹನ ಸಂಚಾರಕ್ಕೆ ತೊಂದರೆಯಾಗದಂತೆ ಅಂದು ಬೆಳಿಗ್ಗೆ 11 ರಿಂದ ರಾತ್ರಿ 11 ಗಂಟೆಯವರೆಗೆ ಸಂಚಾರ ಮಾರ್ಗ ಬದಲಾಯಿಸಿ ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಆದೇಶಿಸಿದ್ದಾರೆ.

ಹರಿಹರದಿಂದ ದಾವಣಗೆರೆಗೆ ಹಳೆ ಪಿಬಿ ರಸ್ತೆಯ ಮೂಲಕ ಬರುವ ಎಲ್ಲಾ ಭಾರಿ ವಾಹನ, ಕೆಎಸ್‌ಆರ್‌ಟಿಸಿ ಮತ್ತು ಖಾಸಗಿ ಬಸ್‌ಗಳು ಹರಿಹರ ನಗರದಿಂದ ನೇರವಾಗಿ ಶಿವಮೊಗ್ಗ ಬೈಪಾಸ್ ಮುಖಾಂತರ ಹೊಸ ಎನ್‌ಹೆಚ್–48 ರಸ್ತೆಯಿಂದ ಹಾಗೂ ಚಿತ್ರದುರ್ಗ ಕಡೆಯಿಂದ ಬರುವ ಎಲ್ಲಾ ವಾಹನಗಳು ಸಹ ಆವರಗೆರೆ ಹತ್ತಿರದ ಬಾಡಾಕ್ರಾಸ್ ಮುಖಾಂತರ ಬಂದು ಸರಕು ಲಾರಿಗಳು ಡಿಸಿಎಂ ಅಂಡರ್ ಪಾಸ್ ಹತ್ತಿರದ ದನದ ಮಾರ್ಕೆಟ್ ಕ್ರಾಸ್‌ನಿಂದ ಎಪಿಎಂಸಿ ಗೆ ಹೋಗುವುದು. ಕೆಎಸ್‌ಆರ್‌ಟಿಸಿ ಬಸ್‌ಗಳು ಅದೇ ಮಾರ್ಗವಾಗಿ ಬಾಡಾಕ್ರಾಸ್ ಮುಖಾಂತರ ಆವರಗೆರೆ ಕಡಿಯಿಂದ ನೂತನ ಬಸ್ ನಿಲ್ದಾಣಕ್ಕೆ ಬಂದು ಅದೇ ಮಾರ್ಗವಾಗಿ ಬೆಂಗಳೂರು ಬೆಳಗಾವಿ ಕಡೆಗೆ ಹೋಗುವುದು. ಬಸ್‌ಗಳು ಖಾಸಗಿ ಬಸ್‌ಗಳು ಸಹ ಅದೇ ಆರ್ಗವಾಗಿ ಬಂದು ಎಂ.ಜಿ ಸರ್ಕಲ್ ಮುಖೇನ ನೂತನ ಖಾಸಗಿ ನಿಲ್ದಾಣಕ್ಕೆ ಬಂದು ಅದೇ ಮಾರ್ಗದಲ್ಲಿ ನಿರ್ಗಮಿಸಲು ಸೂಚಿಸಿದೆ.



ಜಿಎಂಐಟಿ ಕಾಲೇಜ್ ಹತ್ತಿರ ತಾತ್ಕಾಲಿಕ ರಸ್ತೆಯ ಬದಿಯಲ್ಲಿ ನಿಲ್ಲಿಸುವಂತಹ ಗೂಡ್ಸ್ ಲಾರಿಗಳನ್ನು ಹಳೇ ಪಿಬಿ ರಸ್ತೆಯ ಎರಡೂ ಬದಿಗಳಲ್ಲಿ ನಿಲ್ಲಿಸದೇ ದೂರದಲ್ಲಿ ಖಾಸಗಿ ಪಾರ್ಕಿಂಗ್ ವ್ಯವಸ್ಥೆ ಮಾಡಕೊಳ್ಳಬೇಕು. ನಗರದ ನೂತನ ಖಾಸಗಿ ಬಸ್ ನಿಲ್ದಾಣದಿಂದ ಕಾರ್ಯಾಚರಣೆಗೊಳ್ಳುವ ಬಸ್‌ಗಳು ಎಸಿ ಕಚೇರಿ ವೃತ್ತದಿಂದ ಅರುಣ ಸರ್ಕಲ್ ಮುಖಾಂತರ ಹರಿಹರದ ಕಡೆಗೆ ಹಳೇ ಪಿಬಿ ರಸ್ತೆಗೆ ಬಾರದೇ ಗಾಂಧಿ ವೃತ್ತದ ಮೂಲಕ ಹದಡಿ ರಸ್ತೆ ಯಿಂದ ಕಾರ್ಯಚರಣೆಗೊಳಿಸಲು ಸೂಚಿಸಲಾಗಿದೆ ಎಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ತಿಳಿಸಿದ್ದಾರೆ.

# ವಿಷ್ಣುವರ್ಧನ್ ಅವರಿಗೆ ಕರ್ನಾಟಕ ರತ್ನ ಪ್ರಶಸ್ತಿ ಘೋಷಣೆ ಸಾಧ್ಯತೆ




**ಬೆಂಗಳೂರು:** ಕನ್ನಡ ಚಲನ ಚಿತ್ರ ನಟ ದಿ. ಡಾ. ವಿಷ್ಣುವರ್ಧನ್ ಅವರಿಗೆ ಕರ್ನಾಟಕ ರತ್ನ ಪ್ರಶಸ್ತಿ ನೀಡುವಂತೆ ಮನವಿ ಮಾಡಲಾಗಿದೆ.

ಕನ್ನಡ ಚಲನಚಿತ್ರ ರಂಗದ ಹಿರಿಯ ನಟಿಯರಾದ ಜಯಮಾಲ, ಶ್ರುತಿ ಮತ್ತು ಮಾಳವಿಕ ಅವಿನಾಶ್ ಅವರು ಬುಧವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ದಿವಂಗತ ವಿಷ್ಣುವರ್ಧನ್ ಅವರಿಗೆ ಮರಣೋತ್ತರವಾಗಿ ಕರ್ನಾಟಕ ರತ್ನ ಪ್ರಶಸ್ತಿ ನೀಡುವಂತೆ ಮನವಿ ಸಲ್ಲಿಸಿದರು.

ಇತ್ತೀಚೆಗೆ ನಿಧನರಾದ ಪಂಚಭಾಷಾ ನಟಿ ಬಿ. ಸರೋಜಾದೇವಿ ಅವರ ಹೆಸರನ್ನು ಅವರು ವಾಸವಿದ್ದ ಮಲ್ಲೇಶ್ವರದ ನಾಮಕರಣ ಮಾಡುವಂತೆಯೂ ಮನವಿ ಮಾಡಿದರು.

ಗುರುವಾರ ಕ್ಯಾಬಿನೆಟ್ ಸಭೆ ನಡೆಯಲಿದ್ದು ಕರ್ನಾಟಕ ರತ್ನ ಪ್ರಶಸ್ತಿ ಘೋಷಣೆ ಮಾಡುವ ಸಾಧ್ಯತೆ ಇದೆ.

# ಭಾರತ ಚುನಾವಣಾ ಆಯೋಗ ತಂಡದ ಭೇಟಿ : ಮತಗಟ್ಟೆ ಪರಿಶೀಲನೆ



**ಶಿವಮೊಗ್ಗ:** ಭಾರತ ಚುನಾವಣಾ ಆಯೋಗದ ಅಧಿಕಾರಿಗಳು ಮತಗಟ್ಟೆ ಹಾಗೂ ಸಮಗ್ರ ಚುನಾವಣಾ ಪ್ರಕ್ರಿಯೆ ಪರಿಶೀಲನೆಯ ಭಾಗವಾಗಿ ಸೆ.01 ರಂದು ಶಿವಮೊಗ್ಗ ಜಿಲ್ಲೆಗೆ ಭೇಟಿ ನೀಡಿದರು.

ಮಹಾನಗರಪಾಲಿಕೆ ಕಚೇರಿಯಲ್ಲಿ ಮತಗಟ್ಟೆ ಅಧಿಕಾರಿಗಳಿಗೆ (ಬಿಎಲ್‌ಓ) ಆಯೋಜಿಸಲಾಗಿದ್ದ ತರಬೇತಿ ಕಾರ್ಯಕ್ರಮದಲ್ಲಿ ತಂಡವು ಪಾಲ್ಗೊಂಡು ಮತಗಟ್ಟೆ ಅಧಿಕಾರಿಗಳ ಮೂಲ ಕರ್ತವ್ಯಗಳು ಮತ್ತು ಜವಾಬ್ದಾರಿಗಳ ಕುರಿತು ವಿಶ್ಲೇಷಿಸಿತು. ನಂತರ ಮತಗಟ್ಟೆ ಅಧಿಕಾರಿಗಳೊಂದಿಗೆ ಸಂವಾದಿಸಲಾಯಿತು.

ತರಬೇತಿ ನಂತರ ತಂಡವು ಮತಗಟ್ಟೆಗಳ ಪರಿಶೀಲನೆ ನಡೆಸಿತು. 111–ಶಿವಮೊಗ್ಗ ಗ್ರಾಮಾಂತರ ಹಾಗೂ 117–ಸಾಗರ ವಿಧಾನಸಭಾ ಕ್ಷೇತ್ರಗಳ ಆಯ್ದ ಮತಗಟ್ಟೆಗಳಿಗೆ ಭೇಟಿ ನೀಡಿ, ಮತಗಟ್ಟೆಗಳಲ್ಲಿ ಖಚಿತ ಕನಿಷ್ಟ ಸೌಲಭ್ಯಗಳು ಇವೆಯೇ ಎಂಬುದನ್ನು ಪರಿಶೀಲಿಸಲಾಯಿತು. ಹಿಂದಿನ ಸಂಸತ್ ಹಾಗೂ ವಿಧಾನಸಭಾ ಚುನಾವಣೆಯ ಮತದಾನದ ಶೇಕಡಾವಾರು ಅಂಕಿಅಂಶಗಳ ಮಾಹಿತಿ ಪಡೆದು, ಪ್ರಸ್ತುತ ಸಾಲಿನ ಮತದಾರರ ಪಟ್ಟಿಗೆ ಮತದಾರರ ಸೇರ್ಪಡೆ, ಕೈಬಿಡಲಾಗಿರುವ ಮತ್ತು ತಿದ್ದುಪಡಿ ಮಾಡಿರುವ ಮತದಾರರ ಸಂಖ್ಯೆಯನ್ನು ಸಂಗ್ರಹಿಸಿತು.

ಚುನಾವಣಾ ಮೂಲಭೂತ ಸಿದ್ದತೆಯನ್ನು ಬಲಪಡಿಸುವುದು, ದೋಷರಹಿತ ಮತದಾರರ ಪಟ್ಟಿಯನ್ನು ಖಚಿತಪಡಿಸುವುದು, ಮತದಾರರಿಗೆ ಹೆಚ್ಚಿನ ಸೌಲಭ್ಯ ಒದಗಿಸುವುದು ಹಾಗೂ ಜಿಲ್ಲೆಯಾದ್ಯಂತ ಚುನಾವಣೆಗಳು ಸುಗಮವಾಗಿ ನಡೆಯುವಂತೆ ಖಾತ್ರಿಪಡಿಸುವ ಉದ್ದೇಶದಿಂದ ಜಿಲ್ಲೆಗೆ ಭೇಟಿ ನೀಡಲಾಗಿದೆ ಎಂದು ತಿಳಿಸಿದೆ.

# ಎಸ್‌ಸಿ/ಎಸ್‌ಟಿ ಮೀನು ಮಾರಾಟಗಾರರ ಆರ್ಥಿಕ ನೆರವಿಗೆ ಅರ್ಜಿ ಆಹ್ವಾನ

**ಶಿವಮೊಗ್ಗ:** 2025–26 ನೇ ಸಾಲಿನಲ್ಲಿ ಮೀನುಗಾರಿಕೆ ಇಲಾಖೆಯ ರಾಜ್ಯವಲಯದಿಂದ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಮೀನು ಮಾರಾಟಗಾರರಿಗೆ ಆರ್ಥಿಕ ನೆರವು ನೀಡಲು ಆನ್‌ಲೈನ್ ಅರ್ಜಿ ಆಹ್ವಾನಿಸಲಾಗಿದೆ.

ಈ ಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಮೀನು ಮಾರಾಟಗಾರರಿಗೆ ನಾಲ್ಕು ಚಕ್ರ ವಾಹನ ಖರೀದಿಸಲು ಶೇ.50 ರಷ್ಟು ಅಥವಾ ರೂ.3 ಲಕ್ಷ ಆರ್ಥಿಕ ನೆರವನ್ನು ಇಲಾಖಾ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ಅನುಷ್ಠಾನಗೊಳಿಸಲಾಗುತ್ತಿದೆ. ಜಿಲ್ಲೆಗೆ ಪರಿಶಿಷ್ಟ ಜಾತಿ–2 ಮತ್ತು ಪರಿಶಿಷ್ಟ ಪಂಗಡ–1 ಮೀನು ಮಾರಾಟಗಾರರಿಗೆ ಗುರಿಯನ್ನು ನಿಗದಿಪಡಿಸಲಾಗಿದ್ದು, ಅರ್ಹ ಮೀನು ಮಾರಾಟಗಾರರು ಸೆ.20 ರ ಒಳಗೆ ಅಗತ್ಯ ದಾಖಲೆಗಳೊಂದಿಗೆ ಅರ್ಜಿಯನ್ನು ಸಂಬಂಧಪಟ್ಟ ತಾಲ್ಲೂಕಿನ ಮೀನುಗಾರಿಕೆ ಸಹಾಯಕ ನಿರ್ದೇಶಕರಿಗೆ ಸಲ್ಲಿಸುವಂತೆ ಮೀನುಗಾರಿಕೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

ಹೆಚ್ಚಿನ ಮಾಹಿತಿಗಾಗಿ ಮೀನುಗಾರಿಕೆ ಸಹಾಯಕ ನಿರ್ದೇಶಕ, ಶಿವಮೊಗ್ಗ– 9986040981, ಭದ್ರಾವತಿ–9743370815, ಶಿಕಾರಿಪುರ–9686939028, ಸಾಗರ ಮತ್ತು ಹೊಸನಗರ–9538044365, ಸೊರಬ–9535386449, ತೀರ್ಥಹಳ್ಳಿ–8655132438 ಗೆ ಸಂಪರ್ಕಿಸುವುದು.

# ಬಿಸಿಎಂ ಹಾಸ್ಟೇಲ್ ಗಳಿಗೆ ಭೇಟಿ ನೀಡಿ ವಾಸ್ತವ ಪರಿಶೀಲಿಸಿದ ಇಒ ಚಂದ್ರಶೇಖರ ಕಂದಕೂರು



**ಗಜೇಂದ್ರಗಡ:** ತಾಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳಾದ ಚಂದ್ರಶೇಖರ ಬಿ, ಕಂದಕೂರ ಅವರು ಸೋಮವಾರ ತಡರಾತ್ರಿ ನಗರದ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ಬಿಸಿಎಂ ಬಾಲಕರ ವಸತಿ ನಿಲಯಗಳಿಗೆ ಭೇಟಿ ನೀಡಿದರು.

ಬಸವರಾಜ ಬಡಿಗೇರ ಸಹಾಯಕ ನಿರ್ದೇಶಕರು ಗ್ರಾಮೀಣ ಉದ್ಯೋಗ ತಾಪಂ ಗಜೇಂದ್ರಗಡ ಅವರ ಜೊತೆಗೂಡಿ ವಸತಿ ನಿಲಯಗಳಿಗೆ ಭೇಟಿ ನೀಡಿದ ಇಒ ಅವರು, ವಸತಿ ನಿಲಯಗಳ ಸ್ವಚ್ಛತೆ, ಊಟದ ವ್ಯವಸ್ಥೆ, ವಸತಿ ನಿಲಯಗಳಲ್ಲಿ ಮೂಲಭೂತ ಅವಶ್ಯಕತೆಗಳ ಪೂರೈಕೆಗಳ ಬಗ್ಗೆ ವಸತಿ ನಿಲಯದ ವಿದ್ಯಾರ್ಥಿಗಳ ಜೊತೆ ಸಮಾಲೋಚನೆ ನಡೆಸಿ ಮಾಹಿತಿ ಪಡೆದರು.

ಬಿಸಿಎಂ ವಸತಿ ನಿಲಯಗಳಲ್ಲಿ ವಿದ್ಯಾರ್ಥಿಗಳ ಕಲಿಕೆಯ ಅನುಕೂಲತೆಗೆ ರಾಜ್ಯ ಸರ್ಕಾರ ಸಕಲ ಸೌಕರ್ಯಗಳನ್ನು ಒದಗಿಸಿದೆ. ಸರ್ಕಾರದ ಈ ಅನುಕೂಲತೆಯನ್ನು ಸದುಪಯೋಗಪಡಿಸಿಕೊಂಡು ಮುಂದೆ ಬರುವ ವಿದ್ಯಾರ್ಥಿಗಳಿಗೂ ಒದಗಿಸಿಕೊಡುವ ಕೆಲಸವನ್ನು ವಸತಿ ನಿಲಯದ ವಿದ್ಯಾರ್ಥಿಗಳು ಮಾಡಬೇಕು. ವಿದ್ಯಾರ್ಥಿಗಳಾಗಿದ್ದ ವೇಳೆ ನಮಗೆಲ್ಲ ಇಂತಹ ಯಾವುದೇ ಸೌಲಭ್ಯಗಳಿರಲಿಲ್ಲ. ಇಂದು ನಿಮಗೆ ಸಕಲ ರೀತಿಯ ಸೌಲಭ್ಯಗಳಿರುವಾಗ ಓದಿನಲ್ಲಿ ಹಿಂದೆ ಬೀಳದೆ ವಸತಿ ನಿಲಯಗಳನ್ನು ಪ್ರಾರ್ಥನಾ ಕೇಂದ್ರಗಳೆಂದು ಭಾವಿಸಿ ಭಕ್ತಿಯಿಂದ ಓದಿನಲ್ಲಿ ತೊಡಗಿಕೊಂಡು ಸರ್ಕಾರದ ಉನ್ನತ ಹುದ್ದೆ ಪಡೆದುಕೊಳ್ಳಿ ಅಂತ ಇಒ ಕಂದಕೂರು ಅವರು ವಸತಿ ನಿಲಯದ ವಿದ್ಯಾರ್ಥಿಗಳಿಗೆ ಬುದ್ಧಿಮಾತು ಹೇಳಿದರು.

ಸ್ವತಃ ಶಿಕ್ಷಕರಾಗಿ ಸೇವೆ ಸಲ್ಲಿಸಿದ ಅನುಭವವುಳ್ಳ ಇಒ ಅವರು ಮೆಟ್ರಿಕ್ ಪೂರ್ವ ವಸತಿ ನಿಲಯದ ಮಕ್ಕಳಿಗೆ ಯಾವುದೇ ವಿಷಯ ಕಠಿಣವೆನಿಸಿದರೂ ದೂರವಾಣಿ ಕರೆ ಮಾಡಿದರೆ ಆ ವಿಷಯದ ಕುರಿತು ಪಾಠ ಮಾಡುವುದಾಗಿ ವಸತಿ ನಿಲಯದ ಮಕ್ಕಳಿಗೆ ಓದಿನಲ್ಲಿ ತೊಡಗುವಂತೆ ಪ್ರೇರೆಪಿಸಿದರು. ಪ್ರತಿಯೊಂದು ನಿಲಯದ ಕೊಠಡಿಗೆ ತೆರಳಿ ಕೊಠಡಿಯ ಸ್ವಚ್ಛತೆ, ಬೆಡ್ ಮತ್ತು ಕಾಟ್ ವ್ಯವಸ್ಥೆ ಪರಿಶೀಲಿಸಿದರು.

ಇದೇ ವೇಳೆ ಇಒ ಕಂದಕೂರು ಅವರಿಗೆ ವಸತಿ ನಿಲಯದ ವಿದ್ಯಾರ್ಥಿಗಳು ಹಾಸ್ಟೇಲ್ಗೆ ಬರುವ ರಸ್ತೆ ಹದಗೆಟ್ಟಿದ್ದು, ದುರಸ್ಥಿಗೊಳಿಸುವಂತೆ ಮನವಿ ಮಾಡಿದರು. ಅಲ್ಲದೆ ಸದ್ಯ ಹಾಸ್ಟೇಲ್ ನ ಸ್ನಾನದ ಕೊಠಡಿಯಲ್ಲಿ ಬಟ್ಟೆ ತೊಳೆದುಕೊಳ್ಳುತ್ತಿದ್ದು ಪ್ರತ್ಯೇಕವಾಗಿ ಬಟ್ಟೆ ತೊಳೆದಕೊಳ್ಳು ಕೊಠಡಿ ವ್ಯವಸ್ಥೆ ಮಾಡಿಕೊಡಿ ಎಂದು ಮನವಿ ಮಾಡಿಕೊಂಡರು.

ವಾರಕ್ಕೊಮ್ಮೆ ಚಿಕನ್ ಊಟ ಕೊಡುವಂತೆ ಇಒ ಬಳಿ ಮನವಿ ಮಾಡಿಕೊಂಡ ವಿದ್ಯಾರ್ಥಿಗಳು. ಇದಕ್ಕೆ ಉತ್ತರಿಸಿದ ಇಒ ಅವರು, ಸದ್ಯ ತಿಂಗಳಿಗೆ ಒಂದು ಸಲ ಚಿಕನ್ ಊಟ ಕೊಡಲು ಅವಕಾಶವಿದೆ. ಮುಂದಿನ ದಿನಗಳಲ್ಲಿ ಸರ್ಕಾರ ಹೇಳಿದ್ರೆ ಕೊಡುವುದಾಗಿ ಇಒ ತಿಳಿಸಿದರು. ಅಲ್ಲದೆ ಚಿಕನ್ ಊಟದ ಮೇಲಿರುವ ಪ್ರೀತಿ ಓದಿನಲ್ಲೂ ತೋರಿಸಿ ಅಂತ ಹಾಸ್ಯ ಚಟಾಕಿ ಸಿಡಿಸಿದರು.

# ಉಳುಪಿನಕಟ್ಟೆಯಲ್ಲಿ 13ರಂದು ರೈತ ಹುತಾತ್ಮ ದಿನಾಚರಣೆ

**ದಾವಣಗೆರೆ :** ಪೊಲೀಸ್ ಗೋಲಿಬಾರ್‌ಗೆ ಹುತಾತ್ಮರಾದ ಒಬೇನಹಳ್ಳಿ ಕಲ್ಲಿಂಗಪ್ಪ ಹಾಗೂ ಸಿದ್ದನೂರು ನಾಗರಾಜಚಾರ್ ಅವರ 33ನೇ ವರ್ಷದ ಹುತಾತ್ಮ ದಿನಾಚರಣೆಯನ್ನು ಸೆ.13ರಂದು ಬೆಳಗ್ಗೆ 11.30ಕ್ಕೆ ಆಯೋಜಿಸಲಾಗಿದೆ ಎಂದು ಮುಖಂಡ ಎನ್.ಜಿ. ಪುಟ್ಟಸ್ವಾಮಿ ತಿಳಿಸಿದ್ದಾರೆ.

ತಾಲ್ಲೂಕಿನ ರಾಷ್ಟ್ರೀಯ ಹೆದ್ದಾರಿ ಆನಗೋಡಿನ ಸಮೀಪದ ಉಳುಪಿನಕಟ್ಟೆ ಪಾರ್ಕ್ ಸಮೀಪ ಕಾರ್ಯಕ್ರಮ ನಡೆಯಲಿದೆ.

ಜಿಲ್ಲಾ ಉಸ್ತಾವರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್, ಸಂಸದೆ ಪ್ರಭಾ ಮಲ್ಲಿಕಾರ್ಜುನ್ ಹಾಗೂ ರೈತ ಮುಖಂಡರು, ಹೋರಾಟಗಾರರು ಭಾಗವಹಿಸುವರು. ರೈತರು, ಮುಖಂಡರು ಭಾಗವಹಿಸಬೇಕೆಂದು ಮನವಿ ಮಾಡಿದ್ದಾರೆ.

# ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ಚಿಕ್ಕಬಳ್ಳಾಪುರ ತಾಲ್ಲೂಕಿನ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯ ಅಂಗನವಾಡಿ ಕೇಂದ್ರಗಳಲ್ಲಿ ಖಾಲಿ ಇರುವ 03 ಅಂಗನವಾಡಿ ಕಾರ್ಯಕರ್ತೆಯರ ಹಾಗೂ 37 ಸಹಾಯಕಿಯರ ಹುದ್ದೆಗಳಿಗೆ ಸರ್ಕಾರದ ಮಾರ್ಗಸೂಚಿಗಳನ್ವಯ ಅರ್ಹ ಸ್ಥಳೀಯ ಮಹಿಳಾ ಅಭ್ಯರ್ಥಿಗಳಿಂದ ಹಾಗೂ ಲಿಂಗತ್ವ ಅಲ್ಪಸಂಖ್ಯಾತ ಅಭ್ಯರ್ಥಿಗಳಿಂದ ಆನ್ ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಃಣಣಠಿ:// ಇಚಿಡಿಟಿಜಟಚಿಇಚಿಕಟಿಜ.ಇಚಿಡಿ.ಟುಥಿ.ಎಟಿ/ಚಿಥಟಿಜ ನಲ್ಲಿ ಸೆಪ್ಟೆಂಬರ್ 30 ರ ಸಂಜೆ 5:30 ಗಂಟೆಯೊಳಗೆ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಚಿಕ್ಕಬಳ್ಳಾಪುರ ತಾಲ್ಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ, ವಾಪಸಂದ್ರ, ದೂ. ಸಂ: 08156–271161 ಗೆ ಸಂಪರ್ಕಿಸಬಹುದೆಂದು ಚಿಕ್ಕಬಳ್ಳಾಪುರ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಭಾರೀ ನಿರೀಕ್ಷೆಯ GST ಮೀಟಿಂಗ್ ಆರಂಭ : ಯಾವುದು ಅಗ್ಗ, ಯಾವುದು ದುಬಾರಿಯಾಗಬಹುದು?




**ಹೊಸದಿಲ್ಲಿ:** ದೇಶದ ತೆರಿಗೆ ವ್ಯವಸ್ಥೆಯಲ್ಲಿ ಕ್ರಾಂತಿಕಾರಿ ಬದಲಾವಣೆಯಾಗಬಹುದು ಎನ್ನುವ ನಿರೀಕ್ಷೆ ಜನಸಾಮಾನ್ಯರಲ್ಲಿ. ಹಾಗಾಗಿ, ಇಂದಿನಿಂದ (ಸೆಪ್ಟಂಬರ್ 3) ಆರಂಭವಾಗಿರುವ ಎರಡು ದಿನಗಳ ಜಿಎಸ್‌ಟಿ ಕೌನ್ಸಿಲ್ ಸಭೆಯ ಮೇಲೆ ಎಲ್ಲರ ಕಣ್ಣು ನೆಟ್ಟಿದೆ.


ಎಲ್ಲಾ ರಾಜ್ಯಗಳ ಸಚಿವರು ಈ ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ಸ್ವಾತಂತ್ರ್ಯ ದಿನಾಚರಣೆಯ ದಿನ ಕೆಂಪುಕೋಟೆಯಲ್ಲಿ ಮಾತನಾಡುತ್ತಿದ್ದ ಪ್ರಧಾನಮಂತ್ರಿ ನರೇಂದ್ರ ಮೋದಿ, ಈ ಬಾರಿಯ ದೀಪಾವಳಿಯಲ್ಲಿ ಭಾರತೀಯರಿಗೆ ಡಬಲ್ ಧಮಾಕ ಸಿಗಲಿದೆ ಎಂದು ಹೇಳಿದ್ದರು. ಹಾಗಾಗಿ, ಈ ಸಭೆಯ ಮೇಲೆ ಜನರಿಗೆ ಕುತೂಹಲ ಹೆಚ್ಚಾಗಿದೆ. ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅಧ್ಯಕ್ಷತೆಯಲ್ಲಿ ಈ ಸಭೆ ಆರಂಭವಾಗಿದೆ.

ಪ್ರಧಾನಿಗಳ ದೇಶವನ್ನು ಉದ್ದೇಶಿಸಿ ನಡೆಸಿದ ಭಾಷಣದ ನಂತರ ಈ ಸಭೆ ನಡೆಯುತ್ತಿದೆ. ಜನಸಾಮಾನ್ಯರಿಗೆ ತೀರಾ ಅಗತ್ಯವಾದ ವಸ್ತುಗಳ ಬೆಲೆ ಅಗ್ಗವಾಗುವ ಸಾಧ್ಯತೆಯಿದೆ. ಜೊತೆಗೆ, ಐಷಾರಾಮಿ ವಸ್ತುಗಳ ಮೇಲೆ ತೆರಿಗೆ ಇನ್ನಷ್ಟು ಹೆಚ್ಚಾಗುವ ಸಾಧ್ಯತೆಯಿದೆ.

ಕರ್ನಾಟಕದ ಕಂದಾಯ ಇಲಾಖೆಯ ಸಚಿವರಾದ ಕೃಷ್ಣ ಬೈರೇಗೌಡ ಮಾತನಾಡಿ, "ಜಿಎಸ್ಟಿ ತೆರಿಗೆ ವ್ಯವಸ್ಥೆ ಜಾರಿಯಾದ ನಂತರ ರಾಜ್ಯದ ಆದಾಯದಲ್ಲಿ ವಾರ್ಷಿಕ ಸರಾಸರಿ ರೂ. 70,000 ಕೋಟಿ ಖೋತಾ ಆಗುತ್ತಿದೆ. ಇದೀಗ ಕೇಂದ್ರ ಸರ್ಕಾರದ ದರ ಸರಳೀಕರಣ ಪ್ರಸ್ತಾವನೆಯಿಂದ ಹೆಚ್ಚುವರಿ 15,000 ಕೋಟಿ ಖೋತಾ ಆಗಲಿದೆ " ಎನ್ನುವ ಆತಂಕವನ್ನು ವ್ಯಕ್ತಪಡಿಸಿದ್ದರು.

ಎರಡು ದಿನಗಳ ಕೌನ್ಸಿಲ್ ಸಭೆಯಲ್ಲಿ ತೆರಿಗೆ ದರಗಳನ್ನು ಕಮ್ಮಿ ಮಾಡುವ ನಿಟ್ಟಿನಲ್ಲಿ ಚರ್ಚೆಯಾಗಲಿದೆ. ಇದರ ಜೊತೆಗೆ, ಯಾವಯಾವ ವಿಚಾರದ ಬಗ್ಗೆ ಚರ್ಚೆ ನಡೆಯಬಹುದು ಎನ್ನುವ ಮಾಹಿತಿ ಇಲ್ಲಿದೆ. ಮೊದಲಿಗೆ, ಐದು ಮತ್ತು ಹದಿನೆಂಟು ಸ್ಲ್ಯಾಬ್ ನಲ್ಲಿರುವ ವಸ್ತುಗಳ ಬಗ್ಗೆ ಚರ್ಚೆ ನಡೆಯಲಿದೆ. ಮೂಲಗಳ ಪ್ರಕಾರ, ಐಷಾರಾಮಿ ವಸ್ತುಗಳು ಇನ್ನಷ್ಟು ದುಬಾರಿಯಾಗಬಹುದು.

## ಡೊನಾಲ್ಡ್ ಟ್ರಂಪ್ ಸುಂಕ ಸಮರ: ಗರಿಷ್ಠ ಬೆಲೆ ದಾಖಲಿಸಿದ ಚಿನ್ನ: ಒಂದೇ ದಿನಕ್ಕೆ 880 ರೂ.



**ಬೆಂಗಳೂರು:** ಭಾರತದ ಮೇಲೆ ಅಮೆರಿಕದ ಅಧ್ಯಕ್ಷ ವಿಧಿಸಿರುವ ಪ್ರತಿಸುಂಕದಿಂದಾಗಿ ಷೇರು ಮಾರುಕಟ್ಟೆಗಳು ಅಲ್ಲೋಲ ಕಲ್ಲೋಲವಾಗಿದ್ದು, ಇದರ ನೇರ ಪರಿಣಾಮ ಚಿನ್ನದ ಬೆಲೆ ಏರಿಕೆಗೂ ಕಾರಣವಾಗಿದೆ. ಚಿನ್ನವು ಗರಿಷ್ಠ ಬೆಲೆ ಏರಿಕೆಯನ್ನು ಕಂಡಿದೆ. ಸದ್ಯ ದೇಶದಲ್ಲಿ 24 ಕ್ಯಾರೆಟ್ 10 ಗ್ರಾಂ ಚಿನ್ನದ ಬೆಲೆ 1,06,970 ರೂಪಾಯಿಗೆ ಹೆಚ್ಚಳ ಕಂಡಿದೆ. ಇಂದಿನ ಬೆಲೆ ವಿವರ ಇಲ್ಲಿದೆ ನೋಡಿ

ದೇಶೀಯ ಮಾರುಕಟ್ಟೆಯಲ್ಲಿ 24 ಕ್ಯಾರೆಟ್ 1 ಗ್ರಾಂ ಚಿನ್ನದ ಬೆಲೆ 10697 ರೂಪಾಯಿಗೆ ಏರಿಕೆ ಆಗಿದ್ದು, ಇಂದು 88 ರುಪಾಯಿ ಹೆಚ್ಚಳ ಆಗಿದೆ. 22 ಕ್ಯಾರೆಟ್ ಬೆಲೆಯಲ್ಲಿ 80 ರೂಪಾಯಿ ಹೆಚ್ಚಳ ಆಗಿದ್ದು, 9,805 ರುಪಾಯಿಗೆ ಏರಿಕೆ ಆಗಿದೆ.

24 ಕ್ಯಾರೆಟ್ ನ 10 ಗ್ರಾಂ ಚಿನ್ನದ ಇಂದಿನ ಬೆಲೆಯು ಬರೋಬ್ಬರಿ 880 ರೂ ಹೆಚ್ಚಳ ಆಗಿ, 1,06,970 ರುಪಾಯಿಗೆ ಏರಿಕೆ ಆಗಿದೆ. 22 ಕ್ಯಾರೆಟ್ 10 ಗ್ರಾಂ ಚಿನ್ನದ ಬೆಲೆ 800 ರೂ ಹೆಚ್ಚಳ ಆಗಿ 98,050 ರೂ ಆಗಿದೆ.

ಬೆಂಗಳೂರಲ್ಲಿ 1 ಗ್ರಾಂ 24 ಕ್ಯಾರೆಟ್ ಚಿನ್ನದ ಬೆಲೆ 10,697 ರೂ ಇದೆ. ಬೆಳ್ಳಿಯ ಬೆಲೆ ಕೂಡಾ 90 ಪೈಸೆ ಹೆಚ್ಚಳ ಆಗಿ. ,ಗ್ರಾಂ ಬೆಲೆ 127 ರೂ ಆಗಿದ್ದು, ಕೆಜಿ ಬೆಲೆ 1,27,000 ರೂ ಆಗಿದೆ.

ಬುಧವಾರ ಬೆಳಿಗ್ಗೆ ದೇಶೀಯ ಮಾರುಕಟ್ಟೆಯಲ್ಲಿ ಚಿನ್ನದ ಬೆಲೆ ದಾಖಲೆಯ ಮಟ್ಟಕ್ಕೆ ತಲುಪಿದೆ. ಇದಕ್ಕೆ ಕಾರಣಗಳು, ಅಮೆರಿಕದ ಫೆಡರಲ್ ರಿಸರ್ವ್ ಬಡ್ಡಿದರ ಕಡಿತ ಮಾಡುವ ನಿರೀಕ್ಷೆ ಇದೆ ಅಲ್ಲದೆ ಡಾಲರ್ ಸ್ಥಿರವಾಗಿರುವ ಕಾರಣ ಚಿನ್ನದ ಬೆಲೆ ಏರಿಕೆಯಾಗಿದೆ. ಟ್ರಂಪ್ ಸುಂಕ ನೀತಿಗಳು ಕೂಡಾ ಪ್ರಮುಖ ಕಾರಣ ಎನ್ನಲಾಗಿದೆ.

## ಬಾನು ಮುಷ್ತಾಕ್‌ಗೆ ದಸರಾ ಉದ್ಘಾಟನೆಗೆ ಆಹ್ವಾನ; ಮೈಸೂರು ಪೇಟ ತೊಡಿಸಿ ಸನ್ಮಾನ



**ಮೈಸೂರು:** ನಾಡಹಬ್ಬ ದಸರಾ ಸಂಭ್ರಮಕ್ಕೆ ಇನ್ನು ಕೆಲವೇ ದಿನಗಳು ಬಾಕಿ ಇದೆ. ಸೆಪ್ಟೆಂಬರ್ 22ರಂದು ಉದ್ಘಾಟನೆ ಮಾಡಲಾಗುತ್ತದೆ. ಉದ್ಘಾಟಕರಾಗಿ ಆಯ್ಕೆ ಮಾಡಲಾಗಿದೆ. ಇದಕ್ಕೆ ಬಿಜೆಪಿ ನಾಯಕರು ಹಿಂದೂ ಪರ ಸಂಘಟನೆಗಳ ವಿರೋಧವಿದ್ದರೂ ಸಹ, ಯಾವುದಕ್ಕೂ ಜಗ್ಗದ ಸರ್ಕಾರ. ಇಂದು(ಸೆ.3) ರಂದು ಮೈಸೂರು ಜಿಲ್ಲಾಡಳಿತದಿಂದ ಅಧಿಕೃತವಾಗಿ ಆಹ್ವಾನಿಸಿದೆ. ಮೈಸೂರು ದಸರಾ ಮಹೋತ್ಸವದ ಉದ್ಘಾಟಕರಾಗಿ ಆಯ್ಕೆಯಾಗಿರುವ ಬರಹಗಾರ್ತಿ ಬಾನು ಮುಷ್ತಾಕ್ ಅವರನ್ನು ಜಿಲ್ಲಾಡಳಿತದಿಂದ ಅಧಿಕೃತವಾಗಿ ಬುಧುವಾರ ಆಮಂತ್ರಣ ನೀಡಲಾಯತು. ಹಾಸನದ ಅವರ ನಿವಾಸದಲ್ಲಿ ಅಧಿಕಾರಿಗಳು ಆಹ್ವಾನ ನೀಡಿದರು. ಮೈಸೂರು ಪೇಟ ತೋಡಿಸಿ, ಫಲಪುಷ್ಪ ನೀಡಿ ಸಾಂಪ್ರದಾಯಿಕ ಸ್ವಾಗತಿಸಿದರು.

# ಮೈಸೂರಿಂದ ಧರ್ಮಸ್ಥಳ ಯಾತ್ರೆ ಕೈಗೊಂಡ ಕಾಂಗ್ರೆಸ್ ಶಾಸಕ ಕೆ ಹರೀಶ್‌ಗೌಡ: ತನ್ವೀರ್ ಸೇಠ್ ಚಾಲನೆ



**ಮೈಸೂರು :** ಧರ್ಮಸ್ಥಳ ಅಪಪ್ರಚಾರ ವಿಚಾರವಾಗಿ ಕಾಂಗ್ರೆಸ್, ಬಿಜೆಪಿ, ಜೆಡಿಎಸ್ ನಡುವೆ ಜಟಾಪಟಿ ಮುಂದುವರಿದಿದ್ದು, ವಿಪಕ್ಷಗಳ ಬಳಿಕ ಕಾಂಗ್ರೆಸ್ ಕುಡಾ ಈಗ ಧರ್ಮಸ್ಥಳ ಯಾತ್ರೆ ಕೈಗೊಂಡಿದೆ.

ಮೈಸೂರಿನ ಚಾಮರಾಜ ಕ್ಷೇತ್ರದ ಶಾಸಕ ಹರೀಶ್ ಗೌಡ ನೇತೃತ್ವದಲ್ಲಿ ಧರ್ಮಸ್ಥಳ ಯಾತ್ರೆ ಕೈಗೊಂಡಿದ್ದು, ಬುಧವಾರ ಬೆಳಿಗ್ಗೆ ಮೈಸೂರಿನಿಂದ ಧರ್ಮಸ್ಥಳಕ್ಕೆ ಪ್ರಯಾಣ ನಡೆಸಿದ್ದಾರೆ. ಅರಮನೆಯ ಕೋಟೆ ಆಂಜನೇಯಸ್ವಾಮಿ ದೇಗುಲದ ಬಳಿಯಿಂದ 30ಕ್ಕೂ ಹೆಚ್ಚು ಬಸ್, ಕಾರುಗಳಲ್ಲಿ 2000ಕ್ಕೂ ಹೆಚ್ಚು ಜನ ಧರ್ಮಸ್ಥಳ ಯಾತ್ರೆ ನಡೆಸಿದ್ದಾರೆ.

ಧರ್ಮಸ್ಥಳದ ಧರ್ಮಾಧಿಕಾರಿ ಡಾ. ವೀರೇಂದ್ರ ಹೆಗಡೆ ಅವರನ್ನು ಬೆಂಬಲಿಸಿ ಯಾತ್ರೆ ಹಮ್ಮಿಕೊಂಡಿದ್ದಾರೆ . ಈ ಬಗ್ಗೆ ಮಾತನಾಡಿದ ಶಾಸಕ ಹರೀಶ್ ಗೌಡ ಧರ್ಮದ ವಿಚಾರದಲ್ಲಿ ಯಾರು ಕೂಡ ರಾಜಕಾರಣ ಮಾಡಬಾರದು, ನಾವು ಎಲ್ಲಾ ಜಾತಿ ಧರ್ಮದ ಜನರು ಒಟ್ಟಾಗಿ ಯಾತ್ರೆ ಮಾಡುತ್ತಿದ್ದೇವೆ. ಅದಕ್ಕಾಗಿ ಮಾಜಿ ಸಚಿವ ತನ್ವೀರ್ ಸೇಠ್ ನಮ್ಮ ಯಾತ್ರೆಗೆ ಚಾಲನೆ ನೀಡಿದ್ದಾರೆ. ನಾವು ದೇವಸ್ಥಾನ ಮಸೀದಿಗಳಿಗೆ ಹೋಗುತ್ತೇವೆ. ನಮಗೆ ಯಾವುದೇ ಭೇದ ಭಾವ ಇಲ್ಲ. ಧರ್ಮಸ್ಥಳದ ವಿಚಾರದಲ್ಲಿ ನಾವು ರಾಜಕಾರಣ ಮಾಡುತ್ತಿಲ್ಲ. ಮಂಜುನಾಥನ ದರ್ಶನ ಪಡೆಯಲು ಹೋಗುತ್ತಿದ್ದೇವೆ. ಧರ್ಮಸ್ಥಳವನ್ನು ಕಳಂಕರಹಿತ ಮಾಡಿದ್ದು ನಮ್ಮ ಸರ್ಕಾರ. ಬಿಜೆಪಿ ಜೆಡಿಎಸ್ ಬಗ್ಗೆ ನಾನು ಮಾತನಾಡುವುದಿಲ್ಲ ಎಂದು ಹೇಳಿದ್ದಾರೆ.

ಧರ್ಮಸ್ಥಳದ ವಿಚಾರದಲ್ಲಿ ಬಿಜೆಪಿ ಜೆಡಿಎಸ್ ಕಾಂಗ್ರೆಸ್ ನಡುವೆ ಜಟಾಪಟಿ ವಿಚಾರವಾಗಿ ಶಾಸಕ ತನ್ವೀರ್ ಸೇಠ್ ಪ್ರತಿಕ್ರಿಯೆ ನೀಡಿ, ಸಾವಿನ ಮನೆಯಲ್ಲಿ ಬೆಂಕಿ ಕಾಯಿಸುವ ಕೆಲಸ ಮಾಡಬೇಡಿ. ಈ ವಿಚಾರದಲ್ಲಿ ಯಾರು ಸಹ ರಾಜಕಾರಣ ಮಾಡಬಾರದು. ಎಸ್ ಐ ಟಿ ತನಿಖೆಯನ್ನು ಎಲ್ಲರೂ ಸ್ವಾಗತಿಸಿದ್ದಾರೆ. ಧರ್ಮಸ್ಥಳದ ಕೋಟ್ಯಾಂತರ ಭಕ್ತರ ಭಾವನೆಗೆ ಧಕ್ಕೆ ತರಬೇಡಿ. ಹಿಂದೂ ಮುಸ್ಲಿಂ ಎಲ್ಲರೂ ಭಾವೈಕ್ಯತೆಯಿಂದ ಇದ್ದಾರೆ ಎಂದರು.

ಧರ್ಮಸ್ಥಳಕ್ಕೆ ವಿದೇಶಿ ಹಣದ ವಿಚಾರವಾಗಿ ಮಾತನಾಡಿ, ಯಾವುದೇ ವಿದೇಶಿ ಹಣ ಬರುವುದು ಕೇಂದ್ರದ ಮೂಲಕ. ಹೀಗಾಗಿ ಇಂತಹ ಆರೋಪಗಳಿಗೆ ಕೇಂದ್ರವೇ ಉತ್ತರ ನೀಡಬೇಕು. ತನಿಖೆ ಎಸ್ ಐ ಟಿ ಅಥವಾ ಎನ್ ಐ ಎ ಅಲ್ಲ, ಈ ವಿಚಾರದಲ್ಲಿ ಯಾರು ರಾಜಕಾರಣ ಮಾಡಬಾರದು. ನಾನು ಯಾವ ಜಾತಿ ಧರ್ಮ, ಹರೀಶ್ ಗೌಡ ಯಾವ ಜಾತಿ. ಇಲ್ಲಿ ಹೋಗುತ್ತಿರುವವರು ಯಾವ ಜಾತಿ ಎಂಬ ವಿಚಾರ ಅಲ್ಲ.

ಎಸ್ ಐಟಿ ತನಿಖೆ ವೇಳೆ ಯಾತ್ರೆ ಆರಂಭಿಸಿದ್ದು ರಾಜಕೀಯವಲ್ಲ. ನಾವು ಮೊದಲು ಈ ಯಾತ್ರೆ ಆರಂಭಿಸಿರಲಿಲ್ಲ. ನಾವು ರಾಜಕಾರಣಕ್ಕಾಗಿ ಯಾತ್ರೆ ನಡೆಸುತ್ತಿಲ್ಲ. ಧರ್ಮಸ್ಥಳದ ಭಕ್ತರು ಧರ್ಮ ವಿಜಯ ಯಾತ್ರೆ ನಡೆಸುತ್ತಿದ್ದಾರೆ. ಈ ಯಾತ್ರೆಯಿಂದ ಎಸ್ ಐ ಟಿ ಮೇಲೆ ಪರಿಣಾಮ ಬೀರಲ್ಲ ಎಂದರು. ರಾಜಣ್ಣ ನಮ್ಮ ಪಕ್ಷದಲ್ಲಿ ಇದ್ದಾರೆ, ಅಸಮಾಧಾನಗೊಂಡು ಪಕ್ಷ ಬಿಡ್ತಾರೆ ಅಂದ್ರೆ ನಾವೇನು ಮಾಡಬೇಕು. ಎಂದು ಸದ್ಯದ ಬೆಳವಣಿಗೆ ಕುರಿತು ತನ್ವೀರ್ ಸೇಠ್ ಪ್ರತಿಕ್ರಿಯಿಸಿದರು. ನಾನು ಕೂಡ ಸಚಿವ ಸ್ಥಾನ ಸಿಗುತ್ತೇ ಅಂತ ಕಾಯುತ್ತಿದ್ದೇನೆ. ಸಿಗದೇ ಇದ್ದರೂ ನಾನು ಪಕ್ಷ ಬಿಡಲ್ಲ.

ನಾನು ಪಕ್ಷಕ್ಕಾಗಿ ನಿಷ್ಠೆಯಿಂದ ಕಾಯ್ತೀನಿ ಎಂದು ಮೈಸೂರಿನಲ್ಲಿ ಹೇಳಿಕೆ ನೀಡಿದ್ದಾರೆ.

# ಧರ್ಮಸ್ಥಳ ಪ್ರಕರಣಕ್ಕೆ ಇಡಿ ಎಂಟ್ರಿ ಬೆನ್ನಲ್ಲೇ ಎನ್ಐಎ ಅಖಾಡಕ್ಕೆ : ಕೆಲವು ಎನ್‌ಜಿಓಗಳಿಗೆ ಸಂಕಷ್ಟ




**ಬೆಂಗಳೂರು,ಸೆ.3?** ಶ್ರೀಕ್ಷೇತ್ರ ಧರ್ಮಸ್ಥಳದ ವಿರುದ್ಧ ವ್ಯವಸ್ಥಿತ ಷಡ್ಯಂತ್ರ ನಡೆಸಲು ಕೆಲವು ಎನ್‌ಜಿಓ ಹಾಗೂ ಖಾಸಗಿ ವ್ಯಕ್ತಿಗಳಿಗೆ ವಿದೇಶಿ ಹಣ ಬಂದಿರುವುದನ್ನು ಜಾರಿ ನಿರ್ದೇಶನಾಲಯ(ಇಡಿ) ಕೈಗೆತ್ತಿಕೊಳ್ಳಲು ಮುಂದಾಗಿರುವ ಬೆನ್ನಲ್ಲೇ ಇದೀಗ ರಾಷ್ಟ್ರೀಯ ತನಿಖಾ ದಳ(ಎನ್‌ಐಎ) ಕೂಡ ಅಖಾಡಕ್ಕಿಳಿದಿದೆ.

ಪ್ರಕರಣವನ್ನು ಎನ್‌ಐಎ ತನಿಖೆ ನಡೆಸಬೇಕೆಂದು ಪ್ರತಿಪಕ್ಷಗಳಾದ ಬಿಜೆಪಿ ಮತ್ತು ಜೆಡಿಎಸ್ ಪಟ್ಟು ಹಿಡಿದಿರುವ ಹಿನ್ನಲೆಯಲ್ಲಿ ಕೇಂದ್ರ ಗೃಹ ಇಲಾಖೆ ಎನ್‌ಐಎಗೆ ವಹಿಸಲು ಮುಂದಾಗಿದೆ ಎಂದು ತಿಳಿದುಬಂದಿದೆ. ಧರ್ಮಸ್ಥಳ ಪ್ರಕರಣವು ದಿನದಿಂದ ದಿನಕ್ಕೆ ಹೊಸ ಹೊಸ ಸ್ವರೂಪ ಪಡೆದು ಕೊಳ್ಳುತ್ತಿರುವುದರಿಂದ ಇದು ಪೂರ್ವನಿಯೋಜಿತ ಕುತಂತ್ರವೋ ಇಲ್ಲವೋ ಷಡ್ಯಂತ್ರವೋ ಎಂಬುದನ್ನು ಪತ್ತೆ ಮಾಡಲು ಕೇಂದ್ರ ಸರ್ಕಾರವು ವಿಶೇಷ ಆಸಕ್ತಿ ವಹಿಸಿದೆ.

ಎಸ್‌ಐಟಿ ರಾಜ್ಯ ಸರ್ಕಾರದ ವ್ಯಾಪ್ತಿಗೆ ಬರುವುದರಿಂದ ರಾಷ್ಟ್ರ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಆಳಕ್ಕಿಳಿದು ತನಿಖೆ ನಡೆಸಲು ಕಷ್ಟಕರವಾಗುತ್ತದೆ. ಎನ್‌ಐಎ ತನಿಖೆಯನ್ನು ಕೈಗೆತ್ತಿಕೊಂಡು ಎಂತಹ ಪ್ರಭಾವಿಗಳನ್ನು ಕೂಡ ವಿಚಾರಣೆಗೆ ಸತ್ಯಾಂಶವನ್ನು ಬಯಲಿಗೆಳೆಯುವ ಸಾಧ್ಯತೆ ಇರುತ್ತದೆ.

ಪ್ರಕರಣದ ಪ್ರಮುಖ ಆರೋಪಿಯಾಗಿ ಪ್ರಸ್ತುತ ಎಸ್‌ಐಟಿ ವಶದಲ್ಲಿರುವ ಚಿನ್ನಯ್ಯ ತಾನು ಕೆಲವರ ಜೊತೆ ಬುರುಡೆ ತೆಗೆದುಕೊಂಡು ದೆಹಲಿಗೆ ಹೋಗಿ ಪ್ರಭಾವಿ ವ್ಯಕ್ತಿಯೊಬ್ಬರನ್ನು ಭೇಟಿಯಾಗಿದ್ದೆ ಎಂದು ತನಿಖೆಯ ವೇಳೆ ಬಾಯ್ಬಿಟ್ಟಿದ್ದಾನೆ. ಇದೀಗ ಈ ಪ್ರಭಾವಿ ಯಾರು? ಈತನ ಹಿನ್ನಲೆ ಏನು? ಯಾವ ಉದ್ದೇಶಕ್ಕಾಗಿ ಈ ಕೃತ್ಯ ನಡೆಸಿದ್ದಾನೆ? ಈತನ ಹಿಂದೆ ಯಾರ್ಯಾರು ಇದ್ದಾರೆ ಎಂಬುದು ಸೇರಿದಂತೆ ಇಂಚಿಂಚು ಮಾಹಿತಿಯನ್ನು ಹೊರತೆಗೆಯಲು ಎನ್‌ಐಎ ಮುಂದಾಗಿದೆ. ಈ ಹಿಂದೆ ರವಿಶಂಕರ್ ಗುರೂಜಿಯ ಆರ್ಟ್ ಆಫ್ ಲೀವಿಂಗ್, ಕೇರಳದ ಮಾತಾ ಅಮೃತಾನಂದಮಯಿ, ಶಬರಿಗಿರಿ ಅಯ್ಯಪ್ಪ ಸ್ವಾಮಿ, ಮಹಾರಾಷ್ಟ್ರದ ಶನಿಸಿಂಗ್ನಾಪುರ್ ಸೇರಿದಂತೆ ಕೆಲವು ಹಿಂದೂ ಧಾರ್ಮಿಕ ಶ್ರದ್ಧಾ ಕೇಂದ್ರಗಳ ಮೇಲೆ ವ್ಯವಸ್ಥಿತವಾದ ಷಡ್ಯಂತ್ರ ನಡೆದಿತ್ತು ಎಂಬುದು ಮೇಲ್ನೋಟಕ್ಕೆ ಕಂಡುಬಂದಿತ್ತು.

**ರಂಗಪ್ರವೇಶಿಸಿದ ಸಚಿವರು**

ಪ್ರಕರಣವನ್ನು ಎನ್‌ಐಎ ತನಿಖೆಗೆ ವಹಿಸುವಂತೆ ವಿರೋಧಪಕ್ಷಗಳು ಪಟ್ಟು ಹಿಡಿದಿರುವ ಬೆನ್ನಲ್ಲೇ ಈ ಪ್ರಕರಣವನ್ನು ತಾರ್ಕಿಕ ತಿರುವಿಗೆ ಕೊಂಡೊಯ್ಯಲು ಕೇಂದ್ರ ಸಚಿವರೊಬ್ಬರು ಮುಂದಾಗಿದ್ದಾರೆ. ಧರ್ಮಸ್ಥಳ ಪ್ರಕರಣದ ಬಗ್ಗೆ ಈಗಾಗಲೇ ಸಂಘ ಪರಿವಾರ ಮತ್ತು ಬಿಜೆಪಿ ಅಗ್ರನಾಯಕರ ಜೊತೆ ಕೇಂದ್ರವನ್ನು ಪ್ರತಿನಿಧಿಸುವ ರಾಜ್ಯ ಸಚಿವರೊಬ್ಬರು ಮಾಹಿತಿ ಕಲೆ ಹಾಕಿದ್ದು, ಗೃಹಸಚಿವ ಅಮಿತ್ ಶಾ ಅವರಿಗೆ ಮಾಹಿತಿ ನೀಡಲಿದ್ದಾರೆ.

ಈಗಾಗಲೇ ಧರ್ಮಸ್ಥಳ ಬುರುಡೆ ಪ್ರಕರಣಕ್ಕೆ ಸಂಬಂಧಪಟ್ಟಂತೆ ಸಾಕಷ್ಟು ಮಾಹಿತಿ ಮತ್ತು ದಾಖಲೆ ಕಲೆ ಹಾಕಿರುವ ಸಚಿವರು ದಾಖಲೆ ಸಮೇತ ಎರಡು ಮೂರು ದಿನಗಳಲ್ಲಿ ಅಮಿತ್ ಶಾ ಭೇಟಿ ಮಾಡಿ ಮಾತುಕತೆ ನಡೆಸಲಿದ್ದಾರೆಂದು ಗೊತ್ತಾಗಿದೆ.

**ಎರಡು ಎನ್‌ಜಿಓಗಳಿಗೆ ಸಂಕಷ್ಟ**

ಧರ್ಮಸ್ಥಳ ಪ್ರಕರಣದಲ್ಲಿ ರಾಜ್ಯದ ಎರಡು ಎನ್‌ಜಿಓಗಳಿಗೆ ಕಾನೂನಿನ ಸಂಕಷ್ಟ ಎದುರಾಗುವ ಸಾಧ್ಯತೆ ಇದೆ. ಬೆಂಗಳೂರು ಹಾಗೂ ಮೈಸೂರು ಮೂಲದ ಈ ಎರಡು ಎನ್‌ಜಿಓಗಳು ಕಳೆದ ಎರಡು ವರ್ಷಗಳ ಶಿಕ್ಷಣ, ಮಕ್ಕಳ ಹಕ್ಕುಗಳು, ನೊಂದವರಿಗೆ ಸಹಾಯ ಸೇರಿದಂತೆ ವಿವಿಧ ಕ್ಷೇತ್ರಗಳಿಗೆ ಕೆಲಸ ಮಾಡುತ್ತಿವೆ.

ಈ ಹಿಂದೆ ಮಧ್ಯ ಕರ್ನಾಟಕದ ಪ್ರಮುಖ ಧಾರ್ಮಿಕ ಮುಖಂಡೊರಬ್ಬರ ವಿರುದ್ಧ ಕೇಳಿಬಂದಿದ್ದ ಮಕ್ಕಳ ಮೇಲಿನ ದೌರ್ಜನ್ಯ ಪ್ರಕರಣದಲ್ಲಿ ಈ ಸಂಸ್ಥೆ ವಿಶೇಷ ಆಸಕ್ತಿ ವಹಿಸಿ ದೂರು ನೀಡಿತ್ತು.

# ಬೆಂಗಳೂರಲ್ಲಿ ಸಂಭವಿಸಿದ ನಾಲ್ಕು ಪ್ರತ್ಯೇಕ ಅಪಘಾತ ಮತ್ತು ರೋಡ್ ರೇಜ್ ಪ್ರಕರಣಗಳಲ್ಲಿ ನಾಲ್ವರ ಸಾವು

**ಬೈಕ್‌ಗೆ ಟಾಟಾಎಸ್ ವಾಹನ ಡಿಕ್ಕಿ : ಪೇಂಟರ್ ಸಾವು..**

ಬೆಂಗಳೂರು,ಸೆ.3–ಮೂರು ವಾಹನಗಳ ಮಧ್ಯೆ ಸಂಭವಿಸಿದ ಅಪಘಾತದಲ್ಲಿ ಪೇಂಟರ್ ಮೃತಪಟ್ಟಿರುವ ಘಟನೆ ಇಂದು ಬೆಳಗ್ಗೆ ಜ್ಞಾನಭಾರತಿ ಸಂಚಾರಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ. ತಮಿಳುನಾಡು ಮೂಲದ ಮನಿಗೊಂಡನ್ (45) ಮೃತಪಟ್ಟ ಪೇಂಟರ್. ಮೂಡಲಪಾಳ್ಯದಲ್ಲಿ ವಾಸವಿದ್ದ ಇವರು ಇಂದು ಬೆಳಗ್ಗೆ 10.15 ರ ಸುಮಾರಿನಲ್ಲಿ ಮತ್ತೊಬ್ಬ ಪೇಂಟರ್ ಲಿಂಗಪ್ಪನನ್ನು ತಮ ಬೈಕ್‌ನಲ್ಲಿ ಕರೆದುಕೊಂಡು ಕೆಲಸಕ್ಕೆ ಹೋಗುತ್ತಿದ್ದರು.

ದೊಡ್ಡಬಸ್ತಿ ಮುಖ್ಯ ರಸ್ತೆಯ ಸೊನ್ನೇನಹಳ್ಳಿ ಬಸ್ ನಿಲ್ದಾಣದಲ್ಲಿ ಪ್ರಯಾಣಿಕರನ್ನು ಇಳಿಸಲು ಬಿಎಂಟಿಸಿ ಬಸ್ ನಿಂತಿತ್ತು. ಹಾಗಾಗಿ ಇವರ ಬೈಕ್ ಬಸ್ ಹಿಂದೆ ನಿಂತಿದೆ. ಆ ವೇಳೆ ಅತೀ ವೇಗವಾಗಿ ಬಂದ ಟಾಟಾಎಸ್ ವಾಹನವೊಂದು ಬೈಕ್‌ಗೆ ಡಿಕ್ಕಿ ಹೊಡೆದಾಗ ಆ ಬೈಕ್ ಬಿಎಂಟಿಸಿ ಬಸ್‌ಗೆ ಅಪ್ಪಳಿಸಿದೆ.

ಈ ಅಪಘಾತದಿಂದಾಗಿ ಬೈಕ್ ಸವಾರ ಮನಿಗೊಂಡನ್ ಗಂಭೀರ ಗಾಯಗೊಂಡು ಮೃತಪಟ್ಟಿದ್ದಾರೆ. ಹಿಂಬದಿ ಸವಾರ ಲಿಂಗಪ್ಪ ಗಾಯಗೊಂಡಿದ್ದು, ಆಸ್ಪತ್ರೆಯಲ್ಲಿ ಚಿಕಿತ್ಸೆಗೆ ದಾಖಲಿಸಲಾಗಿದೆ. ಸುದ್ದಿ ತಿಳಿದು ಜ್ಞಾನಭಾರತಿ ಸಂಚಾರಿ ಠಾಣೆ ಪೊಲೀಸರು ಸ್ಥಳಕ್ಕೆ ಆಗಮಿಸಿ, ಪರಿಶೀಲನೆ ನಡೆಸಿ ಮೃತದೇಹವನ್ನು ವಿಕ್ಟೋರಿಯಾ ಆಸ್ಪತ್ರೆಗೆ ರವಾನಿಸಿದ್ದಾರೆ. ಈ ಬಗ್ಗೆ ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಮುಂದಿನ ತನಿಖೆ ಕೈಗೊಂಡಿದ್ದಾರೆ.

**ಬೈಕ್ ಸವಾರರು, ಕಾರಿನಲ್ಲಿದ್ದವರ ಮಧ್ಯೆ ಜಗಳ : ವೃದ್ಧ ಸಾವು** ಕಾರಿಗೆ ಜಾಗ ಬಿಡಲಿಲ್ಲವೆಂಬ ಕೋಪಕ್ಕೆ ಬೈಕ್ ಸವಾರರು ಹಾಗೂ ಕಾರಿನಲ್ಲಿದ್ದವರ ಮಧ್ಯೆ ನಡೆದ ಜಗಳ, ತಳ್ಳಾಟ ನೂಕಾಟದಲ್ಲಿ ವೃದ್ಧರೊಬ್ಬರು ಕೆಳಗೆ ಬಿದ್ದು ಮೃತಪಟ್ಟಿರುವ ಘಟನೆ ಆರ್‌ಟಿನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಇಂದು ಬೆಳಗಿನ ಜಾವ ನಡೆದಿದೆ.

# 25 ವರ್ಷಗಳ ಹಿಂದೆ ವಾಜಪೇಯಿ ಹೇಳಿದ್ದು ಈಗ ನಿಜವಾಯ್ತು! ಅಮೆರಿಕಕ್ಕೆ ಪಾಠ ಕಲಿಸಲು RIC ಮುಂದಿದೆ 3 ರಣನೀತಿ

"You can change friends, but you can?t change neighbours.?"– ಸರಿಸುಮಾರು 25 ವರ್ಷಗಳ ಹಿಂದೆ ವಾಜಪೇಯಿಯವರು ಪ್ರಧಾನಿಯಾಗಿದ್ದಾಗ ಹೇಳಿದ ಮಾತಿದು.

ಅದು 1999ರ ಕಾಲ. ಭಾರತದಲ್ಲಿ ಆಗ ಪ್ರಧಾನಿಯಾಗಿದ್ದವರು ಅಟಲ್ ಬಿಹಾರಿ ವಾಜಪೇಯಿ. ಭಾರತ ಮತ್ತು ಪಾಕಿಸ್ತಾನದ ನಡುವಿನ ಸಮಸ್ಯೆಗಳನ್ನು ಸ್ನೇಹ ಸೌಹಾರ್ದತೆಯ ಮೂಲಕ ಪರಿಸರಿಸುವ ಉದ್ದೇಶದಿಂದ ಅವರು ನವದೆಹಲಿ ಮತ್ತು ಲಾಹೋರ್ ನಡುವೆ ಬಸ್ ಸಂಚಾರವನ್ನು ಆರಂಭಿಸಿದ್ದರು. ಆ ಮಾರ್ಗದ ಮೂಲಕ ಸಾಗಿದ ಮೊದಲ ಬಸ್ಸಿನಲ್ಲಿ ಖುದ್ದು ತಾವೇ ಕುಳಿತು ಲಾಹೋರ್ ವರೆಗೆ ಪ್ರಯಾಣ ಬೆಳೆಸಿದ್ದರು. ಅದೊಂದು ಐತಿಹಾಸಿಕ ಘಟನೆ.

ಲಾಹೋರ್ ನಲ್ಲಿಳಿದ ವಾಜಪೇಯಿಯವರು ಅಂದಿನ ಪಾಕಿಸ್ತಾನದ ಪ್ರಧಾನಿ ನವಾಜ್ ಷರೀಫ್ ಅವರನ್ನು ಭೇಟಿಯಾಗಿ ಉಭಯ ಕುಶಲೋಪರಿ ಮಾತನಾಡಿ, ಕೆಲವು ಔಪಚಾರಿಕ ಸಭೆಗಳನ್ನು ಮುಗಿಸಿಕೊಂಡು ಭಾರತಕ್ಕೆ ಹಿಂದಿರುಗಿದರು. ಪಾಕಿಸ್ತಾನದಲ್ಲಿ ಅವರು ಮಾಧ್ಯಮಗಳ ಮುಂದೆ ಮಾತನಾಡುವಾಗ ಅವರು, "You can change friends, but you can?t change neighbours." ಎಂಬ ಮಾತನ್ನು ಹೇಳಿದ್ದರು. ಅಂದರೆ, ?ನಾವು ನಮ್ಮ ಗೆಳೆಯರನ್ನು ಬದಲಾಯಿಸಬಹುದು, ಆದರೆ ನಮ್ಮ ನೆರೆಹೊರೆಯವರನ್ನು ಬದಲಾಯಿಸಲು ಸಾಧ್ಯವಿಲ್ಲ? ಅಂತ.

ಅವರ ಆ ಮಾತಿನಲ್ಲಿ ಗಾಢವಾದ ಒಳಾರ್ಥವಿದೆ. ಯಾವುದೇ ದೇಶವಾಗಲೀ, ಆ ದೇಶವು ಪ್ರಗತಿಯನ್ನು ಸಾಧಿಸಬೇಕಾದರೆ, ಆ ದೇಶದೊಳಗೆ ಶಾಂತಿ – ಸೌಹಾರ್ದತೆ – ನೆಮ್ಮದಿ ಇರಬೇಕು. ಅಂಥದ್ದೊಂದು ನೆಮ್ಮದಿಯಿರಬೇಕಾದರೆ ಜಗತ್ತಿನ ಎಲ್ಲಾ ರಾಷ್ಟ್ರಗಳೊಂದಿಗೆ ಸಹಕಾರ, ಕೊಟ್ಟು–ಪಡೆಯುವ ವ್ಯವಹಾರಗಳು, ಬಾಂಧವ್ಯಗಳು ಇದ್ದರೆ ಅದೆಲ್ಲವೂ ಪ್ರಗತಿಗೆ ಕಾರಣವಾಗುತ್ತದೆ ಎಂಬರ್ಥದಲ್ಲಿ ಅವರು ಹೇಳಿದ್ದರು. ಅದು ನಿಜ ಕೂಡ.




ಅವರು ಅಂದು ಹೇಳಿದ ಆ ಮಾತು, ಇವತ್ತು ನಿಜವಾಗಿದೆ. ಭಾರತದ ವಿರುದ್ಧ ಅಮೆರಿಕದ ಅಧ್ಯಕ್ಷರಾದ ಡೊನಾಲ್ಡ್ ಟ್ರಂಪ್ ಅವರು ಕಿಡಿಕಾರುತ್ತಿದ್ದಾರೆ. ನೋಬೆಲ್ ಪ್ರಶಸ್ತಿಗೆ ತಮ್ಮ ಹೆಸರನ್ನು ನಾಮಿನೇಟ್ ಮಾಡಲಿಲ್ಲವೆಂದೋ ಅಥವಾ ಪಾಕಿಸ್ತಾನ – ಭಾರತ ನಡುವೆ ಕದನ ವಿರಾಮ ತಂದಿದ್ದು ತಾವೇ ಎಂದು ಮೋದಿ ಹೇಳದಿದ್ದಿದ್ದು ಅವರು ಅಸಮಾಧಾನಕ್ಕೆ ಕಾರಣವಾಯಿತೋ? ಭಾರತದ ವಿರುದ್ಧ ಬೆಂಕಿಯನ್ನು ಉಗುಳುತ್ತಲೇ ಇದ್ದಾರೆ. ಅದರ ಪರಿಣಾಮವೇ ತೆರಿಗೆ ಅಸ್ತ್ರ ಪ್ರಯೋಗಿಸಿದ್ದಾರೆ. ಭಾರತದಿಂದ ಅಮೆರಿಕಕ್ಕೆ ಹೋಗುವ ಪ್ರತಿಯೊಂದು ಸಾಮಗ್ರಿಗಳ ಮೇಲೆ ಶೇ. 50ರಷ್ಟು ತೆರಿಗೆ ಹಾಕುವ ನಿಯಮವನ್ನು ಜಾರಿಗೆ ತಂದಿದ್ದಾರೆ. ಇದು ಭಾರತ ಮತ್ತು ಅಮೆರಿಕ ನಡುವಿನ ದೊಡ್ಡ ಕಂದಕ ಸೃಷ್ಟಿಯಾಗಲು ಕಾರಣವಾಗಿದ್ದು, ಇದಕ್ಕೆ ಪ್ರತಿತಂತ್ರ ಹೂಡಿರುವ ಭಾರತ ಕೂಡ ಅಮೆರಿಕದಷ್ಟೇ ದೈತ್ಯ ಶಕ್ತಿಗಳಾಗಿರುವ ಚೀನಾ ಹಾಗೂ ರಷ್ಯಾ ಕಡೆಗೆ ತನ್ನ ಸ್ನೇಹ ಹಸ್ತ ಚಾಚಿದೆ. ಅದೇ ಸಂದರ್ಭಕ್ಕೆ ಸರಿಯಾಗಿ ಚೀನಾದ ಬೀಜಿಂಗ್ ನಲ್ಲಿ ಆಯೋಜಿಸಲಾಗಿದ್ದ ಶಾಂಘೈ ಸಹಕಾರ ಸಂಘದ (ಎಸ್ ಸಿಒ) ಸಮ್ಮೇಳನಕ್ಕೆ ಹೋದ ಪ್ರಧಾನಿ ನರೇಂದ್ರ ಮೋದಿ, ಅಲ್ಲಿ ರಷ್ಯಾದ ಅಧ್ಯಕ್ಷ ಪುಟಿನ್, ಚೀನಾದ ಅಧ್ಯಕ್ಷ ಕ್ಸಿ ಜಿನ್ ಪಿಂಗ್ ಅವರೊಂದಿಗೆ ಮಾತುಕತೆ ನಡೆಸಿ, ಏಷ್ಯಾದಲ್ಲಿ ನಾವು ಮೂವರೂ ಸೇರಿ ಒಂದು ಪ್ರಬಲ ಶಕ್ತಿಯಾಗೋಣ ಎಂಬ ಪ್ರಸ್ತಾವನೆಯನ್ನಿಟ್ಟಿದ್ದಾರೆ. ಅದಕ್ಕೆ ಚೀನಾ, ರಷ್ಯಾ ರಾಷ್ಟ್ರಗಳು ಸಹ ಸಾಕಾರಾತ್ಮಕ ಸ್ಪಂದನೆ ನೀಡಿವೆ. ಇಲ್ಲಿಗೆ.. ಇಂಟರ್ವಲ್.. ಪಿಕ್ಚರ್ ಅಭೀ ಬಾಕಿ ಎಂಬಂತಾಗಿದೆ.

ಇಲ್ಲಿಂದ ಹೊಸ ವಿದ್ಯಮಾನ ಶುರುವಾಗಲಿದೆ. ಭಾರತ, ರಷ್ಯಾ, ಚೀನಾ, ಜಪಾನ್, ಇಂಡೋನೇಷ್ಯಾ, ತೈವಾನ್ ನಂಥ ರಾಷ್ಟ್ರಗಳು ಈಗ ಏಷ್ಯಾ ಖಂಡದ ಹೊಸ ಆರ್ಥಿಕತೆಯ ಪ್ರಧಾನ ಶಕ್ತಿಗಳಾಗಿವೆ. ಚೀನಾ, ರಷ್ಯಾ ದೇಶಗಳು ಏಷ್ಯಾದಲ್ಲಿ ತಮ್ಮದೇ ಆದ ಹೆಗ್ಗುರುತನ್ನು ಸ್ಥಾಪಿಸಿವೆ. ಭಾರತ ಅದೇ ನಿಟ್ಟಿನಲ್ಲಿ ಹೆಜ್ಜೆಯಿಡುತ್ತಿದೆ. ಈ ಮೂರು ದೇಶಗಳು ಒಂದಾಗಿ ಈ ಮೂರು ಟೆಕ್ನಿಕ್ ಗಳನ್ನು ಅನುಸರಿಸಿದರೆ ಅಮೆರಿಕಕ್ಕೆ ಧಾರಾಳವಾಗಿ ಸೆಡ್ಡು ಹೊಡೆಯಬಹುದು. ಇಂಧನದ ವಿಚಾರದಲ್ಲಿ ಭಾರತ ಹಾಗೂ ಚೀನಾ ಅತಿ ದೊಡ್ಡ ಗ್ರಾಹಕ ದೇಶಗಳು. ರಷ್ಯಾದಲ್ಲಿ ಅಪಾರ ಪ್ರಮಾಣದ ಇಂಧನ ಸಂಗ್ರಹವಿದೆ. ಕಚ್ಚಾ ತೈಲ ಹಾಗೂ ನೈಸರ್ಗಿಕ ಅನಿಲ. ಹಾಗಾಗಿ, ಭಾರತ ಮತ್ತು ಚೀನಾ ರಾಷ್ಟ್ರಗಳು ರಷ್ಯಾದ ಅತ್ಯುತ್ತಮ ಗ್ರಾಹಕರಾಗಿ, ಇಂಧನದ ವಿಚಾರದಲ್ಲಿ ಅಮೆರಿಕ ಹಾಗೂ ಕೊಲ್ಲಿ ರಾಷ್ಟ್ರಗಳ ಮೇಲೆ ಅವಲಂಬನೆಯಾಗುವುದನ್ನು ನಿಲ್ಲಿಸಿದರೆ ಅದು ಅಮೆರಿಕಕ್ಕೆ ಸೆಡ್ಡು ಹೊಡೆದಂತಾಗುತ್ತದೆ. ಚೀನಾ ಮತ್ತು ರಷ್ಯಾ ದೇಶಗಳು ತಂತ್ರಜ್ಞಾನದ ವಿಚಾರದಲ್ಲಿ ಸಾಕಷ್ಟು ಅಭಿವೃದ್ಧಿ ಸಾಧಿಸಿವೆ. ಭಾರತದಲ್ಲಿ ಅತ್ಯುತ್ತಮ ತಂತ್ರಜ್ಞರಿದ್ದಾರೆ. ಚೀನಾ – ರಷ್ಯಾದಲ್ಲಿ ಮತ್ತಷ್ಟು ಹೊಸ ತಂತ್ರಜ್ಞಾನಗಳನ್ನು ಆವಿಷ್ಕರಿಸಲು ಹಾಗೂ ಅಲ್ಲಿನ ತಂತ್ರಜ್ಞಾನವನ್ನು ಭಾರತಕ್ಕೆ ತರಲು ನಮ್ಮಲ್ಲಿನ ತಂತ್ರಜ್ಞರ ಅನುಭವ ಹಾಗೂ ಸಾಮರ್ಥ್ಯಗಳು ನೆರವಾಗಬಲ್ಲವು. ಆಗ, ಮೇಡ್ ಇನ್ ಚೀನಾ, ಮೇಡ್ ಇನ್ ರಷ್ಯಾ ಹಾಗೂ ಮೇಡ್ ಇನ್ ಭಾರತ – ಈ ಮೂರು ಉತ್ಪಾದಕತೆಗಳು ಒಗ್ಗೂಡಿದಲ್ಲಿ ಏಷ್ಯಾ ಮಟ್ಟದಲ್ಲಿ ಮಾತ್ರವಲ್ಲದೆ ಇಡೀ ಜಗತ್ತಿನಲ್ಲಿ ದೊಡ್ಡಮಟ್ಟದ ತಂತ್ರಜ್ಞಾನ ಅಭಿವೃದ್ಧಿಯನ್ನು ನಾವು ಸಾಧಿಸಬಹುದು.

## ಧರ್ಮಸ್ಥಳದಲ್ಲಿ ಶವ ಹೂತಿಟ್ಟ ಕೇಸ್; ದೂರುದಾರ ಚಿನ್ನಯ್ಯ ಮತ್ತೆ ಮೂರು ದಿನ SIT ಕಸ್ಟಡಿಗೆ



**ಬೆಳ್ತಂಗಡಿ:** ಧರ್ಮಸ್ಥಳ ಗ್ರಾಮದಲ್ಲಿ ಮೃತದೇಹಗಳನ್ನು ಹೂತುಹಾಕಲಾಗಿದೆ ಎಂದು ಅನಾಮಿಕ ದೂರುದಾರ ಅಲಿಯಾಸ್ ಚಿನ್ನಯ್ಯನ ಎಸ್‌ಐಟಿ ಕಸ್ಟಡಿ ಇಂದಿಗೆ ಅಂತ್ಯಗೊಂಡಿದ್ದ ಕಾರಣ, ಮತ್ತೆ ಕೋರ್ಟ್ ಮುಂದೆ ಹಾಜರು ಪಡಿಸಲಾಗಿತ್ತು. ಸದ್ಯ ಹೆಚ್ಚಿನ ವಿಚಾರಣೆಗಾಗಿ ನ್ಯಾಯಾಲಯವು ಆತನನ್ನು ಮೂರು ದಿನ (ಸೆ.6 ವರೆಗೆ) ಕಸ್ಟಡಿಗೆ ನೀಡಿ ಆದೇಶ ಮಾಡಿದೆ.

ಇಂದಿಗೆ ಚಿನ್ನಯ್ಯ 12 ದಿನದ ಕಸ್ಟಡಿ ಅಂತ್ಯಗೊಂಡಿತ್ತು. ಹೀಗಾಗಿ ಬೆಂಗಳೂರಿನಲ್ಲಿ ಮಹಜರು ಕಾರ್ಯ ಮುಗಿಸಿ ಸಂಜೆ 3 ಗಂಟೆಗೆ

ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ನ್ಯಾಯಾಧೀಶರ ಮುಂದೆ ಹಾಜರುಪಡಿಸಿ, ಹೆಚ್ಚಿನ ವಿಚಾರಣೆ ನಡೆಸುವ ಅಗತ್ಯವಿದ್ದು ಕಸ್ಟಡಿ ಅವಧಿ ವಿಸ್ತರಣೆಗೆ ಎಸ್‌ಐಟಿ ಮನವಿ ಮಾಡಿತ್ತು. ಈ ಹಿನ್ನಲೆ ಚಿನ್ನಯ್ಯನನ್ನು ಸೆ.6ರಂದು ಮತ್ತೆ ಹಾಜರುಪಡಿಸಲು ಕೋರ್ಟ್ ಸೂಚನೆ ಕೊಟ್ಟಿದೆ.

ಉಚಿತ ವಕೀಲರು ಬೇಕು ಎಂದು ದೂರುದಾರ ಚಿನ್ನಯ್ಯ ಕೋರ್ಟ್‌ಗೆ ಮನವಿ ನೀಡಿದ್ದರು. ಹೀಗಾಗಿ ನಾಲ್ವರು ವಕೀಲರು ಬಂದಿದ್ದರು. ವಕೀಲರಾದ ಕಿಶೋರ್ ನೇತೃತ್ವದಲ್ಲಿ ನಾಲ್ವರು ವಕೀಲರು ಚಿನ್ನಯ್ಯ ಪರ ವಾದ ಮಾಡಲು ಕೋರ್ಟ್‌ಗೆ ಹಾಜರಾಗಿದ್ದರು.

ಧರ್ಮಸ್ಥಳದಲ್ಲಿ ಅನಾಥ ಮೃತದೇಹಗಳ ಮರಣೋತ್ತರ ಪರೀಕ್ಷೆ ನಡೆಸದೆ ಹೂತು ಹಾಕಲಾಗಿದೆ ಎಂಬ ಆರೋಪವನ್ನು ದೂರುದಾರ ಚಿನ್ನಯ್ಯ ಮಾಡಿದ್ದ. ಅದರಂತೆ ಹದಿಮೂರು ಸ್ಥಳಗಳನ್ನು ಗುರುತಿಸಿ ಅಲ್ಲಿ ಉತ್ಖನನ ಕಾರ್ಯ ಮಾಡಲಾಗಿತ್ತು. ಎಸ್‌ಐಟಿ ಅಧಿಕಾರಿಗಳು ಚಿನ್ನಯ್ಯನನ್ನು ಆಗಸ್ಟ್ 22 ರಂದು ಬಂಧಿಸಿದರು. ನಂತರ, ಆಗಸ್ಟ್ 23 ರಂದು ನ್ಯಾಯಾಲಯಕ್ಕೆ ಹಾಜರುಪಡಿಸಿದರು. ಹೆಚ್ಚಿನ ವಿಚಾರಣೆಗಾಗಿ ನ್ಯಾಯಾಲಯವು ಆತನನ್ನು ಸೆಪ್ಟೆಂಬರ್ 3 ರವರೆಗೆ ಎಸ್‌ಐಟಿ ವಶಕ್ಕೆ ನೀಡಿತ್ತು.

ಧರ್ಮಸ್ಥಳ ನೂರಾರು ಶವ ಹೂತ ಪ್ರಕರಣಕ್ಕೆ ಸಂಬಂಧಿಸಿದಂತೆ ಬಿಗ್ ಅಪ್ಡೇಟ್ ನಡೆದಿದೆ. ಈ ಮಧ್ಯೆ ಸೌಜನ್ಯ ಪ್ರಕರಣ ಕುರಿತು ಎಸ್‌ಐ ಟಿ ತನಿಖೆ ಆರಂಭಿಸಿದ್ಯಾ ಎಂಬ ಪ್ರಶ್ನೆ ಮೂಡಿದೆ. ಯಾಕಂದ್ರೆ ಸೌಜನ್ಯ ಅತ್ಯಾಚಾರ ಪ್ರಕರಣ ಆರೋಪ ಹೊತ್ತವರಿಗೆ ಎಸ್‌ಐಟಿ ಬುಲಾವ್ ನೀಡಿದ್ದ ಹಿನ್ನೆಲೆ ಉದಯ್ ಕುಮಾರ್ ಜೈನ್, ಧೀರಜ್ ಕೆಲ್ಲಾ, ಮಲ್ಲಿಕ್ ಜೈನ್ ಗೆ ಬುಲಾವ್ ನೀಡಿದೆ ಎನ್ನಲಾಗಿದೆ. ಈ ಬೆನ್ನಲ್ಲೇ ಇಂದು ಬೆಳಗ್ಗೆ ಎಸ್‌ಐಟಿ ಕಚೇರಿಗೆ ಉದಯ ಕುಮಾರ್ ಜೈನ್ ಆಗಮಿಸಿದ್ದರು.

ಇದೇ ವೇಳೆ ಮಾತನಾಡಿದ ಅವರು, ಯಾವುದೇ ತನಿಖೆಗೆ ನಾವು ಸಿದ್ಧ. ಎಸ್‌ಐಟಿಗೆ ಸೌಜನ್ಯ ತಾಯಿ ಕೊಟ್ಟ ದೂರಿಗೆ ಕರೆದಿರಬಬಹುದು. ಚಿನ್ನಯ್ಯ ನೀಡಿದ ಹೇಳಿಕೆಯ ಕಾರಣಕ್ಕೂ ಕರೆದಿರಬಹುದು. ಬುರುಡೆ ಪ್ರಕರಣದ ದಿಕ್ಕು ಬದಲಿಸುವ ಹುನ್ನಾರ ಇದು. ಗುಂಡಿ ಎಲ್ಲಾ ತೋಡಿಯಾಗಿದೆ. ಈಗ ವಿಷಯಾಂತರ ಮಾಡಲು ಈ ರೀತಿ ಮಾಡುತ್ತಿದ್ದಾರೆ. ಬುರುಡೆ ಪ್ರಕರಣ ಮುಚ್ಚಿ ಹಾಕಲು ಈ ಪ್ರಕರಣವನ್ನ ಮತ್ತೆ ಮುನ್ನಲೆಗೆ ತರುತ್ತಿದ್ದಾರೆ ಎಂದರು.

ಧರ್ಮಸ್ಥಳ ಗ್ರಾಮದಲ್ಲಿರುವ ಸೌಜನ್ಯ ಮನೆಗೆ ರಾಜ್ಯ ಬಿಜೆಪಿ ನಾಯಕರು ಭೇಟಿ ನೀಡಿ ಸೌಜನ್ಯಾ ತಾಯಿ ಕುಸುಮಾವತಿ ಜೊತೆ ಬಿ.ವೈ ವಿಜಯೇಂದ್ರ ಮಾತುಕತೆ ನಡೆಸಿದ್ದಾರೆ. ಮಾತುಕತೆ ನಡೆಯುತ್ತಿರುವಾಗಲೇ ಸೌಜನ್ಯಾ ಮನೆಗೆ ಬಂದ ಸೌಜನ್ಯಳ ಮಾವನನ್ನು ಕಂಡು ಹೋಗುವ ಎಂದು ಹರೀಶ್ ಪೂಂಜಾ ಸಿಗ್ನಲ್ ಕೊಟ್ಟಿದ್ದಾರೆ. ಬೆಳ್ತಂಗಡಿ ಶಾಸಕ ಹರೀಶ್ ಪೂಂಜಾ ಕೈಸನ್ನೆ ಮಾಡುತ್ತಿರುವ ಅಅಖಿಗಿ ವೀಡಿಯೊ ವೈರಲ್ ಆಗಿದೆ.

## ಮೈಸೂರು ದಸರಾ 2025 – ಶುರುವಾಯ್ತು ಅಭಿಮನ್ಯುವಿನ 750 ಕೆಜಿ ತೂಕದ ಚಿನ್ನದ ಅಂಬಾರಿ ಹೊರುವ ತಾಲೀಮು



ಮೈಸೂರು: ವಿಶ್ವವಿಖ್ಯಾತ ಮೈಸೂರು ದಸರಾ ಮಹೋತ್ಸವ 2025. ವಿಜಯದಶಮಿ ಜಂಬೂಸವಾರಿ ಮೆರವಣಿಗೆಯಲ್ಲಿ 750 ಕೆ ಜಿ ತೂಕದ ಚಿನ್ನದ ಅಂಬಾರಿ ಹೊತ್ತು ಸಾಗಲಿರುವ ಅಭಿಮನ್ಯುವಿಗೆ ಇಂದಿನಿಂದ (ಸೆ. 3) ಭಾರ ಹೊತ್ತು ಸಾಗುವ ತಾಲೀಮು ಆರಂಭವಾಗಿದೆ. ಅರಮನೆಯ ಕೋಡಿ ಸೋಮೇಶ್ವರ ದೇಗುಲದ ಬಳಿ ಅಭಿಮನ್ಯುವಿನ ಜೊತೆಗೆ ಕುಮ್ಕಿ ಆನೆಗಳಾದ ಕಾವೇರಿ ಮತ್ತು ಹೇಮಾವತಿಗೆ ಸಾಂಪ್ರದಾಯಿಕವಾಗಿ ವಿಶೇಷ ಪೂಜೆ ನೆರವೇರಿಸಿ, ಆನೆಗಳಿಗೆ ತಾಲೀಮು ಆರಂಭಿಸಲಾಯಿತು.

ಬಳಿಕ ಅಭಿಮನ್ಯುವಿಗೆ ಸುಮಾರು 200 ಕೆ ಜಿ ತೂಕದಷ್ಟು ಗಾದಿ, ನಮ್ದಾ, ಚಾರ್ಜಮ್ (ಕಬ್ಬಿಣದ ತೊಟ್ಟಿಲು) ಕಟ್ಟಿದ ಬಳಿಕ 300 ಕೆ ಜಿ ಯಷ್ಟು ತೂಕವಿರುವ ಮರಳಿನ ಮೂಳೆಗಳನ್ನು ಹೊರಿಸಲಾಯಿತು. ಇದು ಅಂಬಾರಿಯು ಅಭಿಮನ್ಯುವಿನ ಚರ್ಮವನ್ನು ಕೊರೆಯದಿರುವಂತೆ ತಡೆಯುತ್ತದೆ.

ಮೊದಲ ದಿನದ ಭಾರ ಹೊರುವ ತಾಲೀಮಿನಲ್ಲಿ ಸುಮಾರು 500 ಕೆ ಜಿ ಭಾರ ಹೊತ್ತು ಸಾಗಿದ ಅಭಿಮನ್ಯುವಿಗೆ ಕಾವೇರಿ ಮತ್ತು ಹೇಮಾವತಿ ಆನೆಗಳು ಕುಮ್ಕಿ ಆನೆಗಳಾಗಿ ಸಾಥ್ ನೀಡಿದವು. ಅರಮನೆಯ ಬಲರಾಮ ದ್ವಾರದ ಮೂಲಕ ಹೊರ ಬಂದ ಅಭಿಮನ್ಯು ಅಂಡ್ ಟೀಮ್ ಅನತಿ ದೂರದವರೆಗೆ ಸಾಗಿದವು. ಅಭಿಮನ್ಯುವಂತೂ ಗಂಭೀರದಿಂದ ಅಂಬಾರಿ ಹೊತ್ತು ಹೆಜ್ಜೆ ಹಾಕಿದ.

ಚಾಮರಾಜೇಂದ್ರ ವೃತ್ತ, ಕೆ ಆರ್ ವೃತ್ತ, ಸಯ್ಯಾಜಿರಾವ್ ರಸ್ತೆ, ಆಯುರ್ವೇದಿಕ್ ಆಸ್ಪತ್ರೆ ವೃತ್ತ, ಹಳೆ ಆರ್ ಎಂ ಸಿ ವೃತ್ತ, ಹೈವೇ ವೃತ್ತದ ಮಾರ್ಗವಾಗಿ ಬನ್ನಿಮಂಟಪದ ಪಂಜಿನ ಕವಾಯತು ಮೈದಾನದವರೆಗೂ ಸಾಗಿ ಪುನಃ ಅದೇ ಮಾರ್ಗದಲ್ಲಿ ಅರಮನೆ ಆವರಣಕ್ಕೆ ಹಿಂತಿರುಗುವ ಮೂಲಕ ಭಾರ ಹೊತ್ತು ಸಾಗುವ ಮೊದಲ ದಿನದ ತಾಲೀಮು ಯಶಸ್ವಿಯಾಗಿದೆ. ಡಿಸಿಎಫ್ ಡಾ. ಪ್ರಭುಗೌಡ ನೇತೃತ್ವದಲ್ಲಿ ನಡೆದ ತಾಲೀಮಿಗೆ ಅರಣ್ಯ ಇಲಾಖೆಯ ಸಿಬ್ಬಂದಿಗಳು ಈ ಸಂದರ್ಭದಲ್ಲಿ ಹಾಜರಿದ್ದರು.

## ಶಿಕ್ಷಕರಿಗೆ TET ಕಡ್ಡಾಯ: ಪಾಸ್ ಮಾಡಬೇಕು ಇಲ್ಲ ರಾಜೀನಾಮೆ ನೀಡಬಹುದು – ಸುಪ್ರಿಂ ಕೋರ್ಟ್ ಆದೇಶ;



**ಹೊಸದಿಲ್ಲಿ:** ಶಿಕ್ಷಕರಾಗಿ ನೇಮಕಗೊಳ್ಳಲು ಮತ್ತು ಸೇವೆಯಲ್ಲಿರುವ ಶಿಕ್ಷಕರು ಬಡ್ತಿ ಪಡೆಯಲು ಶಿಕ್ಷಕರ ಅರ್ಹತಾ ಪರೀಕ್ಷೆ (ಟಿಇಟಿ) ಕಡ್ಡಾಯ ಎಂದು ಸುಪ್ರೀಂ ಕೋರ್ಟ್ ಹೇಳಿದೆ. ಇದರು ಸೇವೆಯಲ್ಲಿರುವ ಶಿಕ್ಷಕರಿಗೆ ದೊಡ್ಡ ಶಾಕ್ ನೀಡಿದೆ.

ಮುಂದಿನ ಐದು ವರ್ಷಗಳಿಗಿಂತ ಅಧಿಕ ಕಾಲ ಸೇವೆಯಲ್ಲಿ ಮುಂದುವರಿಯಲು ಬಯಸುವವರು ಮುಂದಿನ ಎರಡು ವರ್ಷಗಳಲ್ಲಿ ಟಿಇಟಿ ಅರ್ಹತೆ ಪಡೆಯಬೇಕು. ಇಲ್ಲದಿದ್ದರೆ ರಾಜೀನಾಮೆ ನೀಡಬಹುದು ಅಥವಾ ಅಂತಿಮ ಪ್ರಯೋಜನಗಳೊಂದಿಗೆ ಕಡ್ಡಾಯ ನಿವೃತ್ತಿಗೆ ಅರ್ಜಿ ಸಲ್ಲಿಸಬಹುದು ಎಂದು ನ್ಯಾಯಮೂರ್ತಿಗಳಾದ ದೀಪಂಕರ್ ದತ್ತಾ ಮತ್ತು ಆಗಸ್ಟಿನ್ ಜಾರ್ಜ್ ಮಸಿಹ್ ಅವರಿದ್ದ ಪೀಠ ತಿಳಿಸಿದೆ. (ಮುರುಗೇಶ್ ನಿರಾಣಿ ಪುತ್ರನ ಬಗ್ಗೆ ಸುಪ್ರೀಂ ಕೋರ್ಟ್ ಆದೇಶ)

ನಿವೃತ್ತರಾಗಲು ಕೇವಲ ಐದು ವರ್ಷ ಅಥವಾ ಅದಕ್ಕಿಂತ ಕಡಿಮೆ ಅವಧಿ ಇದ್ದರೆ ಅವರು ಟಿಇಟಿ ಅರ್ಹತೆ ಪಡೆಯಬೇಕಾಗಿಲ್ಲ. ಆದರೆ, ಅವರು ಬಡ್ತಿಗೆ ಅರ್ಹರಾಗಿರುವುದಿಲ್ಲ ಎಂದು ಪೀಠ ಸ್ಪಷ್ಟಪಡಿಸಿದೆ.

ಬೋಧನಾ ಸೇವೆಗೆ ಟಿಇಟಿ ಕಡ್ಡಾಯವೇ ಎಂಬ ಬಗ್ಗೆ ತಮಿಳುನಾಡು ಮತ್ತು ಮಹಾರಾಷ್ಟ್ರ ಸರಕಾರಗಳು ಸಲ್ಲಿಸಿದ ಅರ್ಜಿಗಳನ್ನು ವಿಚಾರಣೆ ನಡೆಸಿದ ಸರ್ವೋಚ್ಚ ನ್ಯಾಯಾಲಯವು ಈ ರೀತಿಯಾಗಿ ಹೇಳಿದೆ.

# ಚಾಮುಂಡಿ ಬೆಟ್ಟ ಹಿಂದೂಗಳ ಆಸ್ತಿಯಲ್ಲ: ಡಿ.ಕೆ. ಶಿವಕುಮಾರ್



**ಬೆಂಗಳೂರು:** "ಚಾಮುಂಡಿ ಬೆಟ್ಟಕ್ಕೆ ಎಲ್ಲ ಧರ್ಮದವರಿಗೂ ಪ್ರವೇಶವಿದೆ. ಎಲ್ಲಾ ಸಮಾಜದವರು ಚಾಮುಂಡಿ ಬೆಟ್ಟಕ್ಕೆ ಹೋಗುತ್ತಾರೆ, ದೇವರ ಬಳಿ ಪ್ರಾರ್ಥನೆ ಮಾಡಿಕೊಳ್ಳುತ್ತಾರೆ. ಇದು ಹಿಂದೂಗಳ ಆಸ್ತಿಯಲ್ಲ" ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಹೇಳಿದರು. ಮೈಸೂರು ದಸರಾ ಉದ್ಘಾಟನೆಗೆ ಬಾನು ಮುಷ್ತಾಕ್ ಬೇಡ ಎಂಬ ಬಿಜೆಪಿ ನಾಯಕರ ವಿರೋಧದ ಬಗ್ಗೆ ವಿಧಾನಸೌಧದಲ್ಲಿ ಪ್ರತಿಕ್ರಿಯೆ ನೀಡಿದರು.

"ನಾವುಗಳು ಮಸೀದಿ, ದರ್ಗಾಗಳಿಗೆ, ಜೈನರ ಬಸದಿಗಳಿಗೆ, ಚರ್ಚ್, ಗುರುದ್ವಾರಗಳಿಗೆ ಹೋಗುತ್ತೇವೆ. ನಾವು ಗುರುದ್ವಾರಕ್ಕೆ ಹೋಗೋದನ್ನ ಯಾರಾದರೂ ತಪ್ಪಿಸಿದ್ದಾರಾ? ಹಿಂದೂ ದೇವಸ್ಥಾನಗಳಿಗೆ ಅವರುಗಳು ಬರುವುದನ್ನು ನಾವು ವಿರೋಧಿಸಿದ್ದೇವೆಯೇ ಯಾವುದೇ ಶ್ರದ್ಧಾ ಕೇಂದ್ರಗಳಿಗೆ ಯಾರು ಬೇಕಾದರೂ ಹೋಗಿ ಬರಬಹುದು" ಎಂದರು.

ಬೇರೆ ಧರ್ಮದವರು ಹಿಂದೂಗಳಾಗಿ ಮತಾಂತರವಾಗಿಲ್ಲವೇ "ಎಷ್ಟೋ ಜನ ಹಿಂದೂಗಳು ಮುಸ್ಲಿಮರಾಗಿ, ಕ್ರಿಶ್ಚಿಯನ್ನರಾಗಿ ಹಾಗೂ ಬೇರೆ ಧರ್ಮದವರು ಹಿಂದೂಗಳಾಗಿ ಮತಾಂತರವಾಗಿಲ್ಲವೇ ಮುಸ್ಲಿಮರು ಹಿಂದೂ ಧರ್ಮದ ಆಚರಣೆಗಳನ್ನು ಮಾಡುತ್ತಿಲ್ಲವೇ ಅಯೋಧ್ಯೆ ರಾಮನಿಗೆ ಹಿಂದುಗಳು ಮಾತ್ರ ಬರಬೇಕು ಎಂದು ಏಕೆ ಬೋರ್ಡ್ ಹಾಕಿಲ್ಲ? ಬಿಜೆಪಿ ಸರ್ಕಾರ ಇದ್ದ ವೇಳೆ ಹಾಗೂ ಈಗ ಇಡೀ ದೇಶದಲ್ಲಿ ಹಜ್ ಕಮಿಟಿ, ಅಲ್ಪಸಂಖ್ಯಾತ ಇಲಾಖೆಗಳನ್ನು ಏಕೆ ರದ್ದು ಮಾಡಲಿಲ್ಲ ಇದೆಲ್ಲವೂ ರಾಜಕೀಯ" ಎಂದು ತಿರುಗೇಟು ನೀಡಿದರು.

ಗ್ರೇಟರ್ ಬೆಂಗಳೂರು ಪ್ರಾಧಿಕಾರ ರಚಿಸಿ ಸರ್ಕಾರ ಆದೇಶ; ಸಿಎಂ ಸಿದ್ದರಾಮಯ್ಯ ಅಧ್ಯಕ್ಷ, ಡಿಸಿಎಂ ಡಿಕೆಶಿ ಉಪಾಧ್ಯಕ್ಷ "ನಮ್ಮದು ಜಾತ್ಯತೀತ ರಾಷ್ಟ್ರ. ನಮ್ಮ ಸಂವಿಧಾನದ ಮೂಲಕ ಎಲ್ಲರಿಗೂ ಅವಕಾಶ, ಸ್ವಾತಂತ್ರ್ಯ ಕಲ್ಪಿಸಲಾಗಿದೆ. ಎಲ್ಲರಿಗೂ ಸಂವಿಧಾನದ ರಕ್ಷಣೆಯಿದೆ. ಎಲ್ಲರಿಗೂ ಅವರವರ ನಂಬಿಕೆ ಮೇಲೆ ವಿಶ್ವಾಸವಿದೆ. ಮುಸ್ಲಿಂ ಅಥವಾ ಕ್ರಿಶ್ಚಿಯನ್ ಹೆಣ್ಣು, ಹಿಂದು ಅಥವಾ ಇತರೇ ಧರ್ಮದ ಗಂಡಿಗೆ ಜನಿಸಿದ ಮಕ್ಕಳು ತಮಗೆ ಬೇಕಾದ್ದನ್ನು ಅನುಸರಿಸುತ್ತಾರೆ" ಎಂದರು.

# ಅಲೆಮಾರಿ ಅಭಿವೃದ್ಧಿ ನಿಗಮದಿಂದ ಆರ್ಥಿಕ ನೆರವು

**ಚಿಕ್ಕಮಗಳೂರು :** ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮಗಳಿಂದ 2025-26ನೇ ಸಾಲಿನಲ್ಲಿ ವಿವಿಧ ಯೋಜನೆಗಳಡಿ ಅರ್ಜಿಯನ್ನು ಆಹ್ವಾನಿಸಲಾಗಿದೆ. ಸಾಲ ಸೌಲಭ್ಯವನ್ನು ಪಡೆಯಲು ಇಚ್ಛಿಸುವ ಅರ್ಹ ಫಲಾಪೇಕ್ಷಿಗಳು ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಬೇಕಾಗಿ ತಿಳಿಸಿದೆ. 2025-26ನೇ ಸಾಲಿನ ವಿವಿಧ ಯೋಜನೆಗಳಿಗೆ ಪರಿಶಿಷ್ಟ ಜಾತಿಯ ಅರ್ಹ ಫಲಾಪೇಕ್ಷಿಗಳಿಗೆ ನಿಗಮಗಳಿಂದ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳು ಇಂತಿವೆ. ಸ್ವಯಂ ಉದ್ಯೋಗ ನೇರ ಸಾಲ ಯೋಜನೆಯಡಿ ಕಿರು ಆರ್ಥಿಕ ಚಟುವಟಿಕೆ ಪ್ರಾರಂಭಿಸಲು ಹಾಗೂ ಕುರಿ ಸಾಕಾಣಿಕೆ, ಉದ್ಯಮ ಶೀಲತಾ ಅಭಿವೃದ್ಧಿ ಯೋಜನೆ(ಬ್ಯಾಂಕ್‌ಗಳ ಸಹಯೋಗದೊಂದಿಗೆ)ಯಡಿ ಸ್ವಾವಲಂಬಿ ಸಾರಥಿ ಯೋಜನೆ, ಫಾಸ್ಟ್ ಫುಡ್ ಟ್ರಕ್ ಟ್ರೈಲರ್, ಮೊಬೈಲ್ ಕಿಚನ್ ಫುಡ್ ಕಿಯೋಸ್ಕ್, ಹೈನುಗಾರಿಕೆ, ಉದ್ಯಮ ಶೀಲತಾ ಅಭಿವೃದ್ಧಿ ಯೋಜನೆ, ಮೈಕ್ರೋ ಕ್ರೆಡಿಟ್ ಯೋಜನೆ, ಭೂ ಒಡೆತನ ಯೋಜನೆ, ಗಂಗಾ ಕಲ್ಯಾಣ ಯೋಜನೆಯಡಿ ಸೌಲಭ್ಯಗಳನ್ನು ನಿಗಮದಿಂದ ಅನುಷ್ಠಾನಗೊಳಿಸಲಾಗಿದೆ. ಅರ್ಜಿಗಳನ್ನು ಸಲ್ಲಿಸಲು ಸೆಪ್ಟಂಬರ್ 10 ಕೊನೆಯ ದಿನವಾಗಿದೆ.

# ಬೀಜಾಮೃತ: ತಯಾರಿಕೆ, ಬಳಕೆ ಮತ್ತು ಪ್ರಯೋಜನದ ಬಗ್ಗೆ ಮಾಹಿತಿ

**ಚಿಕ್ಕಮಗಳೂರು, ಆ.6:** ಬೀಜಾಮೃತವು ಶಿಲೀಂಧ್ರ, ಮಣ್ಣು ಮತ್ತು ಬೀಜದಿಂದ ಹರಡುವ ರೋಗಗಳನ್ನು ನಿಯಂತ್ರಿಸಿ, ಚಿಕ್ಕ ಬೇರುಗಳನ್ನು ರಕ್ಷಿಸುವ ಪರಿಣಾಮಕಾರಿ ಸಾವಯವ ಉಪಚಾರವಾಗಿದ್ದು, ಬೆಳೆಯ ಆರೋಗ್ಯಕರ ಬೆಳವಣಿಗೆಗೆ ಸಹಕಾರಿಯಾಗುತ್ತದೆ ಎಂದು ಜಂಟಿ ಕೃಷಿ ನಿರ್ದೇಶಕಿ ಹೆಚ್.ಎಸ್.ಸುಜಾತ ತಿಳಿಸಿದ್ದಾರೆ.

ಈ ಬಗ್ಗೆ ಮಾಹಿತಿ ನೀಡಿರುವ ಅವರು, ಬೀಜಾಮೃತ ತಯಾರಿಕೆಗೆ ಬೇಕಾಗುವ ಸಾಮಗ್ರಿಗಳ ಬಗ್ಗೆ ವಿವರ ನೀಡಿದ್ದಾರೆ. 100 ಕಿ.ಗ್ರಾಂ ಬೀಜಕ್ಕೆ ದೇಶಿ ಆಕಳ ಸಗಣಿ 5ಕಿ.ಗ್ರಾಂ, ದೇಶಿ ಆಕಳ ಮೂತ್ರ: 5 ಲೀಟರ್, ನೀರು 20 ಲೀಟರ್ ಹಾಗೂ 50 ಗ್ರಾಂ ಸುಣ್ಣ ಅವಶ್ಯಕತೆ ಇದೆ. ಬೀಜ ಬಿತ್ತುವ ಹಿಂದಿನ ದಿನ 5 ಕಿ.ಗ್ರಾಂ ಸಗಣಿಯನ್ನು ಮಂಜರಪಟ್ಟಿ ಬಟ್ಟೆಯಲ್ಲಿ ಕಟ್ಟಿ, 50 ಲೀಟರ್ ಅಳತೆಯ ಡ್ರಮ್‌ನಲ್ಲಿ 20 ಲೀ. ನೀರಿನಲ್ಲಿ ಒಂದು ರಾತ್ರಿ ತೂಗುಹಾಕಿ ಮುಳುಗಿಸಿ ಇಡಬೇಕು. ಡ್ರಮ್‌ನ ತಳಕ್ಕೆ ತಾಗದಂತೆ ಕಟ್ಟಿಗೆಯಿಂದ ಜೋಡಿಸಬೇಕು.

ಸಸಿಗಳ ಬೇರುಗಳನ್ನು ಉಪಚರಿಸಲು ಸಗಣಿಯನ್ನು ನೇರವಾಗಿ ಗೋಮೂತ್ರದೊಂದಿಗೆ ಬೆರೆಸಿ ಬಳಸಬೇಕು. ಮತ್ತೊಂದು ಲೀಟರ್ ಪ್ರಮಾಣದ ಬಟ್ಟಲಿನಲ್ಲಿ 50 ಗ್ರಾಂ ಸುಣ್ಣವನ್ನು ಒಂದು ಲೀಟರ್ ನೀರಿನಲ್ಲಿ ಕರಗಿಸಿ ತಿಳಿ ದ್ರಾವಣ ತಯಾರಿಸಬೇಕು. ಮಾರನೆ ದಿನ, ಸಗಣಿಯನ್ನು ಕಿವುಚಿ ಘನ ಪದಾರ್ಥವನ್ನು ತೆಗೆದು, ಈ ದ್ರಾವಣಕ್ಕೆ ಮೇಲಿನಂತೆ ತಯಾರಿಸಿಕೊಂಡ ಸುಣ್ಣದ ತಿಳಿ ನೀರು ಮತ್ತು 5 ಲೀಟರ್ ಗೋಮೂತ್ರವನ್ನು ಸೇರಿಸಬೇಕು. ತೆಳು ಪದರದ ಬೀಜಗಳಾದ ಸೋಯಾ, ಅವರೆ, ಶೇಂಗಾವನ್ನು ಹೊರತುಪಡಿಸಿ, ಇತರ ಬೀಜಗಳನ್ನು ಬೀಜಾಮೃತದಲ್ಲಿ 5 ನಿಮಿಷ ನೆನೆಹಾಕಿ, ನೆರಳಿನಲ್ಲಿ ಒಣಗಿಸಬೇಕು. ತೆಳು ಪದರದ ಬೀಜಗಳನ್ನು ಗೋಣಿಚೀಲದ ಮೇಲೆ ಹರಡಿ, ಬೀಜಾಮೃತವನ್ನು ಚಿಮುಕಿಸಿ, ಬೆರಳಿನಿಂದ ಲೇಪನ ಮಾಡಬೇಕು. ಗೋಣಿಚೀಲವು ಹೆಚ್ಚುವರಿ ನೀರನ್ನು ಹೀರಿಕೊಂಡು ಬೀಜವನ್ನು ಶೀಘ್ರವಾಗಿ ಒಣಗಿಸಲು ಸಹಾಯಕವಾಗುತ್ತದೆ.

ಸಗಣಿಯು ಶಿಲೀಂಧ್ರ ರೋಗಗಳನ್ನು ತಡೆಗಟ್ಟುತ್ತದೆ. ಗೋಮೂತ್ರವು ರೋಗಕಾರಕ ದುಂಡಾಣುಗಳನ್ನು ನಿಯಂತ್ರಿಸುತ್ತದೆ. ಸುಣ್ಣವು ಜೀವಾಮೃತದ ಆಸ್ತೀಯತೆಯನ್ನು ತಟಸ್ಥಗೊಳಿಸುತ್ತದೆ. ಬೀಜಾಮೃತವು ಬೀಜದ ಶೀಘ್ರ ಮೊಳಕೆಗೆ ಸಹಾಯಕವಾಗಿದೆ, ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸುತ್ತದೆ. ಬೀಜಾಮೃತವು ಮಣ್ಣು ಮತ್ತು ಬೀಜದಿಂದ ಹರಡುವ ರೋಗಗಳನ್ನು ನಿಯಂತ್ರಿಸಿ, ಬೆಳೆಯ ಆರೋಗ್ಯಕರ ಬೆಳವಣಿಗೆಗೆ ಸಹಕಾರಿಯಾಗುತ್ತದೆ ಎಂದು ಅವರು ತಿಳಿಸಿದ್ದಾರೆ.

# ರಾಜ್ಯ ಸರ್ಕಾರ ವಿರುದ್ಧ ಕರುನಾಡ ವಿಜಯಸೇನೆ ಪ್ರತಿಭಟನೆ




**ಚಿತ್ರದುರ್ಗ :** ಆರ್.ಸಿ.ಬಿ. ತಂಡ ಹದಿನೆಂಟು ವರ್ಷಗಳ ನಂತರ ಫೈನಲ್ ಕಪ್ ಗೆದ್ದಿರುವುದಕ್ಕೆ ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಏರ್ಪಡಿಸಲಾಗಿದ್ದ ಸಂಭ್ರಮಾಚರಣೆ ವೇಳೆ ಉಂಟಾದ ನೂಕು ನುಗ್ಗಲಿನಲ್ಲಿ 11 ಮಂದಿ ಬಲಿಯಾಗಿರುವುದಕ್ಕೆ ಬೆಂಗಳೂರಿನ ಪೊಲೀಸ್ ಕಮಿಷನರ್ ಬಿ.ದಯಾನಂದ್ ಸೇರಿದಂತೆ ಐವರು ಪೊಲೀಸ್ ಅಧಿಕಾರಿಗಳನ್ನು ಅಮಾನತ್ತುಗೊಳಿಸಿರುವ ರಾಜ್ಯ ಸರ್ಕಾರದ ಕ್ರಮವನ್ನು ವಿರೋಧಿಸಿ ಕರುನಾಡ ವಿಜಯಸೇನೆಯಿಂದ ಜಿಲ್ಲಾ ರಕ್ಷಣಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿ ನಗರ ಪೊಲೀಸ್ ಠಾಣೆ ವೃತ್ತ ನಿರೀಕ್ಷಕರಿಗೆ ಮನವಿ ಸಲ್ಲಿಸಲಾಯಿತು.

ಯಾವುದೇ ಪೂರ್ವ ಸಿದ್ದತೆಯಿಲ್ಲದೆ ಏಕಾಏಕಿ ರಾಜ್ಯ ಸರ್ಕಾರ ಸಂಭ್ರಮಾಚರಣೆಯ ತೀರ್ಮಾನ ತೆಗೆದುಕೊಂಡು ಎಸಗಿದ ಎಡವಟ್ಟಿನಿಂದ ಹನ್ನೊಂದು ಮಂದಿಯ ಬಲಿಯಾಗಿದೆಯೇ ವಿನಃ ಪೊಲೀಸರ ನಿರ್ಲಕ್ಷ್ಯೆಯಿಂದಲ್ಲ. ಅದಕ್ಕಾಗಿ ಪೊಲೀಸ್ ಅಧಿಕಾರಿಗಳಾದ ಬಿ.ದಯಾನಂದ್, ವಿಕಾಸ್‌ಕುಮಾರ್, ಹೆಚ್.ಟಿ.ಶೇಖರ್, ಬಾಲಕೃಷ್ಣ ಗಿರೀಶ್ ಎ.ಕೆ. ಇವರುಗಳನ್ನು ಅಮಾನತ್ತುಗೊಳಿಸಿರುವುದು ಯಾವ ನ್ಯಾಯ?

# ನವಣೆಕೆರೆ ಗ್ರಾಮದಲ್ಲಿ ನೂತನ ಡಾಂಬರ್ ರಸ್ತೆ ನಿರ್ಮಾಣ ಕಾಮಗಾರಿಗೆ ಭೂಮಿ ಪೂಜೆ

**ಹೊಳಲ್ಕೆರೆ :** ಜವಾಬ್ದಾರಿಯಿಟ್ಟುಕೊಂಡು ಕೆಲಸ ಮಾಡುವವರಿಗೆ ಚುನಾವಣೆಯಲ್ಲಿ ಓಟು ಹಾಕಿ. ನೀವುಗಳೆಲ್ಲಾ ನಮ್ಮ ಮೇಲೆ ಅಭಿಮಾನವಿಟ್ಟು ಮತ ನೀಡಿ ಗೆಲ್ಲಿಸಿದ್ದೀರ. ಕೊನೆಯುಸಿರಿರುವತನ ನಿಮ್ಮಗಳ ಸೇವೆ ಮಾಡಿ ಋಣ ತೀರಿಸುತ್ತೇನೆಂದು ಶಾಸಕ ಡಾ.ಎಂ.ಚಂದ್ರಪ್ಪ ಕ್ಷೇತ್ರದ ಮತದಾರರಿಗೆ ವಾಗ್ದಾನ ಮಾಡಿದರು.

ನವಣೆಕೆರೆ ಗ್ರಾಮದಲ್ಲಿ ಕೋಟಿ ರೂ.ವೆಚ್ಚದಲ್ಲಿ ನೂತನ ಡಾಂಬರ್ ರಸ್ತೆ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ಸಲ್ಲಿಸಿ ಮಾತನಾಡಿದರು.

31 ವರ್ಷಗಳ ಕೆಳಗೆ ಪ್ರಥಮ ಬಾರಿಗೆ ಭರಮಸಾಗರ ವಿಧಾನಸಭಾ ಕ್ಷೇತ್ರದಿಂದ ಸ್ಪರ್ಧಿಸಿದ್ದಾಗ ಓಡಾಡಲು ರಸ್ತೆಗಳಿರಲಿಲ್ಲ. ಕಾರು, ಎತ್ತಿನಗಾಡಿ, ಬೈಕ್ ಸಂಚರಿಸುವುದು ಕಷ್ಟವಾಗಿತ್ತು. ಗೆದ್ದ ಮೇಲೆ 386 ಹಳ್ಳಿಗಳಲ್ಲಿ ರಸ್ತೆ ಮಾಡಿಸಿದ್ದರಿಂದ ರಸ್ತೆ ರಾಜ ಎಂಬ ಬಿರುದು ನೀಡಿ ಯುವಕರು ಹೆಗಲ ಮೇಲೆ ಹೊತ್ತು ಮೆರವಣಿಗೆ ಮಾಡಿ 2 ನೇ ಬಾರಿಗೂ ಚುನಾವಣೆಯಲ್ಲಿ ಗೆಲ್ಲಿಸಿದರು. ಹೆಗಲ ಮೇಲೆ ಕೈ ಹಾಕಿ ಡ್ರಾಮ ಮಾಡುವ ರಾಜಕಾರಣಿ ನಾನಲ್ಲ. ಸಾರ್ವಜನಿಕರ ಬದುಕನ್ನು ಸ್ವಂತ ಬದುಕೆಂದು ಅರ್ಥಮಾಡಿಕೊಂಡು ಕ್ಷೇತ್ರದ ಅಭಿವೃದ್ದಿಗೆ ಪ್ರಾಮಾಣಿಕವಾಗಿ ಶ್ರಮಿಸುತ್ತಿದ್ದೇನೆ. ಸರ್ಕಾರದಿಂದ ಹಣ ಮಂಜೂರು ಮಾಡಿಸಿಕೊಂಡು ಬರುವುದು ನನ್ನ ಕರ್ತವ್ಯ. ಕಾಮಗಾರಿಗಳು ಉತ್ತಮ ಗುಣಮಟ್ಟದಲ್ಲಿ



ನಡೆಯುತ್ತಿದೆಯೋ ಇಲ್ಲವೋ ಎನ್ನುವುದನ್ನು ವೀಕ್ಷಿಸುವ ಜವಾಬ್ದಾರಿ ಗ್ರಾಮಸ್ಥರ ಮೇಲಿದೆ ಎಂದು ಎಚ್ಚರಿಸಿದರು.

ಹೊಳಲ್ಕೆರೆ ತಾಲ್ಲೂಕಿನ ಜನರನ್ನು ಬಂಧು-ಬಳಗದವರೆಂದು ಭಾವಿಸಿದ್ದೇನೆ. 493 ಹಳ್ಳಿಗಳಲ್ಲಿಯೂ ಇಂತಹ ಕೆಲಸ ಆಗಿಲ್ಲ ಎನ್ನುವಂತಿಲ್ಲ. ಎಲ್ಲೆಲ್ಲಿ ಏನೇನು ಅಭಿವೃದ್ದಿಪಡಿಸಬೇಕೆನ್ನುವುದನ್ನು ಹುಡುಕಿ ಕೆಲಸ ಮಾಡಿಸುತ್ತಿದ್ದೇನೆ. ಕಂಚಾಪುರದಲ್ಲಿರುವ ದೊಡ್ಡ ಹಳ್ಳದ ನೀರು ವ್ಯರ್ಥವಾಗಿ ಹರಿದು ಹೋಗುತ್ತದೆಂದು ಅಲ್ಲಿನ ಜನ ಸಮಸ್ಯೆ ಹೇಳಿಕೊಂಡಾಗ ಚೆಕ್‌ಡ್ಯಾಂ ನಿರ್ಮಾಣಕ್ಕಾಗಿ 1.50 ಕೋಟಿ ರೂ.ಗಳನ್ನು ಕೊಟ್ಟಿದ್ದೇನೆ.

ಹೆಚ್.ಡಿ.ದೇವೇಗೌಡ, ಜೆ.ಹೆಚ್.ಪಟೇಲ್ ಮುಖ್ಯಮಂತ್ರಿಯಾಗಿದ್ದಾಗ ನೌಕರರಿಗೆ ಸಂಬಳ ಕೊಡಲು ಸರ್ಕಾರದಲ್ಲಿ ಹಣವಿರುತ್ತಿರಲಿಲ್ಲ. ಅಂತಹ ಕಷ್ಟದ ಕಾಲದಲ್ಲಿಯೇ ಅನುದಾನ ಮಂಜೂರು ಮಾಡಿಸಿಕೊಂಡು ಬರುತ್ತಿದ್ದೆ ಎಂದರು.

ಹೊಳಲ್ಕೆರೆ ಬಿಜೆಪಿ. ಮಂಡಲ ಮಾಜಿ ಅಧ್ಯಕ್ಷ ಎಂ.ಬಿ.ಸಿದ್ದೇಶ್, ಕುಮಾರಣ್ಣ, ಜಗದೀಶ್, ಮಹಲಿಂಗಣ್ಣ, ಚಂದ್ರಣ್ಣ, ನುಲೇನೂರು ಶೇಖರ್, ಮರುಳಸಿದ್ದಪ್ಪ, ಗುತ್ತಿಗೆದಾರ ರಾಜಶೇಖರ್ ಹಾಗೂ ಗ್ರಾಮಸ್ಥರು ಈ ಸಂದರ್ಭದಲ್ಲಿದ್ದರು.

## ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸೂಚನೆ

# ಲಿಂಗತ್ವ ಅಲ್ಪಸಂಖ್ಯಾತರ ಸಮಾಜದ ಮುಖ್ಯವಾಹಿನಿ ಸೇರ್ಪಡೆಗೆ ಕ್ರಮ ವಹಿಸಿ

**ಚಿತ್ರದುರ್ಗ :** ಸಂವಿಧಾನ ಪ್ರತಿಯೊಬ್ಬರೂ ಗೌರವಯುತವಾಗಿ ಹಾಗೂ ಸ್ವಾಭಿಮಾನದಿಂದ ಬದುಕುವ ಹಕ್ಕು ನೀಡಿದ್ದು, ಲಿಂಗತ್ವ ಅಲ್ಪಸಂಖ್ಯಾತರು ಸಮಾಜದ ಮುಖ್ಯವಾಹಿನಿಗೆ ಬರುವ ನಿಟ್ಟಿನಲ್ಲಿ ಅಧಿಕಾರಿಗಳು ಅಗತ್ಯ ಕ್ರಮವಹಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆಯ ಜಿಲ್ಲಾ ಮಟ್ಟದ ಸಮನ್ವಯ ಮತ್ತು ಉಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಲಿಂಗತ್ವ ಅಲ್ಪಸಂಖ್ಯಾತರಿಗೆ ಗುರುತಿನ ಚೀಟಿ, ಆಧಾರ್ ಕಾರ್ಡ್, ರೇಷನ್ ಕಾರ್ಡ್, ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಇಲ್ಲದಿದ್ದರೆ ಸರ್ಕಾರದ ಸೌಲಭ್ಯಗಳನ್ನು ಪಡೆಯಲು ಸಾಧ್ಯವಾಗುವುದಿಲ್ಲ. ಈ ನಿಟ್ಟಿನಲ್ಲಿ ವಿಶೇಷ ಪ್ರಕರಣ ಎಂದು ಪರಿಗಣಿಸಿ, ಈ ಕುರಿತು ಮೇಲಾಧಿಕಾರಿಗಳಿಗೆ ಪ್ರಸ್ತಾವನೆ



ಸಲ್ಲಿಸಿ, ಲಿಂಗತ್ವ ಅಲ್ಪಸಂಖ್ಯಾತರ ಸಮಸ್ಯೆಗಳನ್ನು ಅಧಿಕಾರಿಗಳು ಅರ್ಥಮಾಡಿಕೊಂಡು, ಅವರ ಸಮಸ್ಯೆಗಳಿಗೆ ಸ್ಪಂದಿಸಬೇಕು. ಈ ಸಮುದಾಯದವರಿಗೆ ಗುರುತಿನ ಚೀಟಿ, ಆಧಾರ್ ಕಾರ್ಡ್ ಹಾಗೂ ರೇಷನ್ ಕಾರ್ಡ್‌ನಲ್ಲಿ ಆಗಬೇಕಿರುವ ಅಗತ್ಯ ಬದಲಾವಣೆಗಳ ಕುರಿತಂತೆ ತಿದ್ದುಪಡಿಗಳನ್ನು ಮಾಡಿಕೊಡುವಂತೆ ವಿವಿಧ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಲಿಂಗತ್ವ ಅಲ್ಪಸಂಖ್ಯಾತರ ಕುಂದು ಕೊರತೆಗಳನ್ನು ಆಲಿಸುವ ಸಲುವಾಗಿ ಜಿಲ್ಲಾ ಮಟ್ಟ ಹಾಗೂ ತಾಲ್ಲೂಕು ಮಟ್ಟದಲ್ಲಿ ತ್ರೈಮಾಸಿಕ ಸಭೆಗಳನ್ನು ಆಯೋಜಿಸಿ, ಅವರ ಸಮಸ್ಯೆಗಳನ್ನು ಆಲಿಸಿ, ಸಮಸ್ಯೆಗೆ ಪರಿಹಾರ ಒದಗಿಸಬೇಕು ಎಂದು ತಿಳಿಸಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ವಿಜಯ್ ಕುಮಾರ್ ಮಾತನಾಡಿ, ಚಿತ್ರದುರ್ಗ ತಾಲ್ಲೂಕಿನಲ್ಲಿ 53, ಚಳ್ಳಕೆರೆ 16, ಹೊಳಲ್ಕೆರೆ 01, ಹೊಸದುರ್ಗ 03, ಹಿರಿಯೂರು 42, ಮೊಳಕಾಲ್ಮುರು 35 ಸೇರಿದಂತೆ ಪ್ರಸ್ತುತ ಜಿಲ್ಲೆಯಲ್ಲಿ ಒಟ್ಟು 150 ಲಿಂಗತ್ವ ಅಲ್ಪಸಂಖ್ಯಾತರಿದ್ದು, 78 ಲಿಂಗತ್ವ ಅಲ್ಪಸಂಖ್ಯಾತರಿಗೆ ಗುರುತಿನ ಚೀಟಿ ವಿತರಣೆ ಮಾಡಲಾಗಿದೆ. 28 ಜನರು ಗೃಹಲಕ್ಷ್ಮೀ ಯೋಜನೆಯ ಫಲಾನುಭವಿಗಳಾಗಿದ್ದಾರೆ. 139 ಲಿಂಗತ್ವ ಅಲ್ಪಸಂಖ್ಯಾತರು ಆದಾಯೋತ್ಪನ್ನಕರ ಚಟುವಟಿಕೆಯ ಸೌಲಭ್ಯ ಪಡೆದಿದ್ದಾರೆ ಎಂದು ತಿಳಿಸಿದರು. ಲಿಂಗತ್ವ ಅಲ್ಪಸಂಖ್ಯಾತರ ಸರ್ವೇಗೆ ಹೆಸರು ನೋಂದಣಿಗೆ ಮನವಿ: ಲಿಂಗತ್ವ ಅಲ್ಪಸಂಖ್ಯಾತರ ನಿಖರ ಮಾಹಿತಿ ಸಂಗ್ರಹಿಸುವ ದೃಷ್ಟಿಯಿಂದ ಜಿಲ್ಲೆಯಲ್ಲಿ ಶೀಘ್ರ ಸರ್ವೇ ಕಾರ್ಯ ಪ್ರಾರಂಭವಾಗಲಿದ್ದು, ಹೆಸರು ನೋಂದಣಿ ಮಾಡಿಸಬೇಕು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ವಿಜಯ್ ಕುಮಾರ್ ಮನವಿ ಮಾಡಿದರು. ಸರ್ಕಾರದ ಸೌಲಭ್ಯಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಅಂಕಿ ಅಂಶಗಳು ಅಗತ್ಯ. ಲಿಂಗತ್ವ ಅಲ್ಪಸಂಖ್ಯಾತರ ಸರ್ವೇ ಮಾಡುವುದು ಬಹು ದಿನಗಳ ಬೇಡಿಕೆಯಾಗಿದ್ದು, ಶೀಘ್ರದಲ್ಲಿ ಸರ್ವೇ ಕಾರ್ಯಕ್ರಮ ಪ್ರಾರಂಭವಾಗಲಿದೆ. ಲಿಂಗತ್ವ ಅಲ್ಪಸಂಖ್ಯಾತರು ಹೆಸರು ನೋಂದಣಿ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

ನಗರ ಹಾಗೂ ಗ್ರಾಮೀಣ ವ್ಯಾಪ್ತಿಯ ಲಿಂಗತ್ವ ಅಲ್ಪಸಂಖ್ಯಾತರಿಗೆ ನಿವೇಶನ ಹಾಗೂ ವಸತಿ ಸೌಲಭ್ಯ ಪಡೆಯಲು ದಾಖಲಾತಿಗಳು ಕಡ್ಡಾಯವಾಗಿ ಬೇಕಾಗಿದ್ದು, ಹೌಸಿಂಗ್ ಬೋರ್ಡ್‌ಗೆ ದಾಖಲೆಗಳು ಸಲ್ಲಿಸಲು ಸಾಧ್ಯವಾಗುತ್ತಿಲ್ಲ ಎಂದು ತಿಳಿಸಿದ ಅವರು, ಇಲಾಖೆವಾರು ಟ್ರಾನ್ಸ್‌ಜೆಂಡರ್ ಪಾಲಿಸಿ ಅನುಷ್ಠಾನಕ್ಕೆ ಅಧಿಕಾರಿಗಳು ಕ್ರಮವಹಿಸಬೇಕು. ಈಗಾಗಲೇ ಜಿಲ್ಲೆಯ ಪ್ರತಿ ಪೊಲೀಸ್ ಠಾಣಾವಾರು ನೋಡಲ್ ಅಧಿಕಾರಿಗಳ ನೇಮಕವಾಗಿದ್ದು, ಪೊಲೀಸ್ ಓರಿಯಂಟೇಷನ್ ಕಾರ್ಯಕ್ರಮ ಆಗಬೇಕು ಎಂದು ಲಿಂಗತ್ವ ಲಿಂಗತ್ವ ಅಲ್ಪಸಂಖ್ಯಾತರ ಪ್ರತಿನಿಧಿ ಮಲ್ಲು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಉಪವಿಭಾಗಾಧಿಕಾರಿ ಮೆಹಬೂಬ್ ಜಿಲಾನಿ ಖುರೇಷಿ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕಿ ರೇಷ್ಮಾ ಹಾನಗಲ್, ಆಹಾರ ಇಲಾಖೆ ಜಂಟಿ ನಿರ್ದೇಶಕ ಸಿದ್ದರಾಮಪ್ಪ, ಆರೋಗ್ಯ ಇಲಾಖೆಯ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಡಾ.ಸುಧಾ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಲಿಂಗತ್ವ ಅಲ್ಪಸಂಖ್ಯಾತರು ಇದ್ದರು.

# ಶ್ರವಣಬೆಳಗೊಳ ವಿಶ್ವ ಪಾರಂಪರಿಕ ಪಟ್ಟಿಗೆ ಸೇರಿಸಲು ಸರ್ಕಾರ ಅಗತ್ಯ ಕ್ರಮ: ಎಚ್.ಕೆ.ಪಾಟೀಲ್

**ಶ್ರವಣಬೆಳಗೊಳ:** ಸಾವಿರಾರು ವರ್ಷ ಇತಿಹಾಸ ಹೊಂದಿರುವ, ಪ್ರಾಚೀನ ಐತಿಹಾಸಿಕ ಮನ್ನಣೆ ಹೊಂದಿರುವ ವಿಶ್ವವಿಖ್ಯಾತ ಶ್ರವಣಬೆಳಗೊಳವನ್ನು ವಿಶ್ವ ಪಾರಂಪರಿಕ ಪಟ್ಟಿಗೆ ಸೇರಿಸಲು ಸರ್ಕಾರ ಈಗಾಗಲೇ ಅಗತ್ಯ ಕ್ರಮವನ್ನು ವಹಿಸಿದೆ ಎಂದು ಪ್ರವಾಸೋದ್ಯಮ ಹಾಗೂ ಕಾನೂನು ಮತ್ತು ಸಂಸದೀಯ ಸಚಿವ ಎಚ್.ಕೆ.ಪಾಟೀಲ್ ಹೇಳಿದರು.

ಶ್ರವಣಬೆಳಗೊಳದ ಶ್ರೀ ದಿಗಂಬರ ಮಠದಲ್ಲಿ ಅಯ್ಯೋ ಸಿದ್ದ ವರ್ಷ ಯೋಗ ಚಾತುರ್ಮಾಸ ಮಂಗಳ ಕಳಶ ಸ್ಥಾಪನಾ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು, ದಿಗಂಬರ ಜೈನಾಚಾರ್ಯರು ತ್ಯಾಗಿಗಳು, ಸರ್ವ ಜನರ, ಸಮಾಜದ, ಕಲ್ಯಾಣವಾಗಲೆಂದು ಎಲ್ಲವನ್ನೂ ತ್ಯಜಿಸಿದ ಮಹಾತ್ಮರಾಗಿರುತ್ತಾರೆ. ತ್ಯಾಗ ಸಂಯಮ, ಶಾಂತಿ, ವೈರಾಗ್ಯದ ಸಂದೇಶ ಸಾರುವ ಬಾಹುಬಲಿ ನೆಲಸಿರುವ ಈ ಪವಿತ್ರ ಕ್ಷೇತ್ರವು ವಿಶ್ವಕ್ಕೆ ಮಾದರಿಯಾಗಿದೆ.

ಜೈನ ಮಠದ ಬಸದಿಯ ಒಳಾಂಗಣದ ಸುತ್ತ ಗೋಡೆಯ ಮೇಲಿರುವ 1000 ವರ್ಷದ ಹಿಂದೆ ಬಿಡಿಸಿರುವ ವರ್ಣ ಚಿತ್ರಗಳು ಸುಂದರವಾಗಿದ್ದು, ಅವುಗಳ ಕಲಾ ರಚನೆಯನ್ನು ಸಂರಕ್ಷಣೆ ಮಾಡಲು ಇಲಾಖೆಗೆ ಸೂಚಿಸಿದ್ದೇನೆ ಎಂದರು.




ಹಾಗೆಯೇ ಅದಕ್ಕೆ ಎಷ್ಟೇ ಖರ್ಚಾದರೂ ಸಹ ಇಲಾಖೆಯು ಹಣಕಾಸಿನ ನೆರವನ್ನು ಒದಗಿಸುವುದಾಗಿ ಹೇಳಿದರು. ಕ್ಷೇತ್ರದ ಶ್ರೀಗಳು ಶಾಸಕ ಸಿ.ಎನ್.ಬಾಲಕೃಷ್ಣರು 2030ರ ಭಗವಾನ್ ಬಾಹುಬಲಿ ಮಹಾಮಸ್ತಕಾಭಿಷೇಕಕ್ಕೆ ಕಾರ್ಯಕ್ರಮ ರೂಪಿಸುತ್ತಿದ್ದು, ಯಾವುದೇ ಸರ್ಕಾರ ಇದ್ದರೂ ಸಹ ಅದಕ್ಕೆ ಕೈ ಜೋಡಿಸುವುದಾಗಿ ಭರವಸೆ ನೀಡಿದರು.

ಕನ್ನಡ ಸಾಹಿತ್ಯ ಕ್ಷೇತ್ರಕ್ಕೆ ಜೈನ ಧರ್ಮದ ಕವಿಗಳ ಕೊಡುಗೆ ಅಮೂಲ್ಯ ಪಂಪ, ರನ್ನ, ಪೊನ್ನ, ಜನ್ನ ನಯಸೇನರ ಸಾಹಿತ್ಯವನ್ನು ಸ್ಮರಿಸಿದರು. ರನ್ನ ಬೆಳೆಯಲಿಕ್ಕೆ ದಾನ ಚಿಂತಾಮಣಿ ಅತ್ತಿಮಬ್ಬೆಯ ಕೊಡುಗೆ ಅಸಾಧಾರಣವಾದದ್ದು ಎಂದು ಹೇಳಿದರು. ವಿಂಧ್ಯಗಿರಿಯ ಬಾಹುಬಲಿ ಬೆಟ್ಟ ಮತ್ತು ಚಂದ್ರಗಿರಿಯ ಬೆಟ್ಟಗಳ ಸಂಪರ್ಕಕ್ಕೆ ರೋಪ್ ವೇ ಒದಗಿಸಲು ಸರ್ಕಾರ ಸಿದ್ಧವಿದ್ದು, ಆದಷ್ಟು ಬೇಗ ತಾಂತ್ರಿಕ ಸಮಸ್ಯೆಯನ್ನು ಪರಿಹರಿಸುವುದಾಗಿ ಹೇಳಿದರು.

ಸಚಿವ ಡಿ.ಸುಧಾಕರ್ ಮಾತನಾಡಿ ಕಾಂಗ್ರೆಸ್ ಸರ್ಕಾರ ಕ್ಷೇತ್ರದ ಸರ್ವತೋಮುಖ ಅಭಿವೃದ್ಧಿಗೆ ಆರ್ಥಿಕ ಸಹಾಯ ನೀಡುತ್ತಾ ಬಂದಿದೆ. ಶ್ರೀ ಜೈನ ಮಠದ ಪಕ್ಕದಲ್ಲಿ ನೂತನವಾಗಿ ನಿರ್ಮಿಸುತ್ತಿರುವ ಕಲ್ಲಿನ ಚಾವುಂಡರಾಯ ಸಭಾ ಮಂಟಪಕ್ಕೆ 2 ಕೋಟಿ ರೂಗಳನ್ನು ಒದಗಿಸಲಾಗುವುದು ಎಂದರು. ಇದೊಂದು ಅಹಿಂಸಾ ಕ್ಷೇತ್ರವಾಗಿದ್ದು, ತ್ಯಾಗಿಗಳ ದರ್ಶನದಿಂದ ಸಂತಸವಾಗಿದೆ ಎಂದರು.

ಕ್ಷೇತ್ರದ ಪೀಠಾಧಿಪತಿಗಳಾದ ಸ್ವಸ್ತಿಶ್ರೀ ಅಭಿನವ ಚಾರುಕೀರ್ತಿ ಭಟ್ಟಾರಕ ಸ್ವಾಮಿಜಿ ಮಾತನಾಡಿ ಈ ಬಾರಿ ಕ್ಷೇತ್ರದಲ್ಲಿ 39 ತ್ಯಾಗಿಗಳು ಚಾತುರ್ಮಾಸ್ಯ ವ್ರತ ಆಚರಿಸುತ್ತಿದ್ದು, ಧರ್ಮ ಪ್ರಭಾವನೆಯಾಗಲಿದೆ ಎಂದರು. ಚಾತುರ್ಮಾಸ್ಯದ ಅವಧಿಯ 4 ತಿಂಗಳೂ ದೇವ ಗುರು ಶಾಸ್ತ್ರಗಳ ಅಧ್ಯಯನ ಆಗಲಿದ್ದು ತಮಗೆಲ್ಲಾ ಮುನಿಗಳ ಸಾನಿಧ್ಯ ಸಿಗಲಿದೆ ಎಂದು ಭಕ್ತರಿಗೆ ಹೇಳಿದರು.

ಕಾರ್ಯಕ್ರಮದಲ್ಲಿ ಶಾಸಕ ಸಿ.ಎನ್.ಬಾಲಕೃಷ್ಣ ಮಾತನಾಡಿ ಮೈಸೂರಿನ ಚಾಮುಂಡಿ ಬೆಟ್ಟ ಮತ್ತು ಎಲ್ಲಮ್ಮನ ಕ್ಷೇತ್ರದಂತೆ ಶ್ರವಣಬೆಳಗೊಳ ಕ್ಷೇತ್ರಕ್ಕೂ ಪ್ರಸಾದ್ ಯೋಜನೆ ತರಲು ತಾವು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ಮನವಿ ಮಾಡಿದರು.

ಪುರಾತತ್ವ ಇಲಾಖೆಯ ಅಧೀಕ್ಷಕರಾದ ಸುಜಿತ್ ನಯನ ಮಾತನಾಡಿ ಕರ್ನಾಟಕದ ಬೆಂಗಳೂರು ವಲಯದಲ್ಲಿ 129 ಸಂರಕ್ಷಿತ ಮಾನ್ಯುಮೆಂಟ್ ಗಳಿದ್ದು ಅವುಗಳ ರಕ್ಷಣಾ ಕಾರ್ಯ ನಡೆಯುತ್ತಿದೆ ಎಂದರು ಕ್ಷೇತ್ರಕ್ಕೆ ಎಲ್ಲಾ ರೀತಿಯ ಸಹಕಾರ ನೀಡಲಾಗುವುದು ಎಂದರು.

ಇದೇ ಸಂದರ್ಭದಲ್ಲಿ ಮಂಗಲ ವಾದ್ಯದೊಂದಿಗೆ ಎಲ್ಲಾ ತ್ಯಾಗಿಗಳನ್ನು ವೇದಿಕೆಗೆ ಆಹ್ವಾನಿಸಲಾಯಿತು. ವರ್ಷಾಯೋಗ ಚಾತುರ್ಮಾಸ್ಯದ ರಜತದ ಮಂಗಲ ಕಲಶದಲ್ಲಿ ಚಾರುಕೀರ್ತಿ ಶ್ರೀಗಳು ಮತ್ತು ಗಣ್ಯರು ಶ್ರೀಫಲ ಮಂಗಲ ಧ್ರವ್ಯಗಳನ್ನು ಹಾಕಿ ರಜತದ ತೆಂಗಿನಕಾಯಿಯನ್ನು ಮೇಲೆ ಇರಿಸಿದರು.

ಚಾತುರ್ಮಾಸ್ಯ ಕುರಿತು ಆಚಾರ್ಯ ಸುವಿಧಿ ಸಾಗರ ಮಹಾರಾಜರು ಮತ್ತು ವಿಧ್ಯಾಸಾಗರ ಮಹಾರಾಜರು ಆಶೀರ್ವಚನ ನೀಡಿದರು.

ಸಾನಿಧ್ಯವನ್ನು ಆಚಾರ್ಯ ವರ್ಧಮಾನ ಸಾಗರ ಮಹಾರಾಜರು ಮತ್ತು ಸಂಗಸ್ಥ ತ್ಯಾಗಿಗಳು ಕಂಬದಹಳ್ಳಿ ಜೈನಮಠದ ಬಾನುಕೀರ್ತಿ ಸ್ವಾಮೀಜಿ ವಹಿಸಿದ್ದರು.

ಕ್ಷೇತ್ರದ ವತಿಯಿಂದ ಸಚಿವರಾದ ಎಚ್.ಕೆ.ಪಾಟೀಲ್ ರವರಿಗೆ ಬೇಡಿಕೆಗಳ ಮನವಿ ಪತ್ರವನ್ನು ಸಲ್ಲಿಸಲಾಯಿತು.

ಎಲ್ಲಾ ತ್ಯಾಗಿಗಳಿಗೂ ಗಣ್ಯರು ಶ್ರೀಫಲವನ್ನು ಸಮರ್ಪಿಸಿದರು.

ಗ್ರಾಮ ಪಂಚಾಯಿತಿ ಅಧ್ಯಕ್ಷ ಅಫ್ತಾಬ್ ಪಾಷಾ, ಸದಸ್ಯ ಎಸ್.ಬಿ.ಯಶಸ್, ಜೈನ ಸಮಾಜ ಮತ್ತು ಮಹಿಳಾ ಸಮಾಜದ ಅಧ್ಯಕ್ಷರು ಮತ್ತು ಪದಾಧಿಕಾರಿಗಳು ಇದ್ದರು.

# ಪಿಎಂಎಫ್‌ಎಂ ಯೋಜನೆಯಡಿ 200 ಫಲಾನುಭವಗಳಿಗೆ 1652ಲಕ್ಷ ಸಾಲ ಮಂಜೂರು : ಜಿ.ಪಂ. ಸಿಇಓ ಗಿತ್ತೆ ಮಾಧವ ವಿಠಲ ರಾವ್

**ದಾವಣಗೆರೆ:** ಜಿಲ್ಲೆಯಾದ್ಯಂತ ಪ್ರಧಾನ ಮಂತ್ರಿಗಳ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮ ಬದ್ಧಗೊಳಿಸುವಿಕೆ ಯೋಜನೆಯಡಿ ಜಿಲ್ಲೆಯಾದ್ಯಂತ 653 ಅರ್ಜಿಗಳು ಸ್ವೀಕೃತವಾಗಿದ್ದು, ಈ ಪೈಕಿ 200 ಅರ್ಜಿಗಳಿಗೆ ರೂ.1652 ಲಕ್ಷ ಸಾಲ ಮಂಜೂರು ಮಾಡಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಹಣಾಧಿಕಾರಿ ಗಿತ್ತೆ ಮಾಧವ ವಿಠಲರಾವ್ ಹೇಳಿದರು.

ಜಿಲ್ಲಾ ಪಂಚಾಯತ್, ಕೃಷಿ ಇಲಾಖೆ ಹಾಗೂ ಆತ್ಮನಿರ್ಭರ ಭಾರತ ಅಭಿಯಾನದ ಸಹಯೋಗದಲ್ಲಿ ಮಂಗಳವಾರ ಜಿಲ್ಲಾ ಪಂಚಾಯತ್‌ನ ಎಸ್.ಎಸ್. ಮಲ್ಲಿಕಾರ್ಜುನ ಸಭಾಂಗಣದಲ್ಲಿ ಆಯೋಜಿಸಲಾದ "ಪ್ರಧಾನ ಮಂತ್ರಿಗಳ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮ ಬದ್ಧಗೊಳಿಸುವಿಕೆ ಯೋಜನೆ" ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ರೈತ ಕುಟುಂಬ, ಸಣ್ಣ ಮತ್ತು ಅತೀ ಸಣ್ಣ ಉದ್ದಿಮೆದಾರ ಹಾಗೂ ಮಹಿಳೆಯರನ್ನು ಬಲವರ್ದನೆಗೊಳಿಸಲು 2020 ರಲ್ಲಿ ಪ್ರಧಾನ ಮಂತ್ರಿಗಳ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮ ಬದ್ಧಗೊಳಿಸುವಿಕೆ ಯೋಜನೆ ಅನುಷ್ಠಾನಗೊಳಿಸಲಾಗಿದೆ. ಇದು ಭಾರತ ಸರ್ಕಾರದ ಪ್ರಮುಖ ಪ್ರಾಯೋಜಿತ ಯೋಜನೆಯಾಗಿದೆ.

ರೈತ ಬೆಳೆದ ಬೆಳೆಗೆ ತಕ್ಕ ಬೆಂಬಲ ಬೆಲೆ ಸಿಗುವುದಿಲ್ಲ.




ಆದ್ದರಿಂದ ಈ ಯೋಜನೆ ಮೂಲಕ ರೈತ ತಾನು ಬೆಳೆದ ಬೆಳೆಗೆ ನಿಗದಿತ ಬೆಲೆ ತೆರುವ ಮುಖೇನ ಸ್ಥಳೀಯವಾಗಿ ಬೆಳೆದ ರೈತ ಉತ್ಪನ್ನ, ಸಿರಿ ಧಾನ್ಯ ಬಳಸಿ ಸಣ್ಣ ಉದ್ದಿಮೆದಾರ, ಸ್ವ-ಸಹಾಯ ಸಂಘದ ಮಹಿಳೆಯರು ತಾವು ತಯಾರಿಸಿದ ಉತ್ಪನ್ನಗಳನ್ನು ಮೌಲ್ಯವರ್ಧನೆಗೊಳಿಸಬೇಕು. ಆಗ ರೈತ ಬೆಳೆದ ಬೆಳೆಗೆ ಉತ್ಪನ್ನ ಮಾರಾಟಗಾರರಿಗೆ ಸಮನಾದ ಬೆಲೆ ಸಿಗಲಿದೆ. ಉತ್ಪಾದಕರು ತಯಾರಿಸಿದ ಉತ್ಪನ್ನಕ್ಕೆ ಬ್ರ್ಯಾಂಡಿಗ್, ಸ್ಥಳೀಯವಾಗಿ ಮಾರುಕಟ್ಟೆ ವ್ಯವಸ್ಥೆ ಕಲ್ಪಿಸಿ ಬೆಂಬಲ ಬೆಲೆ ನೀಡಿ ವ್ಯಾಪಾರ ವಹಿವಾಟು ಹೆಚ್ಚಿಸಲು ಸಹಾಯ ಮಾಡಲಾಗುವುದು. ಪ್ರಮುಖವಾಗಿ ಮಹಿಳೆಯರನ್ನು ಸಬಲೀಕರಣಗೊಳಿಸುವುದು ಈ ಯೋಜನೆಯ ಉದ್ದೇಶವಾಗಿದೆ. ಸಣ್ಣ ಉದ್ದಿಮೆದಾರರು, ರೈತರು ವಿಶೇಷವಾಗಿ ಯುವಕರು ಈ ಯೋಜನೆಯ ಸದುಪಯೋಗ ಪಡೆದುಕೊಂಡು ವಿನೂತನ ಶೈಲಿಯ ಉತ್ಪನ್ನಗಳ ತಯಾರಿಕೆಯಲ್ಲಿ ತೊಡಗಿಸಿಕೊಳ್ಳಬೇಕು. ಸ್ವಂತ ಉದ್ಯಮಿಗಳಾಗಿ ನಾಲ್ಕಾರು ಜನಕ್ಕೆ ಕೆಲಸ ನೀಡುವಂತಹ ಸಾಮರ್ಥ್ಯ ವೃದ್ದಿಸಿಕೊಳ್ಳಬೇಕೆಂದು ಕಿವಿ ಮಾತು ಹೇಳಿದರು.

ಜಿಲ್ಲೆಯ ಹೊನ್ನಾಳಿ ತಾಲ್ಲೂಕಿನ ಕೂಲಂಬೆ ಗ್ರಾಮದ ರೈತ ಪಿಎಂಎಫ್‌ಎಂ ಯೋಜನೆ ಮತ್ತು ಕೃಷಿ ಇಲಾಖೆಯ ಸಹಾಯದಿಂದ ಮಿಲೆಟ್ ಬಿಸ್ಕೆಟ್ ಉತ್ಪನ್ನ ಘಟಕ ಸ್ಥಾಪಿಸಿ ಯಶಸ್ವಿಯಾಗಿದ್ದಾರೆ. ಇಂದು ಅವರು ತಯಾರಿಸಿದ ಉತ್ಪನ್ನವನ್ನು ದೇಶ ವಿದೇಶಗಳಿಗೆ ರಫ್ತು ಮಾಡಲಾಗುವುದಲ್ಲದೇ, ವಿಮಾನಗಳಲ್ಲಿ ಮಿಲೆಟ್ ಬಿಸ್ಕೆಟ್‌ನ್ನು ಬಳಸಲು ಅವಕಾಶ ದೊರಕಿದೆ. ಅದೇ ರೀತಿ ಪ್ರತಿಯೊಬ್ಬರೂ ಸಿರಿಧಾನ್ಯ ಮತ್ತು ಇತರೆ ಧಾನ್ಯಗಳ ಸಂಸ್ಕರಣೆ ಬಳಸಿ ರೋಟಿ ತಯಾರಿ, ಬೆಲ್ಲ, ನಿಂಬೆ, ಬೇಕರಿ, ಮಸಾಲಾ, ತೆಂಗು ಮತ್ತು ಕುಕ್ಕುಟ ಉತ್ಪನ್ನ ಹಾಗೂ ಕೋಲ್ಡ್ ಪ್ರೆಸ್ ಆಯಿಲ್, ಮೆಣಸಿನ ಪುಡಿ ಘಟಕ, ಶುಂಠಿ ಸಂಸ್ಕರಣ ಘಟಕ ಸೇರಿದಂತೆ ಇತರೆ ಉತ್ಪನ್ನಗಳ ತಯಾರಿಸಿ ಯಶಸ್ಸು ಕಾಣಬೇಕು. ಕೇವಲ ಗುಣಮಟ್ಟದ ಉತ್ಪನ್ನ ತಯಾರಿಸಿದರೆ ಸಾಲದು ಬ್ರ್ಯಾಂಡ್, ಪ್ಯಾಕೇಜ್ ಮತ್ತು ಮಾರುಕಟ್ಟೆ ಬಹಳ ಮುಖ್ಯ. ಸಣ್ಣ ಉದ್ದಿಮೆದಾರರಿಗೆ, ಸ್ವ-ಸಹಾಯ ಸಂಘಗಳು ತಯಾರಿಸುವ ಉತ್ಪನ್ನಗಳಿಗೆ ಬ್ರ್ಯಾಂಡಿಗ್‌ಗಾಗಿ ಅವರನ್ನು ಬಲವರ್ಧನೆಗೊಳಿಸಲು ರೂ.62 ಲಕ್ಷ ಹಣ ಇದೆ. ಅಕ್ಕ ಕೆಫೆ ರೀತಿಯಲ್ಲಿ ಉತ್ತಮ ಗುಣಮಟ್ಟ ಮತ್ತು ಆಕರ್ಷಕ ಬ್ರ್ಯಾಂಡ್, ಪ್ಯಾಕಿಂಗ್ ಮಾಡಿದಲ್ಲಿ ತಮ್ಮ ಉತ್ಪನ್ನಗಳಿಗೆ ಹೆಚ್ಚಿನ ಬೇಡಿಕೆ ದೊರೆಯಲಿದೆ. ಇದರಿಂದ ಉತ್ಪಾದಕ ಹೆಚ್ಚಿನ ಲಾಭಗಳಿಸುವುದರ ಜೊತೆಗೆ ರೈತನಿಗೆ ಉಪಯುಕ್ತವಾಗಲಿದೆ ಎಂದರು.

ಪ್ರಾಸ್ತಾವಿಕವಾಗಿ ಬೆಂಗಳೂರಿನ ಕೆಫೆಕ್ ಸಂಸ್ಥೆಯ ಚಂದ್ರಶೇಖರ್ ಮಾತನಾಡಿ, ರೈತ ಬೆಳೆ ಬೆಳೆದ ನಂತರ ಅದಕ್ಕೆ ಮೌಲ್ಯವರ್ಧನೆ ಸಿಗುವಂತೆ ಮಾರುಕಟ್ಟೆ ಸೌಲಭ್ಯ ಒದಗಿಸಿ ಸಹಾಯ ಮಾಡಲಾಗುತ್ತದೆ. ಸಣ್ಣ ಮತ್ತು ಅತೀ ಸಣ್ಣ ಉದ್ಯಮಗಳಿಗೆ ಪಿಎಂಎಫ್‌ಎಂಇ ಸಹಾಯಕವಾಗಿದೆ. ಮಹಿಳೆಯರು, ಯುವಕರು ಈ ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕು. 18 ವರ್ಷ ಮೇಲ್ಪಟ್ಟ ಪ್ರತಿಯೊಬ್ಬ ನಾಗರೀಕನೂಯೋಜನೆಯಫಲಾನುಭವಿಯಾಗಬಹುದು ಎಂದರು.

# ಹರಿಹರ ಬಿಜೆಪಿ ಶಾಸಕ ಬಿ.ಪಿ. ಹರೀಶ್ ವಿರುದ್ಧ ಎಫ್.ಐ.ಆರ್

**ದಾವಣಗೆರೆ:** ಎಸ್.ಪಿ ಉಮಾ ಪ್ರಶಾಂತ್ ಅವರಿಗೆ ಅವಹೇಳನಕಾರಿ ಹೇಳಿಕೆ ನೀಡಿದ ಹರಿಹರ ಶಾಸಕ ಬಿ.ಪಿ. ಹರೀಶ್ ವಿರುದ್ಧ ದಾವಣಗೆರೆ ಕೆಟಿಜೆ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಶಾಸಕ ಬಿ.ಪಿ.ಹರೀಶ್ ಸುದ್ದಿಗೋಷ್ಠಿಯಲ್ಲಿ ಮಾತನಾಡುವ ವೇಳೆ ಎಸ್ಪಿಯವರನ್ನು ನಾಯಿಗೆ ಹೋಲಿಸಿ ಅವಹೇಳ ಮಾಡಿದ್ದರು. ಈ ಸಂಬಂಧ ಶಾಸಕರ ವಿರುದ್ಧ ಸ್ವತಃ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಕೆಟಿಜೆ ನಗರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.

ಎಸ್ಪಿ ಬಗ್ಗೆ ಶಾಸಕರು ಹೇಳಿದ್ದೇನು..?

ದಾವಣಗೆರೆ ಎಸ್ಪಿ ಉಮಾ ಪ್ರಶಾಂತ್, ಶಾಸಕರಿಗೆ ಬೆಲೆಯೇ ಕೊಡುವುದಿಲ್ಲ. ಶಾಸಕರು ಸಭೆಯಲ್ಲಿ ಇದ್ದರೆ ಮುಖ ತಿರುಗಿಸಿ ಕೂರುತ್ತಾರೆ. ಗಂಟೆಗಟ್ಟಲೆ ಶಾಮನೂರು ಮನೆಯ ಬಾಗಿಲು ಕಾಯುತ್ತಾರೆ. ಎಸ್ಪಿ ಶಾಮನೂರು ಕುಟುಂಬದ





ಪೊಮೆರಿಯನ್ ನಾಯಿಯಂತೆ ವರ್ತಿಸುತ್ತಾರೆ. ಇವರಿಗೆ ಅಧಿಕಾರದಲ್ಲಿರುವವರು ಮಾತ್ರ ಮುಖ್ಯವಾಗಿ ಕಾಣುತ್ತಾರೆ ಎನ್ನಿಸುತ್ತದೆ. ಎಲ್ಲಾ ಜನಪ್ರತಿನಿಧಿಗಳನ್ನು ಸಮಾನವಾಗಿ ಕಾಣುವ ದೃಷ್ಟಿಕೋನ ಇಲ್ಲ. ಈ ಅಧಿಕಾರ ತಾತ್ಕಾಲಿಕ ಅನ್ನುವುದನ್ನು ಎಸ್ಪಿ ಅರಿತುಕೊಳ್ಳಬೇಕು ಎಂದು ಟೀಕಿಸಿದ್ದರು.

# ಪ್ರಥಮ ವರ್ಷದ ಬಿಕಾಂ ವಿದ್ಯಾರ್ಥಿಗಳಿಗೆ ಅಭಿ ವಿನ್ಯಾಸ ಕಾರ್ಯಕ್ರಮ

**ದಾವಣಗೆರೆ :** ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಐಕ್ಯೂಎಸಿ ಹಾಗೂ ವಾಣಿಜ್ಯಶಾಸ್ತ್ರ ವಿಭಾಗದ ವತಿಯಿಂದ ಪ್ರಥಮ ವರ್ಷದ ಬಿಕಾಂ ವಿದ್ಯಾರ್ಥಿಗಳಿಗೆ ಅಭಿ ವಿನ್ಯಾಸ ಕಾರ್ಯಕ್ರಮವನ್ನು ಆಯೋಜಿಸಲಾಯಿತು.

ಕಾರ್ಯಕ್ರಮದಲ್ಲಿ ವಾಣಿಜ್ಯ ವಿಭಾಗದ ಮುಖ್ಯಸ್ಥರಾದ ಪ್ರೊ ಸುನಿತಾ ಕೆ ಬಿ ಪ್ರಾಸ್ತಾವಿಕವಾಗಿ ಮಾತನಾಡಿ ವಿದ್ಯಾರ್ಥಿಗಳಿಗೆ ಉದ್ದೇಶಬೋಧನೆ ನೀಡಿದರು. ನಂತರ ರಾಷ್ಟ್ರೀಯ ಸೇವಾ ಯೋಜನೆ (ಎನ್‌ಎಸ್‌ಎಸ್) ಕುರಿತು ಪ್ರೊ. ಲೋಕೇಶ್ ನಾಯಕ್ ಮಾರ್ಗದರ್ಶನ ನೀಡಿದರು. ಅದೇ ರೀತಿ ಎನ್‌ಸಿಸಿ ಬಗ್ಗೆ ಪ್ರೊ ರೇಖಾ ಎಂ ಪಿ ವಿವರವಾಗಿ ವಿದ್ಯಾರ್ಥಿಗಳಿಗೆ ಪ್ರೇರಣಾದಾಯಕ ಮಾತುಗಳನ್ನು ನೀಡಿದರು. ಶಿಸ್ತು ಮತ್ತು ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸುವ ಕುರಿತು ಮಾತನಾಡಿದರು

ಕಾಲೇಜಿನ ಆಂತರಿಕ ಪರೀಕ್ಷೆಗಳ ಮಹತ್ವ, ಶಿಸ್ತು, ಸಮವಸ್ತ್ರ ಹಾಗೂ ಇತರ ನಿಬಂಧನೆಗಳ ಕುರಿತು ಪ್ರೊ ರೇಖಾ ರವರು ಮಾತನಾಡಿ ವಿದ್ಯಾರ್ಥಿಗಳಿಗೆ ಜಾಗೃತಿ ಮೂಡಿಸಿದರು. ಸಾಂಸ್ಕೃತಿಕ ಚಟುವಟಿಕೆಗಳ ಬಗ್ಗೆ ನರೇಶ್ ಯು.ಸಿ. ವಿದ್ಯಾರ್ಥಿಗಳಿಗೆ ಮಾಹಿತಿ ನೀಡಿದರು.

ವಿಭಿನ್ನ ಸಮಿತಿಗಳ ಸದಸ್ಯರು ಸಹ ಭಾಗವಹಿಸಿ ವಿದ್ಯಾರ್ಥಿಗಳಿಗೆ ಸೂಕ್ತ ಮಾರ್ಗದರ್ಶನ ನೀಡಿದರು. ಕಾರ್ಯಕ್ರಮದ ಆರಂಭದಲ್ಲಿ ಯಶೋಧ ಆರ್. ಪ್ರಾರ್ಥನೆ ಸಲ್ಲಿಸಿದರು. ಸುರೇಖಾ ರವರು ಸ್ವಾಗತಿಸಿ, ಪ್ರೊ



ಪ್ರಭುನಾಯ್ಕ್ ಕಾರ್ಯಕ್ರಮವನ್ನು ನಿರೂಪಿಸಿದರು. ಪ್ರೊ ನಿಂಗಪ್ಪ ಟಿ ಅವರು ವಂದಿಸಿದರು

ಕಚೇರಿ ವತಿಯಿಂದ ಶ್ರೀ ಜಗದೀಶ್ ರವರು ವಿದ್ಯಾರ್ಥಿಗಳಿಗೆ ಎಲ್ಲಾ ರೀತಿಯ ಸೌಕರ್ಯಗಳನ್ನು ನೀಡುವುದಾಗಿ ಹೇಳುತ್ತಾ ಹಾಗೂ ಯಾವ ಯಾವ ರೀತಿಯ ವಿದ್ಯಾರ್ಥಿ ವೇತನಗಳು ನೊಂದಣಿ ಪರೀಕ್ಷೆಗಳ ಕುರಿತು ಮಾಹಿತಿ ನೀಡಿದರು

ಐಕ್ಯೂ ಎಸಿ ಸಂಚಾಲಕರಾದ ಗುರುರಾಜ್ ಜೆ.ಪಿ. ಕಾರ್ಯಕ್ರಮದ ರೂಪರೇಖೆಯನ್ನು ವಿವರಿಸಿ, ಮುಂದಿನ ಚಟುವಟಿಕೆಗಳ ಕುರಿತು ವಿದ್ಯಾರ್ಥಿಗಳಿಗೆ ತಿಳಿಸಿದರು.

ಕಾರ್ಯಕ್ರಮದಲ್ಲಿ ಪ್ರೊ ಚೆನ್ನಬಸಪ್ಪ ಪ್ರೊ ವೆಂಕಟೇಶ್ ಬಾಬು ಎಸ್ ಪ್ರೊ ಮಂಜುನಾಥ್ ಪ್ರೊ ಚೈತ್ರ ಪಿ ಹಾಜರಿದ್ದರು

# ಈದ್‌ಮಿಲಾದ್ ಹಬ್ಬದ ಆಚರಣೆ ಸಂಚಾರ ಮಾರ್ಗ ಬದಲಾವಣೆ

**ದಾವಣಗೆರೆ :** ಸೆಪ್ಟೆಂಬರ್ 5 ರಂದು ಈದ್‌ಮಿಲಾದ್ ಹಬ್ಬದ ಪ್ರಯುಕ್ತ ವಿವಿಧ ಕಡೆ ಮೆರವಣಿಗೆ ನಡೆಸುವುದರಿಂದ ಸುಗಮ ಸಂಚಾರ ಮತ್ತು ಕಾನೂನು ಸುವ್ಯವಸ್ಥೆ ಕಾಪಾಡಲು ಅಂದು ಬೆಳಗ್ಗೆ 11 ರಿಂದ ರಾತ್ರಿ 11 ಗಂಟೆಯವರೆಗೆ ಸಂಚಾರ ಮಾರ್ಗ ಬದಲಾಯಿಸಿ ಜಿಲ್ಲಾಧಿಕಾರಿ ಜಿ.ಎಂ. ಗಂಗ ಶಿವಮೊಗ್ಗ ಬೈಪಾಸ್ ಮುಖಾಂತರ ಹೊಸ ಎನ್‌ಹೆಚ್-48 ರಸ್ತೆಯಿಂದ ಹಾಗೂ ಚಿತ್ರದುರ್ಗ, ಕಡೆಯಿಂದ ಬರುವ ಎಲ್ಲಾ ವಾಹನಗಳು ಸಹ ಆವರಗೆರೆ ಹತ್ತಿರದ ಬಾಡಾಕ್ರಾಸ್ ಮುಖಾಂತರ ಬಂದು ಸರಕು ಲಾರಿಗಳು ಡಿಸಿಎಂ ಅಂಡರ್ ಪಾಸ್ ಹತ್ತಿರದ ದನದ ಮಾರ್ಕೇಟ್ ಕ್ರಾಸ್‌ನಿಂದ ಎಪಿಎಂಸಿ ಗೆ ಹೋಗುವುದು. ಕೆಎಸ್‌ಆರ್‌ಟಿಸಿ ಬಸ್‌ಗಳು ಅದೇ ಮಾರ್ಗವಾಗಿ ಬಾಡಾಕ್ರಾಸ್ ಮುಖಾಂತರ ಆವರಗೆರೆ ಕಡಿಯಿಂದ ನೂತನ ಬಸ್ ನಿಲ್ದಾಣಕ್ಕೆ ಬಂದು ಅದೇ ಮಾರ್ಗವಾಗಿ ಬೆಂಗಳೂರು ಬೆಳಗಾವಿ ಕಡೆಗೆ ಹೋಗುವುದು. ಬಸ್‌ಗಳು ಖಾಸಗಿ ಬಸ್‌ಗಳು ಸಹ ಅದೇ ಆರ್ಗವಾಗಿ ಬಂದು ಎಂ.ಜಿ ಸರ್ಕಲ್ ಮುಖೇನ ನೂತನ ಖಾಸಗಿ ನಿಲ್ದಾಣಕ್ಕೆ ಬಂದು ಅದೇ ಮಾರ್ಗದಲ್ಲಿ ನಿರ್ಗಮಿಸಲು ಸೂಚಿಸಿದೆ. ಚನ್ನಗಿರಿ ಮಾರ್ಗವಾಗಿ ಬರುವ ಕೆಎಸ್‌ಆರ್‌ಟಿಸಿ ಬಸ್‌ಗಳು ಬಾಡಾಕ್ರಾಸ್ ಮೂಲಕ ಆವರಗೆರೆ ಕಡೆಯಿಂದ ನೂತನ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣಕ್ಕೆ ಬಂದು ನಂತರ ಅದೇ ಮಾರ್ಗವಾಗಿ ಹಿಂತಿರುಗಬೇಕು. ಖಾಸಗಿ ಬಸ್‌ಗಳು ಮಾಗನೂರು ಬಸಪ್ಪ ಪೆಟ್ರೋಲ್ ಬಂಕ್ ಹತ್ತಿರದ ಮೈದಾನದಲ್ಲಿ ಪಾರ್ಕಿಂಗ್ ಮಾಡಲು ಸ್ಥಳಾವಕಾಶ ಕಲ್ಪಿಸಿದೆ. ಚನ್ನಗಿರಿ ಕಡೆಯಂದ ಬರುವ ಸರಕು ವಾಹನಗಳು ಸಹ ಅದೇ ಮಾರ್ಗವಾಗಿ ತೆರಳಿ ಎಪಿಎಂಸಿ ಮಾರ್ಕೇಟ್‌ನಲ್ಲಿ ಪಾರ್ಕಿಂಗ್ ಮಾಡಬೇಕು.

ಜಗಳೂರು ಮತ್ತು ಹರಪನಹಳ್ಳಿ ಕಡೆಯಿಂದ ಬರುವ ಕೆಎಸ್‌ಆರ್‌ಟಿಸಿ ಬಸ್‌ಗಳು ಬೇತೂರು ರಸ್ತೆಯಲ್ಲಿ ನೂತನವಾಗಿ ನಿರ್ಮಿಸಿರುವ ಬಸ್ ನಿಲ್ದಾಣಕ್ಕೆ ಬಂದು ನಂತರ ಅದೇ ಮಾರ್ಗವಾಗಿ ಹಿಂತಿರುಗುವುದು. ಹಾಗೆಯೇ ಈ ಎರಡು ಮಾರ್ಗಗಳಿಂದ ಬರುವ ಖಾಸಗಿ ಬಸ್ ವೆಂಕಟೇಶ್ವರ ವೃತ್ತ, ಸರಕು ಲಾರಿಗಳು ಸಹ ಇದೇ ಮಾರ್ಗವಾಗಿ ಹಾಗೂ ಕೊಂಡಜ್ಜಿ ಕಡೆಯಿಂದ ಬರುವ ಕೆಎಸ್‌ಆರ್‌ಟಿಸಿ ಬಸ್‌ಗಳು ರಿಂಗ್ ರಸ್ತೆ ಮತ್ತು ಬಂಬೂ ಬಜಾರ್ ಮುಖಾಂತರ ನೂತನ ಬಸ್ ನಿಲ್ದಾಣಕ್ಕೆ ಬಂದು ಅದೇ ಮಾರ್ಗವಾಗಿ ವಾಪಸ್ ಹೋಗುವುದು.

# ಲಂಚ ಪಡೆಯುವಾಗ ಲೋಕಾಯುಕ್ತ ಬಲೆಗೆ ಬಿದ್ದ ಸಹಕಾರ ಸಂಘಗಳ ಅಭಿವೃದ್ಧಿ ಅಧಿಕಾರಿ

**ದಾವಣಗೆರೆ:** ಸಹಕಾರ ಸಂಘವೊಂದರ ಚುನಾವಣೆಗೆ ದಿನಾಂಕ ನಿಗದಿಮಾಡಲು 75 ಸಾವಿರಕ್ಕೆ ಬೇಡಿಕೆ ಇಟ್ಟು, ಮೂರು ಸಾವಿರ ಲಂಚ ಪಡೆಯುವಾಗ ಸಹಕಾರ ಸಂಘಗಳ ಅಭಿವೃದ್ಧಿ ಅಧಿಕಾರಿ ಲೋಕಾಯುಕ್ತ ಬಲೆಗೆ ಬಿದ್ದಿದ್ದಾರೆ.

ಸಹಕಾರ ಸಂಘಗಳ ಸಹಾಯಕ ನಿಬಂಧಕರ ಕಚೇರಿಯ ಸಹಕಾರ ಸಂಘಗಳ ಅಭಿವೃದ್ಧಿ ಅಧಿಕಾರಿ ಸತೀಶ್ ನಾಯ್ಕ್ ಲೋಕಾಯುಕ್ತ ಬಲೆಗೆ ಬಿದ್ದ ಅಧಿಕಾರಿ. ನಂದಿನಿ ಹಾಲು ಒಕ್ಕೂಟ ಸಹಕಾರ ರಚನೆಗೆ ಚುನಾವಣೆ ನಿಗದಿಪಡಿಸಲು 3,000 ಲಂಚ ಪಡೆಯುವಾಗ ಸಿಕ್ಕಿಬಿದ್ದಿದ್ದು, ಲೋಕಾಯುಕ್ತ ಪೊಲೀಸರು ಬಂಧಿಸಿದ್ದಾರೆ.




ಸತೀಶ್ ನಾಯ್ಕ್ ಸಂಘದ ಆಡಳಿತ ಮಂಡಳಿ ರಚನೆ ಚುನಾವಣೆಯ ದಿನಾಂಕವನ್ನು ನಿಗದಿಪಡಿಸಲು ಹೊನ್ನಾಳಿ ತಾಲ್ಲೂಕಿನ ಚೀಲಾಪುರ ಗ್ರಾಮದ ದೇವರಾಜ್ ಬಳಿ ಸತೀಶ್ ನಾಯ್ಕ ಅವರು 75,000 ಲಂಚ ಕೇಳಿದ್ದರು. ಈ ಬಗ್ಗೆ ದಾವಣಗೆರೆ ಲೋಕಾಯುಕ್ತ ಪೊಲೀಸರಿಗೆ ದೂರು ನೀಡಲಾಗಿತ್ತು.

ಪ್ರಕರಣ ದಾಖಲಿಸಿಕೊಂಡಿದ್ದಲೋಕಾಯುಕ್ತ ಪೊಲೀಸರು ದಾಳಿ ನಡೆಸಿ ಲಂಚದ ಹಣದ ಸಮೇತಆರೋಪಿಯನ್ನು ವಶಕ್ಕೆ ಪಡೆದಿದ್ದಾರೆ.ಲೋಕಾಯುಕ್ತ ಎಸ್‌ಪಿ ಎಂ.ಎಸ್.ಕೌಲಾಪೂರೆ ಮಾರ್ಗದರ್ಶನದಲ್ಲಿ ಡಿವೈಎಸ್‌ಪಿ ಕಲಾವತಿ ನೇತೃತ್ವದಲ್ಲಿ ಇನ್‌ಸ್ಪೆಕ್ಟರ್‌ಗಳಾದ ಎಚ್. ಗುರುಬಸವರಾಜ್, ಸರಳಾ ಪಿ. ಹಾಗೂ ಸಿಬ್ಬಂದಿ ದಾಳಿಯಲ್ಲಿ ಭಾಗಿಯಾಗಿದ್ದರು.

## ಅರ್ಜಿ ಅಹ್ವಾನ

**ದಾವಣಗೆರೆ;** ಸಮಾಜ ಕಲ್ಯಾಣ ಇಲಾಖೆಯಿಂದ ಪ್ರಸಕ್ತ ಸಾಲಿಗೆ ಪರಿಶಿಷ್ಟ ಜಾತಿ ಕಾನೂನು ಪದವೀಧರರಿಗೆ ಶಿಷ್ಯವೇತನಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ವೆಬ್‌ಸೈಟ್ www.sw.kar.nic.in ನಲ್ಲಿ ಅರ್ಜಿ ಸಲ್ಲಿಸಿ ಅಗತ್ಯ ದಾಖಲೆಗಳೊಂದಿಗೆ ತಾಲ್ಲೂಕುಗಳ ಸಹಾಯಕ ನಿರ್ದೇಶಕರ ಕಚೇರಿಗೆ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಜಂಟಿ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ ದಾವಣಗೆರೆ ಇವರನ್ನು ಸಂಪರ್ಕಿಸಬಹುದೆಂದು ಇಲಾಖೆಯ ಜಂಟಿ ನಿರ್ದೇಶಕರಾದ ನಾಗರಾಜ.ಕೆ ತಿಳಿಸಿದ್ದಾರೆ.

## ರಾಜ್ಯ ಪ್ರಶಸ್ತಿ ಪುರಸ್ಕೃತ ಶಿಲ್ಪಿ ಯಂಕಪ್ಪ.ವೈ ನಿಧನ, ಸಂತಾಪ

**ದಾವಣಗೆರೆ;** ದಾವಣಗೆರೆಯ ಹಿರಿಯ ಶಿಲ್ಪ ಕಲಾವಿದರು ಹಾಗೂ ಜಕಣಾಚಾರಿ ಪ್ರಶಸ್ತಿ ಮತ್ತು ಕರ್ನಾಟಕ ರಾಜ್ಯ ಪ್ರಶಸ್ತಿ ಪುರಸ್ಕೃತರಾದ ಯಂಕಪ್ಪ.ವೈ ಇವರು (90 ವರ್ಷ) ಸೆಪ್ಟೆಂಬರ್ 2 ರಂದು ವಯೋಸಹಜ ಕಾಯಿಲೆಯಿಂದ ನಿಧನರಾಗಿದ್ದು, ಅವರ ಅಗಲಿಕೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಪಾರ್ಥಿವ ಶರೀರಕ್ಕೆ ಗೌರವ ನಮನ ಸಲ್ಲಿಸಿ ಸಂತಾಪ ವ್ಯಕ್ತಪಡಿಸಲಾಗಿದೆ ಎಂದು ಸಹಾಯಕ ನಿರ್ದೇಶಕರಾದ ರವಿಚಂದ್ರ ತಿಳಿಸಿದ್ದಾರೆ.

ಯಂಕಪ್ಪ.ವೈ ಇವರ ಮಗ ಹಾಲಿ ಶಿಲ್ಪಕಲಾ ಅಕಾಡೆಮಿ ಸದಸ್ಯ ಶ್ರೀ ಕುಮಾರ್ ವೈ ಸೇರಿದಂತೆ ಕುಟುಂಬ ಸದಸ್ಯರು ಮತ್ತು ಅಪಾರ ಬಂದುಬಳಗವನ್ನು ಅಗಲಿದ್ದಾರೆ.

## ಫ್ಲೆಕ್ಸ್, ಬಂಟಿಂಗ್ಸ್, ಬ್ಯಾನರ್ ಬಾವುಟಗಳ ನಿಷೇಧ

**ದಾವಣಗೆರೆ;** ಮಲೇಬೆನ್ನೂರು ಪುರಸಭೆಯ ವ್ಯಾಪ್ತಿಯ ಸಾರ್ವಜನಿಕ ಸ್ಥಳಗಳಲ್ಲಿ ಅನಧೀಕೃತವಾಗಿ ಅಳವಡಿಸಿರುವ ಫ್ಲೆಕ್ಸ್, ಬಂಟೀಂಗ್ಸ್, ಬ್ಯಾನರ್ ಬಾವುಟಗಳನ್ನು ನಿಷೇಧಿಸಲಾಗಿದೆ ಎಂದು ಮಲೇಬೆನ್ನೂರು ಪುರಸಭೆಯ ಮುಖ್ಯಾಧಿಕಾರಿ ತಿಳಿಸಿದ್ದಾರೆ.

ಒಂದು ವೇಳೆ ಅನಧೀಕೃತವಾಗಿ ಫ್ಲೆಕ್ಸ್ ಅಳವಡಿಸಿದಲ್ಲಿ 24 ಗಂಟೆಯೊಳಗೆ ಬಂದು ಪುರಸಭೆಯಿಂದ ನಿಗದಿತ ಶುಲ್ಕ ಪಾವತಿಸಿಕೊಂಡು ಪರವಾನಿಗೆ ಸಂಖ್ಯೆಯನ್ನು ಫ್ಲೆಕ್ಸಳಲ್ಲಿ ನಮೂದಿಸಬೇಕು.

ತಪ್ಪಿದಲ್ಲಿ ಪುರಸಭೆಯಿಂದ ತೆರೆವುಗೊಳಿಸಲಾಗುವುದು. ಗಣೇಶ ಚತುರ್ಥಿ ಮತ್ತು ಈದ್ ಮಿಲಾದ್ ಹಬ್ಬದ ಪ್ರಯುಕ್ತ ಕಡ್ಡಾಯವಾಗಿ ಅನುಮತಿ ಪಡೆದು ಅಳವಡಿಸಬೇಕು. ಯಾವುದೇ ಅಹಿತಕರ ಘಟನೆ ನಡೆದಲ್ಲಿ ಫ್ಲೆಕ್ಸ್, ಬಂಟೀಂಗ್ಸ್ ಹಾಕುವವರನ್ನೇ ನೇರ ಹೊಣೆಗಾರರನ್ನಾಗಿ ಮಾಡಿ ಕಾನೂನು ಕ್ರಮಕೈಗೊಳ್ಳಲಾಗುವುದು ಎಂದು ಅವರು ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ದಾವಣಗೆರೆ :** ಪ್ರಸಕ್ತ ಸಾಲಿನ ಸಮಾಜ ಕಲ್ಯಾಣ ಇಲಾಖೆಯಿಂದ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿವೇತನದ ಕಾರ್ಯಕ್ರಮದಡಿ ಅರ್ಹ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಂದ ವಿದ್ಯಾರ್ಥಿವೇತನಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.ಎಎಪಿ ಪೋರ್ಟಲ್ ತಂತ್ರಾಂಶದಲ್ಲಿ http://ssp.postmatric.karnataka.gov.in ನಲ್ಲಿ ಅರ್ಜಿ ಸಲ್ಲಿಸಬೇಕೆಂದು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

ಪದವಿ ಹಾಗೂ ಸ್ನಾತಕೋತ್ತರ ಪದವಿ ವಿಭಾಗದಲ್ಲಿ:-1) ಗಾಂಧೀಜಿಕಂಡ ನ್ಯಾಯಸಮ್ಮತರಾಜಕೀಯ ವ್ಯವಸ್ಥೆ2) ಗಾಂಧೀಜಿ ಮತ್ತುಡಾ. ಬಿ.ಆರ್. ಅಂಬೇಡ್ಕರ್ - ತತ್ವಗಳ ಹೋಲಿಕೆ, 3) ಮೌಲ್ಯಾಧಾರಿತ ನಾಯಕತ್ವ ಹಾಗೂ ನೈತಿಕರಾಜಕಾರಣ - ಯುವಕರಿಗೆಗಾಂಧೀಜಿಯವರ ಪಾಠ. ಪದವಿ ಹಾಗೂ ಸ್ನಾತಕೋತ್ತರ ಪದವಿ ವಿಭಾಗದ ವಿದ್ಯಾರ್ಥಿಗಳು ಈ ಮೂರು ವಿಷಯಗಳಲ್ಲಿ ಯಾವುದಾದರೂಒಂದು ವಿಷಯಕುರಿತು 1400 ರಿಂದ 1500 ಪದಗಳು ಮೀರದಂತೆ ಪ್ರಬಂಧ ಬರೆಯಬೇಕು. ಪ್ರಬಂಧವು ಸಂಪೂರ್ಣವಾಗಿ ಸ್ವರಚಿತವಾಗಿರಬೇಕು.ಸ್ಪರ್ಧೆಏರ್ಪಡಿಸುವ ಸ್ಥಳದಲ್ಲಿಯೇ ಶುದ್ಧಕೈಬರಹದಲ್ಲಿ ಪ್ರಬಂಧ ಬರೆಯಬೇಕು. ಆಕರವಾಗಿ ಬಳಸಿದ ಪರಾಮರ್ಶನ / ಆಧಾರ ಗ್ರಂಥಗಳ ವಿವರಗಳನ್ನು ಪ್ರಬಂಧದಕೊನೆಯಲ್ಲಿ ನಮೂದಿಸಬೇಕು.

ಆದರೆ, ಸ್ಪರ್ಧೆಏರ್ಪಡಿಸುವ ಸ್ಥಳದಲ್ಲಿ ಪರಾಮರ್ಶನ / ಆಧಾರ ಗ್ರಂಥಗಳು / ಮೊಬೈಲ್‌ಗಳ ಬಳಕೆಗೆ ಅವಕಾಶವಿರುವುದಿಲ್ಲ.ಪ್ರಬಂಧಕಾರರ ಹೆಸರು, ವಿಳಾಸ ನಮೂದಿಸಿರಬೇಕು.

# ಯೋಗಾಚಾರ್ಯ ಡಾ.ಎನ್.ಪರಶುರಾಮ್‌ಗೆ 'ಕರ್ನಾಟಕ ಸೇವಾ ರತ್ನ' ಪ್ರಶಸ್ತಿ ಪ್ರದಾನ

**ದಾವಣಗೆರೆ:** ನಗರದ ಪ್ರತಿಷ್ಠಿತ ಎಸ್‌ಎಸ್‌ಎಸ್ ಯೋಗ ಕೇಂದ್ರದ ಸಂಸ್ಥಾಪಕ, ಕರ್ನಾಟಕ ಯೋಗಾಸನ ಕ್ರೀಡಾ ಸಂಸ್ಥೆಯ ರಾಜ್ಯ ಉಪಾಧ್ಯಕ್ಷರು ಹಾಗೂ ಯೋಗಾಚಾರ್ಯ ಡಾ.ಎನ್.ಪರಶುರಾಮ್ ಅವರಿಗೆ 'ಕರ್ನಾಟಕ ಸೇವಾ ರತ್ನ' ಪ್ರಶಸ್ತಿ ಪ್ರದಾನ ಮಾಡಲಾಯಿತು.

ಇತ್ತೀಚಿಗೆ ಬೆಂಗಳೂರಿನಲ್ಲಿ ಎಜಿಎಸ್ ಎಜುಕೇಶನ್ ಚಾರ್ ಟೇಬಲ್ ಟ್ರಸ್ಟ್ ಹಾಗೂ ಕೆ.ಆರ್.ಸೇವಾ ಚಾರ್ಟಬಲ್ ಟ್ರಸ್ಟ್ ವತಿಯಿಂದ ಆಯೋಜಿಸಿದ್ದ ಅಭಿನಂದನಾ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗಿದೆ.

ಪ್ರಶಸ್ತಿ ಸ್ವೀಕರಿಸಿದ ಡಾ.ಎನ್.ಪರಶುರಾಮ್ ಅವರಿಗೆ ಎಸ್‌ಎಸ್‌ಎಸ್ ಯೋಗ ಕೇಂದ್ರದ ಸಂಸ್ಥಾಪಕರು ಹಾಗೂ ಕರ್ನಾಟಕ



ಯೋಗಾಸನ ಕ್ರೀಡಾ ಸಂಸ್ಥೆಯ ರಾಜ್ಯ ಉಪಾಧ್ಯಕ್ಷರು ದಾವಣಗೆರೆ ಜಿಲ್ಲಾ ಸಂಯೋಜಿಕರಾದ ಯೋಗಾಚಾರ್ಯ ಡಾಕ್ಟರ್ ಎನ್ ಪರಶುರಾಮ್ ಯೋಗ ಗುರು ಇವರಿಗೆ ಕರ್ನಾಟಕ ಸೇವಾ ರತ್ನ ಅವಾರ್ಡನ್ನು ಪಡೆದಿರುವ ಇವರಿಗೆ ಯೋಗ ಕೇಂದ್ರದ ಅಧ್ಯಕ್ಷ ರುದ್ರಪ್ಪ, ಕೇಂದ್ರದ ಎಂ.ಎನ್. ಗೋಪಾಲಸ್ವಾಮಿ, ರಾಜಶೇಖರ್, ಎಸ್. ರಾಘವೇಂದ್ರ, ಎಂ.ಚೌಹಾನ್, ನಾಗರಾಜ್, ಎಂ.ಎನ್.ಚಂದ್ರಶೇಖರ್, ರೇಖಾ, ವಾಣಿಶ್ರೀ, ಜಯಮ್ಮ, ಜೆ.ಎಸ್.ವೀರೇಶ್, ಎ.ಎನ್.ನಿಂಗಪ್ಪ ಹಾಗೂ ಯೋಗಪಟುಗಳು, ವಿವಿಧ ಸಂಘ-ಸಂಸ್ಥೆಗಳ ರು ಹಾಗೂ ನಿರ್ದೇಶಕರುಗಳು ಯೋಗ ವಿದ್ಯಾರ್ಥಿಗಳು ಹಾಗೂ ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಅಭಿನಂದನೆ ಸಲ್ಲಿಸಿದ್ದಾರೆ.

# ದಶಕಗಳ ಹಿಂದೆ ಆಧಾನೋರ್ಂದಾಯಿಸಿದವರು ದಾಖಲೆ ಸಲ್ಲಿಸಿ ನವೀಕರಿಸಿಕೊಳ್ಳಿ : ಸಿದ್ಧಲಿಂಗರೆಡ್ಡಿ

**ಶಿವಮೊಗ್ಗ :** ದಶಕಗಳ ಹಿಂದೆ ದಾಖಲೆ ಸಲ್ಲಿಸಿ ಆಧಾನೋರ್ಂದಾಯಿಸಿಕೊಂಡಿರುವವರು ಪ್ರಸ್ತುತ ವಾಸಸ್ಥಳದ ವಿವರಗಳನ್ನು ತಮ್ಮ ಸಮೀಪದ ಅಂಚೆ ಕಚೇರಿ, ರಾಷ್ಟ್ರೀಕೃತ ಬ್ಯಾಂಕುಗಳು ಅಥವಾ ಆಧಾರ್‌ಸೇವಾ ಕೇಂದ್ರಗಳಲ್ಲಿ ಸಲ್ಲಿಸಿ, ಆಧಾರ್ನವೀಕರಿಸಿಕೊಳ್ಳುವಂತೆ ಅಪರ ಜಿಲ್ಲಾಧಿಕಾರಿ ಸಿದ್ಧಲಿಂಗರೆಡ್ಡಿ ಅವರು ಸಾರ್ವಜನಿಕರಿಗೆ ತಿಳಿಸಿದ್ದಾರೆ.

ಅವರು ಇಂದು ತಮ್ಮ ಕಚೇರಿ ಕಾರ್ಯಾಲಯದಲ್ಲಿ ಏರ್ಪಡಿಸಲಾಗಿದ್ದ ಜಿಲ್ಲಾ ಮಟ್ಟದ ಆಧಾನೋರ್ಂದಣಿ ಉಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡುತ್ತಿದ್ದರು. ಐದು ವರ್ಷದೊಳಗಿನ ಎಲ್ಲಾ ಮಕ್ಕಳ ಪೋಷಕರು ತಮ್ಮ ಮಕ್ಕಳ ಆಧಾನೋರ್ಂದಣಿ ಮಾಡಿಸಿಕೊಳ್ಳಬೇಕು. ಈಗಾಗಲೇ ಆಧಾನೋರ್ಂದಣಿ ಮಾಡಿಸಿದ್ದು, 5ವರ್ಷಗಳ ಅವಧಿ ಪೂರ್ಣಗೊಂಡಿರುವ 92,317ಮಕ್ಕಳುಗಳು ಬಯೋಮೆಟ್ರಿಕ್ಗುರುತನ್ನು ನೀಡಿ ನೋಂದಣಿ ಮಾಡಿಸಿಕೊಳ್ಳಬೇಕು. ಅಲ್ಲದೇ 15ವರ್ಷ ಮೇಲ್ಪಟ್ಟ 85,209ಮಕ್ಕಳಿದ್ದು, ಆಧಾರ್ನವೀಕರಿಸಿಕೊಳ್ಳುವಂತೆ ಅವರು ಸೂಚಿಸಿದ್ದಾರೆ.

ಒಂದು ಅಂದಾಜಿನ ಪ್ರಕಾರ ಶಾಲಾ ಮಕ್ಕಳ ಜಿಲ್ಲೆಯಲ್ಲಿ ಸುಮಾರು 27,533ಮಕ್ಕಳು ಈವರೆಗೆ ಆಧಾನೋರ್ಂದಣಿ ಮಾಡಿಸದಿರುವುದನ್ನು ಗುರುತಿಸಲಾಗಿದೆ. ಈವರೆಗೆ ಆಧಾರ್ಮಾಡಿಸದಿರುವ ಮಕ್ಕಳ ಪೋಷಕರು ಕೂಡಲೇ ಆಧಾನೋರ್ಂದಣಿಗೆ ಮುಂದಾಗುವಂತೆ ಸೂಚಿಸಿರುವ ಅವರು, ಆಧಾನೋರ್ಂದಣಿಗಾಗಿ ಮಕ್ಕಳು ವ್ಯಾಸಂಗ ಮಾಡುತ್ತಿರುವ ಶಾಲೆಗಳಲ್ಲಿಯೇ ಶಾಲಾ ಮುಖ್ಯೋಪಾಧ್ಯಾಯರಿಗೆ ಮಾಹಿತಿ ನೀಡಿ ಆಧಾನೋರ್ಂದಾಯಿಸಿಕೊಳ್ಳಬಹುದಾಗಿದೆ. ಅದಕ್ಕಾಗಿ ಶಾಲಾ ಶಿಕ್ಷಕರಿಗೆ ನೋಂದಣಿ ತರಬೇತಿ ನೀಡಲಾಗಿದೆ ಎಂದ ಅವರು, ಶೇ.26.03ರಷ್ಟು ಮಕ್ಕಳು ನೋಂದಾಯಿಸಿರುವ ಹೆಸರು-ವಿಳಾಸ, ಮೊ.ನಂಬರ್ಗಳಲ್ಲಿ ವ್ಯತ್ಯಾಸಗಳಿದ್ದು, ಅವುಗಳನ್ನು ಸರಿಪಡಿಸಿಕೊಳ್ಳುವಂತೆ ಅವರು ತಿಳಿಸಿದರು. ಅದಕ್ಕಾಗಿ ಆಧಾನೋರ್ಂದಣಿ, ನವೀಕರಣ ಹೆಚ್ಚಿಸಲು ಬ್ಯಾಂಕುಗಳ ಮೂಲಕ ಹೋಬಳಿ ಕೇಂದ್ರ ಮತ್ತು ಶಾಲಾ ಹಂತದಲ್ಲಿ ಶಿಬಿರಗಳನ್ನು ಆಯೋಜಿಸಲು ಸೂಚಿಸಲಾಗಿದ್ದು, ನೋಂದಣಿ ಕಿಟ್ಟು ನೀಡಲಾಗುವುದು. ಮುಂದಿನ ಒಂದು ವರ್ಷದೊಳಗಾಗಿ ಆಧಾನೋರ್ಂದಣಿ, ನವೀಕರಣ ಕಾರ್ಯ ಪೂರ್ಣಗೊಳಿಸಲು ಉದ್ದೇಶಿಸಲಾಗಿದೆ ಎಂದರು.

ಆಧಾನೋರ್ಂದಣಿಯಿಂದ ಅವರ ಶೈಕ್ಷಣಿಕ ಚಟುವಟಿಕೆಗಳಿಗೆ ಅನುಕೂಲವಾಗಲಿದೆ. ತಪ್ಪಿದಲ್ಲಿ ಸಿ.ಇ.ಟಿ. ಮತ್ತಿತರ ಪ್ರವೇಶ ಪರೀಕ್ಷೆಗಳಿಗೆ, ವಿದ್ಯಾರ್ಥಿ ವೇತನ ಪಡೆಯಲು ಸಹಕಾರಿಯಾಗಲಿದೆ. ತಪ್ಪಿದಲ್ಲಿ ಅನಾನುಕೂಲವಾಗಲಿದೆ ಎಂದ ಅವರು, ಶಾಲಾ ಶಿಕ್ಷಣ ಇಲಾಖೆ ಮತ್ತು ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ತಮ್ಮ ಅಧೀನ ಅಧಿಕಾರಿಗಳಿಗೆ ಆಧಾನೋರ್ಂದಣಿಯ ಕುರಿತು ಮಾಹಿತಿ ನೀಡುವಂತೆ ಅವರು ಸೂಚಿಸಿದರು.

ಯಾವುದೇ ಆಧಾರ್ ಕೇಂದ್ರವು ಅನಧಿಕೃತ, ವಂಚನೆಯ ಚಟುವಟಿಕೆಗಳನ್ನು ನಡೆಸುತ್ತಿರುವುದು ಕಂಡುಬಂದರೆ, ಅಕ್ರಮ ವಲಸಿಗರು ಆಧಾರ್ಗೆ ದಾಖಲಾಗಲು ಪ್ರಯತ್ನಿಸಿದರೆ, ಜಿಲ್ಲಾ ಕಾನೂನು ಜಾರಿ ಪ್ರಾಧಿಕಾರ (ಪೊಲೀಸ್ ಅಧೀಕ್ಷಕರು) ಎಫ್ಆರ್ ದಾಖಲಿಸುವ, ಅಪರಾಧದ ಸ್ವರೂಪಕ್ಕೆ ಅನುಗುಣವಾಗಿ ಆಧಾರ್ ಕಾಯ್ದೆಯನ್ವಯ ಜಿಲ್ಲಾ ಸಮಿತಿಯು ಕ್ರಮ ಕೈಗೊಳ್ಳಲಿದೆ ಎಂದವರು ನುಡಿದರು.

ಸಭೆಯಲ್ಲಿ ಜಿಲ್ಲಾಧಿಕಾರಿಗಳ ಕಚೇರಿಯ ಆಧಾರ್ಸಂಬಂಧಿತ ಅಧಿಕಾರಿ-ಸಿಬ್ಬಂಧಿಗಳು, ಜಿಲ್ಲಾ ಸಮಿತಿ ಸಭೆಯ ಅಧಿಕಾರಿಗಳು ಉಪಸ್ಥಿತರಿದ್ದರು.

### ಶ್ರೀ ವಿಶ್ವ ಕರ್ಮ ಜಯಂತಿ ಪೂರ್ವಭಾವಿ ಸಭೆ

# ಜಯಂತಿಯನ್ನು ವ್ಯವಸ್ಥಿತವಾಗಿ ಆಚರಿಸಿ

**ಗದಗ :** ಶ್ರೀ ವಿಶ್ವ ಕರ್ಮ ಜಯಂತಿಯನ್ನು ಸೆಪ್ಟೆಂಬರ್ 17 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ದಲ್ಲಿ ಆಚರಿಸಲಾಗುತ್ತಿದ್ದು ಜಯಂತಿಯನ್ನು ವ್ಯವಸ್ಥಿತವಾಗಿ ಆಚರಿಸಲು ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಶ್ರೀ ವಿಶ್ವ ಕರ್ಮ ಜಯಂತಿ ಕುರಿತು ಜರುಗಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆಯನ್ನು ವಹಿಸಿ ಅವರು ಮಾತನಾಡಿದರು.

ಎಸ್.ಎಸ್.ಎಲ್.ಸಿ ಮತ್ತು ಪಿ.ಯು.ಸಿ ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕ



ಗಳಿಸಿದ ಸಮಾಜದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಗುವುದು. ಶಿಷ್ಟಾಚಾರದನ್ವಯ ಆಮಂತ್ರಣ ಪತ್ರಿಕೆ ಮುದ್ರಣಕ್ಕೆ ಕ್ರಮ ವಹಿಸಬೇಕು. ಒಟ್ಟಾರೆಯಾಗಿ ವಿಶ್ವಕರ್ಮ ಜಯಂತಿ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಚರಿಸಬೇಕೆಂದು ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ಸಭೆಯಲ್ಲಿ ಉಪನ್ಯಾಸಕರ ಆಯ್ಕೆ, ವೇದಿಕೆ ವ್ಯವಸ್ಥೆ, ಅಲ್ಪೋಪಹಾರದ ವ್ಯವಸ್ಥೆ ಕುರಿತು ಚರ್ಚಿಸಲಾಯಿತು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್, ಸಮಾಜದ ಬಾಂಧವರು, ಹಿರಿಯರು, ಗಣ್ಯರು ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ.ಬಸವರಾಜ ಬಳ್ಳಾರಿ ಸರ್ವರಿಗೂ ಸ್ವಾಗತಿಸಿ ವಂದಿಸಿದರು.

## ಮಹಾತ್ಮಾ ಗಾಂಧೀ ಸೇವಾ ಪ್ರಶಸ್ತಿ ಕರ್ನಾಟಕ ಆಯ್ಕೆಗೆ ಅರ್ಜಿ ಆಹ್ವಾನ

**ಚಿಕ್ಕಮಗಳೂರು :** ರಾಜ್ಯ ಸರ್ಕಾರವು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿ ಸ್ಥಾಪಿಸಿರುವ ಐದು ಲಕ್ಷ ರೂಪಾಯಿ ನಗದನ್ನು ಒಳಗೊಂಡ ಮಹಾತ್ಮಗಾಂಧೀ ಸೇವಾ ಪ್ರಶಸ್ತಿ-ಕರ್ನಾಟಕಗೆ ಪ್ರಸಕ್ತ ಸಾಲಿಗೆ ಅರ್ಹ ಸಾಧಕರನ್ನು ಅಥವಾ ಸಂಘ ಸಂಸ್ಥೆಗಳನ್ನು ಆಯ್ಕೆ ಮಾಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಸಾರ್ವಜನಿಕ ಜೀವನದಲ್ಲಿ ಮಹಾತ್ಮಾ ಗಾಂಧೀಜಿಯವರ ಆದರ್ಶಗಳನ್ನು ಅಳವಡಿಸಿಕೊಂಡು ಜೀವನ ನಡೆಸುತ್ತಿರುವ ಕನಿಷ್ಠ 60 ವರ್ಷಗಳಾಗಿರುವ ವ್ಯಕ್ತಿಗಳು ಅಥವಾ 25 ವರ್ಷಗಳು ತುಂಬಿರುವ ಸೇವಾ ಸಂಸ್ಥೆಗಳನ್ನು ಈ ಪ್ರಶಸ್ತಿಗೆ ಪರಿಗಣಿಸಲಾಗುವುದು.

ಮಹಾತ್ಮಾ ಗಾಂಧೀಜಿಯವರು ಪ್ರಚುರಪಡಿಸಿದ ಜನಪರ ಕಾರ್ಯಕ್ರಮಗಳಾದ ಅಸ್ಪೃಶ್ಯತೆ ನಿವಾರಣೆ, ಅಹಿಂಸೆ, ಮಹಿಳಾ ಸಬಲೀಕರಣ, ಗ್ರಾಮೀಣ ನೈರ್ಮಲ್ಯ, ಮದ್ಯಪಾನ ವಿರೋಧಿ ನೀತಿ, ಖಾದಿ ಮತ್ತು ಸ್ವದೇಶಿ ವಸ್ತು ಬಳಕೆ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಏಳಿಗೆ - ಈ ಕ್ಷೇತ್ರಗಳಲ್ಲಿ ಸ್ವಯಂ ಪ್ರೇರಣೆಯಿಂದ ತೊಡಗಿರುವ ವ್ಯಕ್ತಿಗಳು ಅಥವಾ ಸಂಸ್ಥೆಗಳು ಈ ಪ್ರಶಸ್ತಿಗೆ ಅರ್ಜಿ ಸಲ್ಲಿಸಬಹುದು. ಸಂಘ ಸಂಸ್ಥೆಗಳು ಅಥವಾ ವ್ಯಕ್ತಿಗಳು ಶಿಫಾರಸ್ಸನ್ನು ಕೂಡ ಮಾಡಬಹುದಾಗಿದೆ. ವ್ಯಕ್ತಿಗಳು ಅಥವಾ ಸಂಸ್ಥೆಗಳು ಈ ಪ್ರಶಸ್ತಿಗೆ ಅರ್ಜಿ ಸಲ್ಲಿಸಬಹುದು. ಸಂಘ ಸಂಸ್ಥೆಗಳು ಅಥವಾ ವ್ಯಕ್ತಿಗಳು ಶಿಫಾರಸ್ಸನ್ನು ಕೂಡ ಮಾಡಬಹುದಾಗಿದೆ.

ಅರ್ಜಿಗಳನ್ನು ಸೆಪ್ಟೆಂಬರ್ 19ರ ಒಳಗಾಗಿ ಆಯುಕ್ತರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ವಾರ್ತಾ ಸೌಧ. ನಂ. 17. ಭಗವಾನ್ ಮಹಾವೀರ ರಸ್ತೆ (ಇನ್‌ಫೆಂಟ್ರಿ ರಸ್ತೆ), ಬೆಂಗಳೂರು - 560 001 ಅಥವಾ ಇ - ಮೇಲ್ ವಿಳಾಸ informationdiprawards@gmail.com <mailto:informationdiprawards@gmail.com> ಹಾಗೂ ಖುದ್ದಾಗಿ ಇಲಾಖೆಗೆ ಕಳುಹಿಸಬಹುದಾಗಿದೆ ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾರಾಯಣ ಗುರು ಜಯಂತಿ ಆಚರಣೆ

**ಚಿಕ್ಕಮಗಳೂರು:** ಜಿಲ್ಲಾಡಳಿತದ ವತಿಯಿಂದ ಸೆಪ್ಟಂಬರ್ 7 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಕುವೆಂಪು ಕಲಾಮಂದಿರದಲ್ಲಿ ಬ್ರಹ್ಮಶ್ರೀ ನಾರಾಯಣ ಗುರು ಜಯಂತಿ ಆಚರಣೆ ನಡೆಯಲಿದೆ.

ಮಾನ್ಯ ಇಂಧನ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಕೆ.ಜೆ.ಜಾರ್ಜ್ ಅವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ವಿಧಾನ ಪರಿಷತ್ ಮಾನ್ಯ ಉಪ ಸಭಾಪತಿ ಶ್ರೀ ಎಂ.ಕೆ.ಪ್ರಾಣೇಶ್, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಶಾಸಕರಾದ ಟಿ.ಡಿ.ರಾಜೇಗೌಡ, ಅನಿವಾಸಿ ಭಾರತೀಯ ಕೋಶದ ಉಪಾಧ್ಯಕ್ಷರಾದ ಡಾ.ಆರತಿ ಕೃಷ್ಣ, ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಎಂ.ಶ್ರೀನಿವಾಸ್ ಭಾಗವಹಿಸಲಿದ್ದಾರೆ.

ಚಿಕ್ಕಮಗಳೂರು ಕ್ಷೇತ್ರದ ಶಾಸಕರಾದ ಹೆಚ್.ಡಿ.ತಮ್ಮಯ್ಯ ಅಧ್ಯಕ್ಷತೆ ವಹಿಸಲಿದ್ದು, ಉಡುಪಿ-ಚಿಕ್ಕಮಗಳೂರು ಲೋಕಸಭಾ ಕ್ಷೇತ್ರದ ಸಂಸದರಾದ ಕೋಟ ಶ್ರೀನಿವಾಸ ಪೂಜಾರಿ, ರಾಜ್ಯಸಭೆ ಸದಸ್ಯರಾದ ಜೈರಾಮ್ ರಮೇಶ್, ಹಾಸನ ಲೋಕಸಭಾ ಕ್ಷೇತ್ರದ ಸಂಸದರಾದ ಶ್ರೇಯಸ್ ಎಂ.ಪಟೇಲ್, ವಿಧಾನ ಪರಿಷತ್ ಸದಸ್ಯರಾದ ಎಸ್. ಎಲ್.ಭೋಜೇಗೌಡ, ಶಾಸಕರುಗಳಾದ ಜಿ.ಹೆಚ್.ಶ್ರೀನಿವಾಸ್, ಕೆ.ಎಸ್.ಆನಂದ್, ನಯನ ಮೋಟಮ್ಮ, ವಿಧಾನ ಪರಿಷತ್ ಸದಸ್ಯರುಗಳಾದ ಸಿ.ಟಿ.ರವಿ, ಡಾ.ಧನಂಜಯ ಸರ್ಜಿ, ಭದ್ರಾ ಕಾಡಾ ಅಧ್ಯಕ್ಷರಾದ ಡಾ.ಕೆ.ಪಿ.ಅಂಶುಮಂತ್, ಕ.ರಾ.ಕೃಷಿ ಉತ್ಪನ್ನ ಸಂಸ್ಕರಣೆ ಮತ್ತು ರಫ್ತು ನಿಗಮದ ಅಧ್ಯಕ್ಷರಾದ ಬಿ.ಹೆಚ್.ಹರೀಶ್, ನಗರಸಭೆ ಅಧ್ಯಕ್ಷರಾದ ಬಿ.ಶೀಲಾ ದಿನೇಶ್ ಪಾಲ್ಗೊಳ್ಳಲಿದ್ದಾರೆ.

ಸಾಹಿತಿ ಬಿ.ತಿಪ್ಪೇರುದ್ರಪ್ಪ ಅವರು ಉಪನ್ಯಾಸ ನೀಡಲಿದ್ದಾರೆ.

# 24x7 ನಿರಂತರ ಕುಡಿಯುವ ನೀರು ಸರಬರಾಜು ಗ್ರಾಮ ಘೋಷಣೆಗೆ ಕ್ರಮವಹಿಸಿ

## ಜಿಲ್ಲಾಮಟ್ಟದ ಕಾರ್ಯಾಗಾರದಲ್ಲಿ ಜಿ.ಪಂ ಮುಖ್ಯ ಯೋಜನಾಧಿಕಾರಿ ಸಿ.ಎಸ್.ಗಾಯತ್ರಿ

**ಚಿತ್ರದುರ್ಗ:** ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಒಂದು ಗ್ರಾಮವನ್ನಾದರೂ 24x7 ನಿರಂತರ ಕುಡಿಯುವ ನೀರು ಸರಬರಾಜು ಗ್ರಾಮವೆಂದು ಘೋಷಣೆ ಮಾಡಿ, ಮಾದರಿ ಗ್ರಾಮಗಳನ್ನಾಗಿ ರೂಪಿಸಿ ಎಂದು ಜಿಲ್ಲಾ ಪಂಚಾಯಿತಿ ಯೋಜನಾ ನಿರ್ದೇಶಕರು ಹಾಗೂ ಮುಖ್ಯ ಯೋಜನಾಧಿಕಾರಿ ಸಿ.ಎಸ್.ಗಾಯತ್ರಿ ತಿಳಿಸಿದರು.



ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಬುಧವಾರ ಜಿಲ್ಲಾ ಪಂಚಾಯತ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಹಾಗೂ ಅನುಷ್ಠಾನ ಬೆಂಬಲ ಸಂಸ್ಥೆ (ಗ್ರಾಮ್ಸ್) ಸಹಯೋಗದಲ್ಲಿ ಜಲಜೀವನ್ ಮಿಷನ್, ಸ್ವಚ್ಛ ಭಾರತ್ ಮಿಷನ್ (ಗ್ರಾ) ಯೋಜನೆ ಹಾಗೂ ಕರ್ನಾಟಕ ಸುಸ್ಥಿರ ಗ್ರಾಮೀಣ ಕುಡಿಯುವ ನೀರು ಸರಬರಾಜು ಯೋಜನೆ ಕುರಿತು ಹಿರಿಯೂರು ಮತ್ತು ಹೊಸದುರ್ಗ ತಾಲ್ಲೂಕುಗಳ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಗಣಕಯಂತ್ರ ನಿರ್ವಾಹಕರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಇಂಜಿನಿಯರ್‌ಗಳಿಗೆ ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.

ಕರ್ನಾಟಕ ಸುಸ್ಥಿರ ಗ್ರಾಮೀಣ ಕುಡಿಯುವ ನೀರು ಸರಬರಾಜು ಯೋಜನೆಯ ಅಡಿಯಲ್ಲಿ ಹೊಸದುರ್ಗ ತಾಲ್ಲೂಕಿನ ಜಾನಕಲ್ ಗ್ರಾಮ ಪಂಚಾಯಿತಿ ವ್ಯಾಪ್ತಿಯ ವೀರವ್ವ ನಾಗತಿಹಳ್ಳಿ ಹಾಗೂ ದೇವಿಗೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಬೀಚನಹಳ್ಳಿ ಲಂಬಾಣಿಹಟ್ಟಿ ಗ್ರಾಮಗಳನ್ನು 24*7 ನಿರಂತರ ಕುಡಿಯುವ ನೀರು ಸರಬರಾಜು ಗ್ರಾಮವೆಂದು ಈಗಾಗಲೇ ಘೋಷಣೆ ಮಾಡಲಾಗಿದ್ದು, ಉಳಿದ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳನ್ನು 24*7 ಗ್ರಾಮಗಳೆಂದು ಘೋಷಣೆ ಮಾಡಲು ಕ್ರಮವಹಿಸಲು ತಿಳಿಸಿದರು.

ಗ್ರಾಮ ಪಂಚಾಯಿತಿಗಳಲ್ಲಿ ನೀರಿನ ಕಾರ್ಯಾಚರಣೆ ಮತ್ತು ನಿರ್ವಹಣೆ ನೀತಿಯನ್ನು ಗ್ರಾಮ ಪಂಚಾಯಿತಿಗಳು ಅಳವಡಿಸಿಕೊಂಡು ಅದರ ಪ್ರಕಾರ ತಮ್ಮ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳಲ್ಲಿ ನೀರಿನ ಕಂದಾಯವನ್ನು ಸಂಗ್ರಹಿಸಿ, ವಿಡಬ್ಲ್ಯೂಎಸ್‌ಸಿ ಖಾತೆಗೆ ಜಮೆ ಮಾಡಲು ತಿಳಿಸಿದರು.

ಜಿಲ್ಲೆಯ ಎಲ್ಲಾ ಗ್ರಾಮಗಳಲ್ಲಿ ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿಗಳನ್ನು ಕಡ್ಡಾಯವಾಗಿ ಪ್ರತಿ ಎರಡು ತಿಂಗಳಿಗೊಮ್ಮೆ ಸಭೆಯನ್ನು ಮಾಡಿ, ಸಭಾ ನಡಾವಳಿಯನ್ನು ಜಿಲ್ಲಾ ಪಂಚಾಯತ್ ಕಾರ್ಯಾಲಯಕ್ಕೆ ಸಲ್ಲಿಸುವುದು ಹಾಗೂ ಜಲ ಜೀವನ್ ಮಿಷನ್ ಯೋಜನೆಯಡಿ ಕಾಮಗಾರಿ ಪೂರ್ಣಗೊಂಡ ನಂತರ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಗ್ರಾಮಕ್ಕೆ ಭೇಟಿ ನೀಡಿ, ಎಲ್ಲಾ ಮನೆಗಳಿಗೆ ನಳ ಸಂಪರ್ಕ ಕಲ್ಪಿಸಿರುವ ಬಗ್ಗೆ ಪರಿಶೀಲನೆ ಮಾಡಿ ನಂತರ ಕಾಮಗಾರಿಯನ್ನು ಗ್ರಾಮ ಪಂಚಾಯಿತಿಗೆ ಹಸ್ತಾಂತರ ಮಾಡಿಕೊಂಡು ಹರ್ ಘರ್ ಜಲ್ ಘೋಷಣೆ ಮಾಡಲು ತಿಳಿಸಿದರು.

ಈ ಸಂದರ್ಭದಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಉಪ ವಿಭಾಗದ ಹಿರಿಯೂರು ಮತ್ತು ಹೊಸದುರ್ಗ ತಾಲ್ಲೂಕುಗಳ ಸಹಾಯಕ ಕಾರ್ಯಪಾಲಕ ಅಭಿಯಂತರರಾದ ಪ್ರಸನ್ನ ಕುಮಾರ್, ಹಸನ್ ಪಾಷಾ, ಜಲ ಜೀವನ್ ಮಿಷನ್ ಜಿಲ್ಲಾ ಯೋಜನಾ ವ್ಯವಸ್ಥಾಪಕ ಮಂಜುನಾಥ ಎಸ್ ನಾಡರ್, ಜಿಲ್ಲಾ ಐ.ಇ.ಸಿ ಸಮಾಲೋಚಕರಾದ ಬಿ.ಸಿ.ನಾಗರಾಜು, ಕೆಎಸ್‌ಆರ್‌ಡಬ್ಲ್ಯೂಎಸ್‌ಪಿ ಸಮಾಲೋಚಕರಾದ ಕಿರಣ್ ಪಾಟೀಲ್, ಚಂದ್ರಕಾಂತ್, ಪ್ರವೀಣ್, ಯಲಪ್ಪ, ಗೀತಾ ಲಕ್ಷ್ಮೀ, ಸ್ವಚ್ಛ ಭಾರತ್ ಮಿಷನ್ ಮಿಷನ್ (ಗ್ರಾ) ಯೋಜನೆಯ ಜಿಲ್ಲಾ ಸಮಾಲೋಚಕರಾದ ಡಿ.ಆರ್.ವಿನಯ್ ಕುಮಾರ್, ಪ್ರಮೀಳ, ಹೆಚ್.ಆರ್.ಶಶಿಧರ್ ಹಾಗೂ ಅನುಷ್ಠಾನ ಬೆಂಬಲ ಸಂಸ್ಥೆ (ಗ್ರಾಮ್ಸ್) ತಂಡದ ನಾಯಕರಾದ ನಾಗರಾಜ್, ಪ್ರತಾಪ್ ಇತರರು ಉಪಸ್ಥಿತರಿದ್ದರು.

## ಕಡವೆ ಬೇಟೆ: ಇಬ್ಬರ ಬಂಧನ

**ಚಿಕ್ಕಮಗಳೂರು, ಸೆ.3:** ಕಡೂರು ತಾಲ್ಲೂಕು ಸಗನೀ ಬಸವನಹಳ್ಳಿ ಗ್ರಾಮದಲ್ಲಿ ಸೆಪ್ಟಂಬರ್ 1 ರಂದು ಕಡವೆ ಬೇಟೆಯಾಡಿದ ಆರೋಪದಲ್ಲಿ ಇಬ್ಬರನ್ನು ಬಂಧಿಸಲಾಗಿದೆ. ಸಗನೀ ಬಸವನಹಳ್ಳಿ ಗ್ರಾಮದ ಗೋವಿಂದಪ್ಪ ಎಂಬುವವರ ಮಗ ಮಂಜುನಾಥ ಹಾಗೂ ಮುನಿಯ ಬೋವಿ ಎಂಬುವವರ ಮಗ ಮಂಜಾಬೋವಿ ಎಂಬುವವರೇ ಬಂಧಿತ ಆರೋಪಿಗಳು. ಆರೋಪಿಗಳು ಇತರರೊಂದಿಗೆ ಸೇರಿ ಬೇಟೆಯಾಡಿದ್ದು, ಈ ಬಗ್ಗೆ ಸುಳಿವರಿತ ಪೊಲೀಸರು ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದು, ಸ್ಥಳದಲ್ಲಿ ಪತ್ತೆಯಾದ ಕಡವೆ ಮಾಂಸ, ಧರ್ಮ ಹಾಗೂ ಇತರ ಪರಿಕರಗಳನ್ನು ವಶಪಡಿಸಿಕೊಳ್ಳಲಾಗಿದೆ.

ಸಿ.ಐ.ಡಿ ಪೊಲೀಸ್ ಅರಣ್ಯ ಸಂಚಾರಿ ದಳದ ಪೊಲೀಸ್ ಉಪ ಮಹಾನಿರೀಕ್ಷಕರಾದ ಜಿ.ಸಂಗೀತಾ, , ಸಿ.ಐ.ಡಿ ಅರಣ್ಯ ಮಡಿಕೇರಿ ಘಟಕದ ಪೊಲೀಸ್ ಅಧೀಕ್ಷಕ (ಪ್ರಭಾರ) ಪಿ.ಎಸ್.ಸುದರ್ಶನ್ ಅವರ ಮಾರ್ಗದರ್ಶನದಲ್ಲಿ ಉಪ ನಿರೀಕ್ಷಕರಾದ ಕೆ.ಆರ್.ಸುನಿತ ನೇತೃತ್ವದಲ್ಲಿ ಈ ಕಾರ್ಯಾಚರಣೆ ನಡೆಸಿದ್ದಾರೆ. ಕಾರ್ಯಾಚರಣೆಯಲ್ಲಿ ಸಿಬ್ಬಂದಿಗಳಾದ ಡಿ.ಹೆಚ್.ದಿನೇಶ, ಎಸ್.ಕೆ.ದಿವಾಕರ, ಕೆ.ಎಸ್.ದಿಲೀಪ್, ಎ.ಜಿ. ಹಾಲೇಶ್, ಹೆಚ್.ದೇವರಾಜ, ವೈ.ಹೇಮಾವತಿ, ಚಾಲಕರಾದ ತಿಮ್ಮಶೆಟ್ಟಿ ಹಾಗೂ ಕಡೂರು ವಲಯ ಅರಣ್ಯಾಧಿಕಾರಿ ಎಂ.ಆರ್. ಹರೀಶ್ ಹಾಗೂ ಅವರ ತಂಡದವರು ಭಾಗವಹಿಸಿದ್ದರು.

## ಸೆ.4 ಲಿಂಗ ಸಂವೇದನೆ ಕುರಿತು ಅರಿವು ಕಾರ್ಯಕ್ರಮ

**ಚಿಕ್ಕಮಗಳೂರು ಸೆ.3:** ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಶಿಶು ಅಭಿವೃದ್ಧಿ ಯೋಜನೆಯ ಆಶ್ರಯದಲ್ಲಿ ಸೆಪ್ಟಂಬರ್ 4 ರಂದು ಬೆಳಿಗ್ಗೆ 11 ಗಂಟೆಗೆ ನಗರದ ತಾಲ್ಲೂಕು ಸ್ತ್ರೀಶಕ್ತಿ ಭವನದಲ್ಲಿ ಲಿಂಗ ಸಂವೇದನೆ ಕುರಿತು ಅರಿವು ಕಾರ್ಯಕ್ರಮ ನಡೆಯಲಿದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಆದ ವಿ.ಹನುಮಂತಪ್ಪ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ಶ್ರೀನಿವಾಸ ವೈ.ಆಲದಾರ್ತಿ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ನಿರೂಪಣಾಧಿಕಾರಿ ಡಿ.ಸಂತೋಷ್, ಶಿಶು ಅಭಿವೃದ್ಧಿ ಯೋಜನಾಧಿಕಾರಿ ಸಿ. ರಂಗನಾಥ್ ಪಾಲ್ಗೊಳ್ಳುವರು.

## ಉಚಿತ ವೃತ್ತಿ ಮಾರ್ಗದರ್ಶನ–ತರಬೇತಿ

**ಚಿಕ್ಕಮಗಳೂರು ಸೆ.3:** ಭಾರತೀಯ ಸೇನೆ, ಇತರೆ ಯೂನಿಫಾರ್ಮ್ ಸೇವೆಗಳಿಗೆ ಸೇರ ಬಯಸುವ ಕರ್ನಾಟಕ ರಾಜ್ಯದ ಹಿಂದುಳಿದ ವರ್ಗಗಳ ಪ್ರವರ್ಗ–1, 2(ಎ), 3(ಎ) ಹಾಗೂ 3(ಬಿ)ಗಳ ಅರ್ಹ ಪುರುಷ ಅಭ್ಯರ್ಥಿಗಳಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ 2025–26ನೇ ಸಾಲಿನಲ್ಲಿ ಆಯ್ಕೆಯ ಪೂರ್ವ ಸಿದ್ಧತೆ ಬಗ್ಗೆ ವೃತ್ತಿ ಮಾರ್ಗದರ್ಶನ ಹಾಗೂ ತರಬೇತಿಯನ್ನು ಉಚಿತವಾಗಿ ನೀಡುತ್ತಿದ್ದು, ತರಬೇತಿಗಾಗಿ ಅರ್ಹ 3ನೇ ಬ್ಯಾಚ್ ಪ್ರಾರಂಭಿಸಲು ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ.

ಅಭ್ಯರ್ಥಿ ಮತ್ತು ಕುಟುಂಬದ ಒಟ್ಟು ಗರಿಷ್ಠ ವಾರ್ಷಿಕ ಆದಾಯ ಮಿತಿ ಪ್ರವರ್ಗ–1ಕ್ಕೆ ರೂ.2.50 ಲಕ್ಷಗಳು ಹಾಗೂ ಪ್ರವರ್ಗ 2(ಎ), 3(ಎ) ಮತ್ತು 3(ಬಿ) ಗಳಿಗೆ ರೂ. 1 ಲಕ್ಷಗಳಾಗಿರಬೇಕು. ಕನಿಷ್ಠ ವಿದ್ಯಾರ್ಹತೆ– ಅಭ್ಯರ್ಥಿಯು 10ನೇ ತರಗತಿ ಉತ್ತೀರ್ಣನಾಗಿದ್ದು ಪ್ರತಿ ವಿಷಯದಲ್ಲಿ ಕನಿಷ್ಠ 33 ಅಂಕಗಳು ಮತ್ತು ಸರಾಸರಿ ಶೇ.45ರಷ್ಟು ಅಂಕಗಳನ್ನು ಪಡೆದಿರಬೇಕು. ಗ್ರೇಡಿಂಗ್ ಸಿಸ್ಟಮ್ ಇದ್ದಲ್ಲಿ ಮೇಲ್ಕಂಡಂತೆ ಸಮಾನವಾದ ಗ್ರೇಡ್ ಪಡೆದಿರಬೇಕು.

ಅಭ್ಯರ್ಥಿಯ ವಯೋಮಿತಿ ಸೆಪ್ಟಂಬರ್ 1ಕ್ಕೆ 17 ರಿಂದ 20 ವರ್ಷದೊಳಗಿರಬೇಕು. ಅಭ್ಯರ್ಥಿಯು 2005ರ ಸೆಪ್ಟಂಬರ್ 1 ರಿಂದ 2008ರ ಸೆಪ್ಟಂಬರ್ 1 ನಡುವಿನ ಅವಧಿಯಲ್ಲಿ ಜನಿಸಿರಬೇಕು. ತರಬೇತಿಯನ್ನು ಕಲಬುರಗಿ ಜಿಲ್ಲೆ (ಕೇಂದ್ರ ಸ್ಥಳ)ಯಲ್ಲಿ ನೀಡಲಾಗುವುದು. ಈ ಜಿಲ್ಲೆಯ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿಗೆ ಸೆಪ್ಟಂಬರ್ 10 ರೊಳಗೆ ಅರ್ಜಿಯನ್ನು ಖುದ್ದಾಗಿ ಸಲ್ಲಿಸಬಹುದು ಅಥವಾ ನೋಂದಾಯಿತ ಅಂಚೆ ಮೂಲಕ ಕಳುಹಿಸಬಹುದು.

ಅರ್ಜಿ ನಮೂನೆಯನ್ನು ಕಲಬುರಗಿಯ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿಯಿಂದ ಪಡೆಯಬಹುದು. ಹೆಚ್ಚಿನ ಮಾಹಿತಿಗೆ ಸಹಾಯವಾಣಿ: 8105085410, 9148489157 ಸಂಖ್ಯೆಗಳಿಗೆ ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು.

## ದೀಕ್ಷಾ ಭೂಮಿ ಯಾತ್ರೆಗೆ ಬಸ್ ವ್ಯವಸ್ಥೆ

**ಚಿಕ್ಕಮಗಳೂರು, ಸೆ.3:** 2025–26ನೇ ಸಾಲಿನಲ್ಲಿ ಅಕ್ಟೋಬರ್ 2 (ವಿಜಯದಶಮಿ) ರಂದು ನಾಗಪುರ ದೀಕ್ಷಾಭೂಮಿಯಲ್ಲಿ ನಡೆಯುವ ದಮ್ಮ ಪ್ರವರ್ತನ ದಿನದ ಕಾರ್ಯಕ್ರಮಕ್ಕೆ ಸೆಪ್ಟಂಬರ್ 30 ರಿಂದ ಅಕ್ಟೋಬರ್ 4 ರವರೆಗೆ ಕರ್ನಾಟಕ ರಾಜ್ಯದಿಂದ ಡಾ.ಬಿ.ಆರ್.ಅಂಬೇಡ್ಕರ್ ಅನುಯಾಯಿಗಳನ್ನು ಸಮಾಜ ಕಲ್ಯಾಣ ಇಲಾಖಾ ವತಿಯಿಂದ ನಾಗಪುರ ದೀಕ್ಷಾಭೂಮಿಗೆ ಯಾತ್ರೆ ಕರೆದೊಯ್ಯಲು ಕ್ರಮ ಕೈಗೊಳ್ಳಲಾಗಿದೆ. ಸಾರಿಗೆ ವ್ಯವಸ್ಥೆ, ರೈಲು ಪ್ರಯಾಣದ ವ್ಯವಸ್ಥೆಯನ್ನು ಕಲ್ಪಿಸುವ ಯೋಜನೆಯಡಿ 2025–26ನೇ ಸಾಲಿನಲ್ಲಿ ಮಹಾರಾಷ್ಟ್ರದ ನಾಗಪುರದಲ್ಲಿನ ದೀಕ್ಷಾಭೂಮಿಗೆ ಭೇಟಿ ನೀಡಲಿರುವ ಯಾತ್ರಾರ್ಥಿಗಳಿಗೆ ಕೆ.ಎಸ್.ಆರ್.ಟಿ.ಸಿ. ರಾಜಹಂಸ ಬಸ್ಸುಗಳ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ.

# ಖಾಸಗಿ ಸಹಭಾಗಿತ್ವದಲ್ಲಿ ಮೈಸೂರು ಪೇಪರ್ ಮಿಲ್ಸ್ ಪುನರಾರಂಭಿಸಲು ಸರ್ಕಾರ ಮುಂದು

**ಶಿವಮೊಗ್ಗ:** ಭದ್ರಾವತಿಯಲ್ಲಿರುವ ಮೈಸೂರು ಪೇಪರ್ ಮಿಲ್ಸ್(MPM) ಅನ್ನು ಖಾಸಗಿ ಸಹ ಭಾಗಿತ್ವದಲ್ಲಿ ಪುನರಾರಂಭಿಸಲು ರಾಜ್ಯ ಸರ್ಕಾರ ಮುಂದಾಗಿದ್ದು, ಇದರ ಭಾಗವಾಗಿ ಒಕಿಒ, ಬೆಂಗಳೂರು ಮೂಲದ ಸಲಹಾ ಸಂಸ್ಥೆಯಾದ ಮೂಲಸೌಕರ್ಯ ಅಭಿವೃದ್ಧಿ ನಿಗಮ(ಕರ್ನಾಟಕ) ಲಿಮಿಟೆಡ್(iDeCK) ಅನ್ನು ತನ್ನ ವಹಿವಾಟು ಸಲಹೆಗಾರರಾಗಿ ಕಾರ್ಯನಿರ್ವಹಿಸುತ್ತಿದೆ.



ಇತ್ತೀಚೆಗೆ ವಿಧಾನಸಭೆಯಲ್ಲಿ ಭದ್ರಾವತಿ ಶಾಸಕ ಬಿ.ಕೆ. ಸಂಗಮೇಶ್ವರ ಅವರ ಪ್ರಶ್ನೆಗೆ ಉತ್ತರಿಸಿದ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ಅವರು, ಕಾರ್ಖಾನೆಯನ್ನು ಸ್ವಂತವಾಗಿ ಪುನರುಜ್ಜೀವನಗೊಳಿಸುವುದು ಕಾರ್ಯಸಾಧ್ಯವಲ್ಲ ಎಂದು ಸರ್ಕಾರ ತೀರ್ಮಾನಿಸಿದೆ. ಬದಲಾಗಿ, ಖಾಸಗಿ ಬಿಡ್ಡರ್‌ಗಳಿಗೆ ಗುತ್ತಿಗೆ ನೀಡುವ ಪ್ರಯತ್ನಗಳನ್ನು ಮಾಡಲಾಗುತ್ತಿದೆ, ವಿನಾಯಿತಿ ಮತ್ತು ಪರಿಹಾರ ಕ್ರಮಗಳನ್ನು ಪರಿಗಣಿಸಲಾಗುತ್ತಿದೆ ಎಂದು ತಿಳಿಸಿದ್ದರು.

"ನೀಲಗಿರಿ ಬೆಳೆಯಲು ವಿನಾಯಿತಿ ನೀಡಿದರೆ ಮತ್ತು ಹೊಣೆಗಾರಿಕೆಗಳಿಂದ ಮುಕ್ತರಾಗಿದ್ದರೆ, ನಿರೀಕ್ಷಿತ ಬಿಡ್ಡರ್‌ಗಳು ಕಾರ್ಖಾನೆಯನ್ನು ನಿರ್ವಹಿಸಲು ಆಸಕ್ತಿ ತೋರಿಸಿದ್ದಾರೆ. ನಿಯಮಗಳ ಪ್ರಕಾರ ಸರ್ಕಾರ ಈ ದಿಕ್ಕಿನಲ್ಲಿ ಕ್ರಮ ತೆಗೆದುಕೊಳ್ಳುತ್ತಿದೆ ಮತ್ತು ಪ್ರಕ್ರಿಯೆಯು ಅಂತಿಮಗೊಂಡ ನಂತರ ಕಾರ್ಖಾನೆಯನ್ನು ಪುನರಾರಂಭಿಸಬಹುದು" ಎಂದು ಪಾಟೀಲ್ ಹೇಳಿದರು.

ಈ ಹಂತಗಳ ಭಾಗವಾಗಿ, MPM ತನ್ನ ವಹಿವಾಟು ಸಲಹೆಗಾರರಾಗಿ iDeCK ಸೇವೆಗಳನ್ನು ಪಡೆದುಕೊಂಡಿದೆ. ಬಿಡ್ ತಯಾರಿಕೆ, ಮೌಲ್ಯಮಾಪನ ಮತ್ತು ಒಪ್ಪಂದಗಳ ಅಂತಿಮಗೊಳಿಸುವಿಕೆ ಸೇರಿದಂತೆ ಕಾರ್ಖಾನೆ ಕಾರ್ಯಾಚರಣೆಗಳನ್ನು ಖಾಸಗಿ ಸಂಸ್ಥೆಗೆ ಗುತ್ತಿಗೆ ನೀಡುವ ಪ್ರಕ್ರಿಯೆಯನ್ನು ಸಂಸ್ಥೆಯು ನಡೆಸುತ್ತಿದೆ ಎಂದರು.

ಎಂಪಿಎಂ ವ್ಯಾಪ್ತಿಯಲ್ಲಿ ಸುಮಾರು 23 ಸಾವಿರ ಹೆಕ್ಟೇರ್ ಅರಣ್ಯ ಮತ್ತು ಅರಣ್ಯೇತರ ಭೂಮಿ ಇದ್ದು ಇಲ್ಲಿ ಸದ್ಯಕ್ಕೆ ಅಕೇಶಿಯಾ, ನೀಲಗಿರಿ ಮತ್ತು ಬಿದಿರನ್ನು ಬೆಳೆಯಲಾಗುತ್ತಿದೆ. ಒಂದು ವೇಳೆ ಕಾರ್ಖಾನೆಯನ್ನು ಗುತ್ತಿಗೆ ನೀಡಿದರೂ, ಕಾರ್ಖಾನೆ ಜಾಗದಲ್ಲಿ, ನಿಷೇಧಿಸಿರುವ ನೀಲಗಿರಿ ಬೆಳೆಯಲು ಅವಕಾಶ ನೀಡಬಹುದೇ ಎಂಬುದನ್ನೂ ಕೂಲಂಕುಶವಾಗಿ ಪರಿಶೀಲಿಸಬೇಕು ಎಂದು ಸಚಿವರು ವಿವರಿಸಿದರು.

## ನೋ ಪಾರ್ಕಿಂಗ್‌ನಲ್ಲಿ ಪೊಲೀಸ್ ಜೀಪ್: ದಂಡ ಕಟ್ಟಿದ ಪೊಲೀಸ್

**ಚಿಕ್ಕಮಗಳೂರು:** ಸಾರ್ವಜನಿಕರಿಗೆ ಮಾತ್ರವಲ್ಲ, ಕಾನೂನು ಪಾಲಕರಿಗೂ ಕಾನೂನು ಒಂದೇ ಎಂದು ಸಾಬೀತುಪಡಿಸಿದ ಘಟನೆಯೊಂದು ಚಿಕ್ಕಮಗಳೂರು ಜಿಲ್ಲೆಯ ಕೊಪ್ಪ ಪಟ್ಟಣದಲ್ಲಿ ನಡೆದಿದೆ.



ಇಲ್ಲಿನ ಪೊಲೀಸ್ ಅಧಿಕಾರಿಗಳು ನೋ ಪಾರ್ಕಿಂಗ್ ವಲಯದಲ್ಲಿ ನಿಲ್ಲಿಸಿದ್ದ ತಮ್ಮ ಹಿರಿಯ ಅಧಿಕಾರಿಯ ವಾಹನಕ್ಕೆ ದಂಡ ವಿಧಿಸಿ, ಸ್ಥಳೀಯರಿಂದ ಮೆಚ್ಚುಗೆ ಗಳಿಸಿದ್ದಾರೆ.

**ಘಟನೆ ವಿವರಣೆ:** ಎನ್.ಆರ್. ಪುರ ತಾಲೂಕಿನ ಪೊಲೀಸ್ ಇನ್ಸ್‌ಪೆಕ್ಟರ್ (ಸಿಪಿಐ) ಅವರ ಜೀಪ್ ಕೊಪ್ಪ ಪಟ್ಟಣದ ನೋ ಪಾರ್ಕಿಂಗ್ ಪ್ರದೇಶದಲ್ಲಿ ನಿಲ್ಲಿಸಲಾಗಿತ್ತು. ಕರ್ತವ್ಯ ನಿರತರಾಗಿದ್ದ ಕೊಪ್ಪ ಪೊಲೀಸ್ ಠಾಣೆಯ ಸಬ್ ಇನ್ಸ್‌ಪೆಕ್ಟರ್ (ಪಿಎಸ್‌ಐ) ಬಸವರಾಜ್ ಅವರು ಈ ಜೀಪನ್ನು ಗಮನಿಸಿ, ತಕ್ಷಣವೇ ಅದನ್ನು ಲಾಕ್ ಮಾಡಿಸಿದ್ದಾರೆ. ನಿಯಮಗಳ ಪ್ರಕಾರ, ವಾಹನ ನಿಲ್ಲಿಸಬಾರದ ಜಾಗದಲ್ಲಿ ನಿಲ್ಲಿಸಿದ ಕಾರಣ ಜೀಪ್‌ಗೆ ರೂ. 500 ದಂಡ ವಿಧಿಸಲಾಗಿದೆ.

ನಂತರ, ಚಾಲಕ ರೂ. 500 ದಂಡವನ್ನು ಕಟ್ಟಿ ಜೀಪನ್ನು ಬಿಡಿಸಿಕೊಂಡು ಹೋಗಿದ್ದಾರೆ. ಈ ಘಟನೆ ಸ್ಥಳೀಯರ ಗಮನ ಸೆಳೆದಿದ್ದು, ಪಿಎಸ್‌ಐ ಬಸವರಾಜ್ ಅವರ ನಿಷ್ಪಕ್ಷಪಾತ ಕಾರ್ಯಕ್ಕೆ ಭಾರೀ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಯಾವುದೇ ಪ್ರಭಾವಕ್ಕೆ ಒಳಗಾಗದೆ, ತಮ್ಮ ಹಿರಿಯ ಅಧಿಕಾರಿಯ ವಾಹನಕ್ಕೂ ದಂಡ ವಿಧಿಸಿದ ಪಿಎಸ್‌ಐ ಕಾರ್ಯ ಕಾನೂನು ಎಲ್ಲರಿಗೂ ಒಂದೇ ಎಂಬ ಸಂದೇಶವನ್ನು ರವಾನಿಸಿದೆ. ಇಂತಹ ಪ್ರಾಮಾಣಿಕ ಮತ್ತು ನಿಷ್ಪಕ್ಷಪಾತ ಕಾರ್ಯಗಳು ಸಾರ್ವಜನಿಕರಲ್ಲಿ ಪೊಲೀಸರ ಬಗ್ಗೆ ವಿಶ್ವಾಸ ಹೆಚ್ಚಿಸಲು ಸಹಾಯ ಮಾಡುತ್ತವೆ ಎಂದು ಸ್ಥಳೀಯರು ಅಭಿಪ್ರಾಯಪಟ್ಟಿದ್ದಾರೆ. ಈ ಘಟನೆ ಈಗ ಸಾಮಾಜಿಕ ಜಾಲತಾಣಗಳಲ್ಲಿಯೂ ವೈರಲ್ ಆಗಿದ್ದು, ಪಿಎಸ್‌ಐ ಬಸವರಾಜ್ ಅವರ ಕಾರ್ಯವೈಖರಿಗೆ ಸಾರ್ವಜನಿಕರು ಶ್ಲಾಘನೆ ವ್ಯಕ್ತಪಡಿಸುತ್ತಿದ್ದಾರೆ.

### ಪಾಕಿಸ್ತಾನಕ್ಕೆ ಭಾರತದಿಂದ ಹೊಸ ಎಚ್ಚರಿಕೆ:

# ತಾವಿ ನದಿಯಿಂದ ಪ್ರವಾಹ ಸಾಧ್ಯತೆ

ತಾವಿ ನದಿಯಲ್ಲಿ ಪ್ರವಾಹ ಉಂಟಾಗುವ ಸಾಧ್ಯತೆ ಹೆಚ್ಚಿದ್ದು, ಉತ್ತರ ರಾಜ್ಯಗಳಲ್ಲಿ ನಿರಂತರ ಮಳೆಯಾಗುತ್ತಿರುವುದರಿಂದ ಪ್ರಮುಖ ಅಣೆಕಟ್ಟುಗಳಿಂದ ಹೆಚ್ಚುವರಿ ನೀರನ್ನು ಬಿಡುಗಡೆ ಮಾಡಲಾಗುತ್ತಿದೆ ಎಂದು ಭಾರತ ಪಾಕಿಸ್ತಾನಕ್ಕೆ ಹೊಸ ಎಚ್ಚರಿಕೆ ನೀಡಿದೆ.



ವಿದೇಶಾಂಗ ಸಚಿವಾಲಯದ ಮೂಲಕ ಪಾಕಿಸ್ತಾನಕ್ಕೆ ಕಳುಹಿಸಲಾದ ಎಚ್ಚರಿಕೆಗಳನ್ನು ಮಾನವೀಯ ಆಧಾರದ ಮೇಲೆ ನೀಡಲಾಗಿದೆ ಎಂದು ಮೂಲಗಳು ತಿಳಿಸಿವೆ. ಮೊದಲ ಬಾರಿಗೆ ಎಚ್ಚರಿಕೆಯನ್ನು ಈಗಾಗಲೇ ನೀಡಲಾಗಿದೆ.

ತಾವಿ ನದಿಯಲ್ಲಿ ಪ್ರವಾಹ ಉಂಟಾಗುವ ಸಾಧ್ಯತೆ ಹೆಚ್ಚಿದೆ ಎಂದು ನಾವು ನಿನ್ನೆ ಮತ್ತು ಇಂದು ಮತ್ತೊಂದು ಎಚ್ಚರಿಕೆಯನ್ನು ನೀಡಿದ್ದೇವೆ. ಭಾರತೀಯ ಪ್ರದೇಶಗಳಲ್ಲಿ ಅತಿಯಾದ ಮಳೆಯಾಗುತ್ತಿರುವುದರಿಂದ ಕೆಲವು ಅಣೆಕಟ್ಟುಗಳ ದ್ವಾರಗಳನ್ನು ತೆರೆಯಬೇಕಾಯಿತು ಎಂದು ಮೂಲಗಳು ತಿಳಿಸಿವೆ.

ತಾವಿ ನದಿ ಹಿಮಾಲಯದಲ್ಲಿ ಹುಟ್ಟಿ ಜಮ್ಮು ವಿಭಾಗದ ಮೂಲಕ ಹಾದುಹೋಗಿ ಪಾಕಿಸ್ತಾನದ ಚೆನಾಬ್‌ಗೆ ಸೇರುತ್ತದೆ.

ಏಪ್ರಿಲ್ 22 ರಂದು ಪಾಕಿಸ್ತಾನ ಭಯೋತ್ಪಾದಕರು ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ 26 ಜನರು, ಹೆಚ್ಚಾಗಿ ಪ್ರವಾಸಿಗರು ಮೃತಪಟ್ಟ ನಂತರ, ಸಿಂಧೂ ಜಲ ಒಪ್ಪಂದದಡಿಯಲ್ಲಿ ಪಾಕಿಸ್ತಾನದೊಂದಿಗೆ ನಿಯಮಿತ ಜಲವಿಜ್ಞಾನ ದತ್ತಾಂಶ ವಿನಿಮಯವನ್ನು ಭಾರತ ಸ್ಥಗಿತಗೊಳಿಸಿತು.

ಗಡಿಯುದ್ದಕ್ಕೂ ಜೀವ ಮತ್ತು ಆಸ್ತಿಪಾಸ್ತಿ ನಷ್ಟವನ್ನು ತಪ್ಪಿಸಲು ಹೊಸ ಪ್ರವಾಹ ಎಚ್ಚರಿಕೆಗಳನ್ನು ತಿಳಿಸಲಾಗಿದೆ ಎಂದು ಮೂಲಗಳು ತಿಳಿಸಿವೆ.

ಪಂಜಾಬ್‌ನಲ್ಲಿ, ಸಟ್ಲೆಜ್, ಬಿಯಾಸ್ ಮತ್ತು ರಾವಿ ನದಿಗಳು ಅವುಗಳ ಜಲಾನಯನ ಪ್ರದೇಶಗಳಲ್ಲಿ ಭಾರೀ ಮಳೆಯಿಂದಾಗಿ ಉಕ್ಕಿ ಹರಿಯುತ್ತಿವೆ. ಜಮ್ಮು ಕೂಡ ನಿರಂತರ ಮಳೆಯಿಂದ ಮುಳುಗಿದೆ, ಇದರಿಂದಾಗಿ ನದಿಗಳು ಉಕ್ಕಿ ಹರಿಯುತ್ತಿವೆ.

ನೀರಿನ ಮಟ್ಟ ಅಪಾಯಕಾರಿಯಾಗಿ ಏರುತ್ತಿರುವುದರಿಂದ, ಪ್ರಮುಖ ಜಲಾಶಯಗಳ ತೂಬುಗಳನ್ನು ತೆರೆಯುವುದನ್ನು ಬಿಟ್ಟು ಅಧಿಕಾರಿಗಳಿಗೆ ಬೇರೆ ದಾರಿಯಿಲ್ಲ ಎಂದು ಮೂಲಗಳು ತಿಳಿಸಿವೆ.

1960 ರಲ್ಲಿ ಸಹಿ ಹಾಕಲಾದ ವಿಶ್ವಬ್ಯಾಂಕ್ ಮಧ್ಯಸ್ಥಿಕೆ ವಹಿಸಿದ ಸಿಂಧೂ ಜಲ ಒಪ್ಪಂದವು ಭಾರತ ಮತ್ತು ಪಾಕಿಸ್ತಾನದ ನಡುವಿನ ನದಿ ನೀರಿನ ಹಂಚಿಕೆಯನ್ನು ದೀರ್ಘಕಾಲದಿಂದ ನಿಯಂತ್ರಿಸುತ್ತಿದೆ.

## ವಕ್ಫ್ ಸಂಸ್ಥೆಯ ಆಡಳಿತ ಮಂಡಳಿ ಸಭೆಯಲ್ಲಿ ದಾಂಧಲೆ : ಕ್ರಮಕ್ಕೆ ಮನವಿ

**ಚಿಕ್ಕಮಗಳೂರು :** ನಗರದ ಮುಸ್ಲಿಂ ಹಾಸ್ಟೆಲ್ ವಕ್ಫ್ ಸಂಸ್ಥೆಯ ಆಡಳಿತ ಮಂಡಳಿ ಸಭೆಯಲ್ಲಿ ಶಾಂತಿಭಂಗ ಹಾಗೂ ಹಲ್ಲೆಗೆ ಮುಂದಾಗಿರುವ ವ್ಯಕ್ತಿಗಳ ವಿರುದ್ಧ ತನಿಖೆ ನಡೆಸಿ ಶಾಂತಿ ಕಾಪಾಡ ಬೇಕು ಎಂದು ಮುಸ್ಲೀಂ ಹಾಸ್ಟೆಲ್ ವಕ್ಫ್ ಸಂಸ್ಥೆ ನೊಂದಾಯಿತ ಸದಸ್ಯರು ಬುಧವಾರ ಜಿಲ್ಲಾಧಿಕಾರಿ ಸಿ.ಎನ್. ಮೀನಾ ನಾಗರಾಜ್ ಅವರಿಗೆ ಮನವಿ ಸಲ್ಲಿಸಿದರು.

ಈ ಕುರಿತು ಸದಸ್ಯರುಗಳು ಮಾತನಾಡಿ ಬೇಲೂರು ರಸ್ತೆಯಲ್ಲಿರುವ ಮುಸ್ಲಿಂ ಹಾಸ್ಟೆಲ್ ವಕ್ಫ್ ಸಂಸ್ಥೆಯ ಆಡಳಿತ ಸಮಿತಿಯ ಆಯ್ಕೆ ಪ್ರಕ್ರಿಯೆಯ ಮಹಾಸಭೆ ಮಂಗಳವಾರ ಕರೆಯಲಾಗಿತ್ತು. ಈ ಸಭೆಯಲ್ಲಿ 506 ಜನರ ಸದಸ್ಯರ ಪೈಕಿ ಸುಮಾರು 400 ಸದಸ್ಯರು ತಮ್ಮ ಗುರುತಿನ ಚೀಟಿಯನ್ನು ನೋಂದಾಯಿಸಿ ಭಾಗವಹಿ ಸಿದ್ದರು ಎಂದರು.

ಶಾಂತಿಪೂರಕವಾಗಿ ಪ್ರಾರಂಭವಾದ ಆಯ್ಕೆ ಪ್ರಕ್ರಿಯೆಯ ಸಮಯದಲ್ಲಿ 5 ಜನರ ತಂಡ ಉದ್ದೇಶ ಪೂರಕವಾಗಿ ಗೊಂದಲ ಸೃಷ್ಟಿಸಿ ದಾಂದಲೆ ನಡೆಸಿ ಶಾಂತಿಭಂಗ ನಡೆಸಿ, ಹಲ್ಲೆಗೆ ಮುಂದಾಗುವ ಜೊತೆಗೆ ಗುಂಪು ಘರ್ಷಣೆಗೆ ಕಾರಣಕರ್ತರಾಗಿದ್ದಾರೆ ಎಂದು ದೂರಿದರು.

# ಪ್ರಧಾನಿ ನರೇಂದ್ರ ಮೋದಿ ತಾಯಿಗೆ ನಿಂದನೆ ಖಂಡಿಸಿ ಇಂದು ಬಿಹಾರ ಬಂದ್

**ಪಾಟ್ನಾ, ಸೆ.3–** ಬಿಹಾರದಲ್ಲಿ ನಡೆದ ಜಂಟಿ ಕಾರ್ಯಕ್ರಮದಲ್ಲಿ ಪ್ರಧಾನಿ ನರೇಂದ್ರ ಮೋದಿ ಮತ್ತು ಅವರ ದಿವಂಗತ ತಾಯಿಯ ವಿರುದ್ಧ ಅವಾಚ್ಯ ಶಬ್ದಗಳಿಂದ ನಿಂದಿಸಲಾದ ವಿರೋಧ ಪಕ್ಷಗಳ ವಿರುದ್ಧ ನಾಳೆ ಬಿಹಾರ ಬಂದ್‌ಗೆ ಎನ್‌ಡಿಎ ಕರೆ ನೀಡಿದೆ.

ಬಿಜೆಪಿಯ ಬಿಹಾರ ರಾಜ್ಯ ಅಧ್ಯಕ್ಷ ದಿಲೀಪ್ ಜೈಸ್ವಾಲ್ ಅವರು ಇಂದು ಬೆಳಿಗ್ಗೆ 7:00 ರಿಂದ ಮಧ್ಯಾಹ್ನ 12 ಗಂಟೆಯವರೆಗೆ ಐದು ಗಂಟೆಗಳ ಬಂದ್ ಆಚರಿಸಲಾಗುವುದು ಎಂದು ಹೇಳಿದರು. ಆದಾಗ್ಯೂ, ತುರ್ತು ಸೌಲಭ್ಯಗಳು ಮತ್ತು ರೈಲು ಕಾರ್ಯಾಚರಣೆಗಳು ಸೇರಿದಂತೆ ಅಗತ್ಯ ಸೇವೆಗಳು ಬಂದ್ ಸಮಯದಲ್ಲಿ ಯಾವುದೇ ಪರಿಣಾಮ ಬೀರುವುದಿಲ್ಲ ಎಂದಿದ್ದಾರೆ. ಅಲ್ಲದೆ, ಬಿಜೆಪಿ ಮಹಿಳಾ ಮೋರ್ಚಾ ಪ್ರತಿಭಟನೆಯ ನೇತೃತ್ವ ವಹಿಸಲಿದೆ. ಕಳೆದ ವಾರ ದರ್ಭಂಗಾದಲ್ಲಿ ಮತದಾರರ ಅಧಿಕಾರ ಯಾತ್ರೆಯ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಮತ್ತು ಅವರ ತಾಯಿಯ ವಿರುದ್ಧ ಕಾಂಗ್ರೆಸ್ ಕಾರ್ಯಕರ್ತರು ಮಾಡಿದ ಆಕ್ಷೇಪಾರ್ಹ ಹೇಳಿಕೆಗಳನ್ನು ವಿರೋಧಿಸಿ ರಾಜ್ಯಾದ್ಯಂತ ಬಂದ್ ನಡೆಸಲಾಗುತ್ತಿದೆ.

# ವಿದ್ಯಾರ್ಥಿಗಳು ಕ್ರೀಡಾಕೂಟದಲ್ಲಿ ಭಾಗವಹಿಸಿದಾಗ ಆತ್ಮವಿಶ್ವಾಸ ಹೆಚ್ಚುತ್ತದೆ : ಶಾಸಕ ಹೆಚ್.ಡಿ. ತಮ್ಮಯ್ಯ

**ಚಿಕ್ಕಮಗಳೂರು–**ವಿದ್ಯಾರ್ಥಿಗಳು ಸಾಮೂಹಿಕವಾಗಿ ಕ್ರೀಡಾಕೂಟಗಳಲ್ಲಿ ಭಾಗವಹಿಸಿದಾಗ ಆರೋಗ್ಯ, ದೈಹಿಕ, ಮಾನಸಿಕ, ಶಾಂತಿ, ಶಿಸ್ತು, ಸಹನೆ, ಆತ್ಮವಿಶ್ವಾಸ ಮೂಡಲು ಸಹಕಾರಿಯಾಗಲಿದೆ ಎಂದು ಶಾಸಕ ಹೆಚ್.ಡಿ. ತಮ್ಮಯ್ಯ ಅಭಿಪ್ರಾಯಿಸಿದರು.



ಅವರು ಇಂದು ನಗರದ ನೇತಾಜಿ ಸುಭಾಷ್ ಚಂದ್ರಬೋಸ್ ಜಿಲ್ಲಾ ಆಟದ ಮೈದಾನದಲ್ಲಿ ತಾ.ಪಂ, ಜಿ.ಪಂ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಜಾಗರ ಹೋಬಳಿ ವಲಯಮಟ್ಟದ ಕ್ರೀಡಾಕೂಟ 2025–26 ಅತಿಥೇಯ ಶಾಲೆ, ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ತೊಗರಿಹಂಕಲ್ ಹೊಸಪೇಟೆ ಇವರುಗಳ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಕ್ರೀಡಾಕೂಟವನ್ನು ಉದ್ಘಾಟಿಸಿ ಮಾತನಾಡಿದರು.

ಶಿಕ್ಷಣದ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲಿ ಕ್ರೀಡೆಯ ಎಲ್ಲಾ ವಿಭಾಗದಲ್ಲಿಯೂ ಸ್ಪರ್ಧೆ ಮಾಡುವುದರ ಮೂಲಕ ಜಿಲ್ಲೆ, ರಾಜ್ಯ, ರಾಷ್ಟ್ರಮಟ್ಟಕ್ಕೆ ಆಯ್ಕೆಯಾಗಿ ಅಂತರಾಷ್ಟ್ರೀಯ ಕ್ರೀಡಾಪಟುಗಳಾಗಿ ಎಂದು ಶುಭ ಹಾರೈಸಿದರು.

ಸಾರ್ವಜನಿಕ ಸಹಭಾಗಿತ್ವದಲ್ಲಿ ಸರ್ಕಾರಿ ಕಾರ್ಯಕ್ರಮಗಳು ನಡೆದರೆ ಅವು ಯಶಸ್ವಿಯಾಗಲು ಸಾಧ್ಯ. ಮುಂದಿನ ದಿನಗಳಲ್ಲಿ ಸರ್ಕಾರದಿಂದ ಕ್ರೀಡಾಕೂಟಗಳಿಗೆ ಹೆಚ್ಚಿನ ಅನುದಾನ ಕೊಡಿಸುವ ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಭರವಸೆ ನೀಡಿದರು.

ವಿದ್ಯಾರ್ಥಿಗಳು ಸರ್ಕಾರಿ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿದ್ದೇನೆ ಎಂಬ ಕೀಳರಿಮೆ ಬೇಡ, ಮುರಾರ್ಜಿ ವಸತಿ ಶಾಲೆಯಲ್ಲಿ ಓದಿದ ವಿದ್ಯಾರ್ಥಿನಿಯೊಬ್ಬಳು ರಾಜ್ಯಕ್ಕೆ ಪ್ರಥಮ ಸ್ಥಾನದಲ್ಲಿ ತೇರ್ಗಡೆಯಾಗಿದ್ದಾಳೆ ಎಂಬುದನ್ನು ಅರಿಯಬೇಕಾಗಿದೆ ಎಂದರು.

ವಿದ್ಯಾರ್ಥಿನಿಯರಿಗೆ ಜಿಲ್ಲಾಧಿಕಾರಿ ಮೀನಾನಾಗರಾಜ್, ಜಿ.ಪಂ ಸಿಇಓ ಹೆಚ್.ಎಸ್. ಕೀರ್ತನ ಮಾದರಿಯಾಗಬೇಕು. ವಿದ್ಯಾರ್ಥಿಗಳಿಗೆ ಅಪರ ಜಿಲ್ಲಾಧಿಕಾರಿ ನಾರಾಯಣ ಕನಕರಡ್ಡಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ವಿಕ್ರಮ ಅಮಟೆ ಇವರುಗಳು ಸರ್ಕಾರಿ ಶಾಲೆಯಲ್ಲಿ ವ್ಯಾಸಂಗ ಮಾಡಿ ಉನ್ನತ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವುದು ಮಾದರಿಯಾಗಬೇಕು ಎಂದು ಕಿವಿಮಾತು ಹೇಳಿದರು.

ಶೋಷಿತರು ಮತ್ತು ಬಡ ಕುಟುಂಬದ ವಿದ್ಯಾರ್ಥಿಗಳ ಆರೋಗ್ಯ ಕಾಪಾಡುವುದು, ಶಿಕ್ಷಣ ನೀಡುವುದು ಸರ್ಕಾರ ಮತ್ತು ಜನಪ್ರತಿನಿಧಿಗಳ ಆದ್ಯ ಕರ್ತವ್ಯವಾಗಿದೆ. ಮುಂದಿನ ತಾಲ್ಲೂಕು, ಜಿಲ್ಲಾಮಟ್ಟದ ಕ್ರೀಡಾಕೂಟ ನಡೆಸುವ ಸಂದರ್ಭದಲ್ಲಿ ಕ್ರೀಡಾಂಗಣ ಕೆಸರು ಆಗದ ರೀತಿ ಕ್ರಮವಹಿಸಬೇಕೆಂದು ಅಧಿಕಾರಿಗಳಿಗೆ ಸೂಚನೆ ನೀಡಿರುವುದಾಗಿ ತಿಳಿಸಿದರು.

ಜಿ.ಪಂ ಮಾಜಿ ಸದಸ್ಯೆ ಜೆಸಂತಾ ಅನಿಲ್‌ಕುಮಾರ್ ಮಾತನಾಡಿ, ಮಕ್ಕಳಲ್ಲಿ ಕಾಣುವ ಪ್ರೀತಿ ಎಲ್ಲೂ ಕಾಣಲು ಸಾಧ್ಯವಿಲ್ಲ. ನನಗೆ ಇದು ಅಪೂರ್ವವಾದ ಅವಕಾಶ. ಮುಂದೆ ಜಿಲ್ಲಾ ಪಂಚಾಯಿತಿ ಸದಸ್ಯರಾಗಿ ಆಯ್ಕೆಯಾದರೆ ಶಿಕ್ಷಕರು ಮತ್ತು ವಿದ್ಯಾರ್ಥಿಗಳ ಸಮಸ್ಯೆಗೆ ಸ್ಪಂದಿಸಿ ಕೆಲಸ ಮಾಡುತ್ತೇನೆಂದು ಭರವಸೆ ನೀಡಿದರು.

ಗ್ರಾ.ಪಂ ಅಧ್ಯಕ್ಷರು ಮತ್ತು ಸದಸ್ಯರು ತಮ್ಮ ಅತಿಥೇಯ ತಂಡಗಳಿಗೆ ಕೈಲಾದ ಧನಸಹಾಯ ಮಾಡಿ ಪ್ರೋತ್ಸಾಹಿಸುವಂತೆ ಮನವಿ ಮಾಡಿದ ಅವರು, ವಿದ್ಯಾರ್ಥಿಗಳು ಕ್ರೀಡಾ ಮನೋಭಾವದಿಂದ ಸ್ಪರ್ಧೆ ಮಾಡಿ ಎಂದು ಶುಭ ಹಾರೈಸಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ರುದ್ರಪ್ಪ ಪ್ರಾಸ್ತಾವಿಕವಾಗಿ ಮಾತನಾಡಿ, ಕ್ರೀಡೆ ಜೀವನದ ಅವಿಭಾಜ್ಯ ಅಂಗವಾಗಿದ್ದು, ಎಲ್ಲರೂ ಕ್ರೀಡಾ ಮನೋಭಾವದಿಂದ ಭಾಗವಹಿಸಿದಾಗ ಎಂತಹ ಸಂದಿಗ್ಧ ಪರಿಸ್ಥಿತಿಯನ್ನು ಎದುರಿಸಲು ಸಹಕಾರಿಯಾಗುತ್ತದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ತಾಲ್ಲೂಕು ದೈಹಿಕ ಶಿಕ್ಷಣ ಪರಿವೀಕ್ಷಕ ಮಹೇಶ್, ಕೃಷ್ಣಮೂರ್ತಿ ಅರಸು, ವೀರೇಶ್, ಜಾನಕಮ್ಮ, ಜಗದೀಶ್, ಪ್ರಾಥಮಿಕ ಕಾರ್ಯದರ್ಶಿ ಪರಮೇಶ್, ಶಿವಪ್ಪ, ಕುಮಾರ ಸ್ವಾಮಿ, ಅನಿಲ್ ಕುಮಾರ್, ಅಜ್ಜಯ್ಯ, ದಾವೂದ್, ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ನೀಲಕಂಠಪ್ಪ, ಮೂಡಲಗಿರಿಯಪ್ಪ, ಗ್ರಾಪಂ ಸುರೇಶ್, ರತ್ನ ಉಪಸ್ಥಿತರಿದ್ದರು. ಮುಖ್ಯ ಶಿಕ್ಷಕಿ ಹೇಮಲತಾ ಸ್ವಾಗತಿಸಿದರು.

Published and Owned by : **PRATHIBHA M.S.**, Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**